ಸಂಪುಟ: 14 Volume | ಸಂಚಿಕೆ: 42 Issue | ಪುಟಗಳು 08 Pages | ಸೋಮವಾರ 18 ಮೇ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಗಟ್ಟಿಯಾವುದು, ಜಳ್ಳುಯಾವುದು ಎಂಬುದನ್ನು ತಿಳಿದು ಶಾಶ್ವತವಾದ ಸತ್ಯವನ್ನು ಹುಡುಕುವುದು ನಮ್ಮ ಧರ್ಮವಾಗಬೇಕು.

–ಬಿ.ಎಂ.ಶ್ರೀ



ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಅವರಿಂದು ಮಂಗಳೂರಿನ ಕದ್ರಿ ಉದ್ಯಾನದಲ್ಲಿ ಗೇರು ಮೇಳಕ್ಕೆ ಚಾಲನೆ ನೀಡಿದರು. ಸಫಾರಿ ವಾಹನಕ್ಕೆ ಹಸಿರು ನಿಶಾನೆ ತೋರಿಸಿ, ಸ್ಥಳದಲ್ಲೆ ಚಿತ್ರಬರೆದ ಚಿಣ್ಣರನ್ನು ಅಭಿನಂದಿಸಿದರು.

## ಉಚಿತ ವಸತಿ ಶಾಲೆ ಪ್ರಾರಂಭ



**ಭಾಲ್ಕಿ:** ಇಲ್ಲಿಯ ಹಿರೇಮಠ ಸಂಸ್ಥಾನದ ವತಿಯಿಂದ ಪ್ರಸ್ತುತ 2026–27ನೇ ಸಾಲಿನ ಶೈಕ್ಷಣಿಕ ವರ್ಷದಿಂದ ಭಾಲ್ಕಿ ಹಿರೇಮಠ ಉಚಿತ ವಸತಿ ಶಾಲೆ ಪ್ರಾರಂಭಿಸಲಾಗುತ್ತಿದೆ. 1 ರಿಂದ 10ನೇ ತರಗತಿ ವರೆಗೆ ಕನ್ನಡ ಮಾಧ್ಯಮದಲ್ಲಿ ಬಾಲಕರಿಗೆ ಮಾತ್ರ ಶಿಕ್ಷಣ ನೀಡಲಾಗುತ್ತಿದ್ದು, ಈ ಶೈಕ್ಷಣಿಕ ವರ್ಷದಿಂದಲೇ ಪ್ರತಿವರ್ಷ 25 ಮಕ್ಕಳಿಗೆ ಉಚಿತ ಶಿಕ್ಷಣ, ಊಟ, ವಸತಿ ನೀಡಲು ನಿರ್ಧರಿಸಲಾಗಿದೆ. ಈ ಶಾಲೆಯಲ್ಲಿ ಆಯ್ಕೆ ಮಾಡುವ ಮಕ್ಕಳಿಗೆ ಮೇರಿಟ್ ನೋಡಲಾಗುವುದಿಲ್ಲ. ಬದಲಾಗಿ ತಂದೆ–ತಾಯಿ ಇಲ್ಲದ ನಿರ್ಗತಿಕ, ನಿರಾಶ್ರಿತ ಮಕ್ಕಳಿಗೆ ಮೊದಲ ಆದ್ಯತೆ ನೀಡಲಾಗುತ್ತದೆ. ಕರ್ನಾಟಕ ಸರಕಾರದ ಪಠ್ಯಕ್ರಮದಂತೆ ಕನ್ನಡ ಮಾಧ್ಯಮದಲ್ಲಿ ಶಿಕ್ಷಣ ನೀಡಲಾಗುತ್ತದೆ. ಶಿಕ್ಷಣದ ಜತೆಗೆ ಶರಣ ಸಂಸ್ಕೃತಿ ಶರಣ ಸಂಸ್ಕಾರ ಕಲಿಸಿ ಕೊಡಲಾಗುತ್ತದೆ. ಇದೇ ಮೇ 31 ರಂದು ಆಯ್ಕೆ ಪ್ರಕ್ರಿಯೆ ನಡೆಯಲಿದೆ. 1 ತರಗತಿಗೆ ಪ್ರವೇಶ ಪಡೆಯುವ ಮಗು ಸರಕಾರದ ನಿಯಮದಂತೆ 6 ವರ್ಷ ತುಂಬಿರಬೇಕು. ಸಂಸ್ಥೆಯ ನಿಯಮಗಳಿಗೆ ಪಾಲಕರು ಬದ್ಧರಾಗಿರಬೇಕು. ಮಕ್ಕಳಿಗೆ ಸಮವಸ್ತ್ರ, ಪಠ್ಯಪುಸ್ತಕ, ನೋಟ್‌ಬುಕ್‌ಗಳನ್ನು ಪಾಲಕರು ನೀಡಬೇಕು. ಇದರಲ್ಲಿ ಆಯ್ಕೆ ಸಮಿತಿಯ ನಿರ್ಣಯವೇ ಅಂತಿಮವಾಗಿರುತ್ತದೆ. ಯಾವುದೇ ಶಿಫಾರಸ್ಸಿಗೆ ಅವಕಾಶ ಇರುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಹಿರೇಮಠ ಸಂಸ್ಥಾನದ ವ್ಯವಸ್ಥಾಪಕ ಶಾಂತಯ್ಯ ಸ್ವಾಮಿ ಅವರ ಮೊ: 9353298671 ಸಂಪರ್ಕಿಸಲು ಶ್ರೀಮಠದ ಮೂಲಕ ತಿಳಿಸಲಾಗಿದೆ.



ಬೆಂಗಳೂರು ದಕ್ಷಿಣ ಜಿಲ್ಲೆ ಬಿಡದಿ ತಾಲೂಕಿನ ಭೈರಮಂಗಲ, ಕಂಚುಗಾರನಹಳ್ಳಿ ಗ್ರಾಮ ಪಂಚಾಯಿತಿಗಳ ರೈತರ ಭೂ ಹಿತರಕ್ಷಣಾ ಸಮಿತಿ ಪ್ರತಿನಿಧಿಗಳು ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆಗಿರುವ ಡಿಸಿಎಂ ಡಿ ಕೆ ಶಿವಕುಮಾರ್ ಅವರ ಜತೆ ಬೆಂಗಳೂರಿನಲ್ಲಿ ಭಾನುವಾರ ಸಮಾಲೋಚನೆ ನಡೆಸಿದರು. ತಮ್ಮ ಅಹವಾಲು ಸಲ್ಲಿಸಿದರು. ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ಕಾನೂನು ಚೌಕಟ್ಟಿನೊಳಗೆ ಸೂಕ್ತ ನಿರ್ದೇಶನ ನೀಡುವುದಾಗಿ ಡಿಸಿಎಂ ಅವರು ಭರವಸೆ ನೀಡಿದರು.

## ಬ್ಯಾಡ್ಮಿಂಟನ್ ಪಂದ್ಯಾವಳಿಗೆ ಭವ್ಯ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ



ನಗರದ ಡಾ. ಬಿ.ಆರ್. ಅಂಬೇಡ್ಕರ್ ಒಳಾಂಗಣ ಹಾಗೂ ಐಆಇ ಒಳಾಂಗ ಕ್ರೀಡಾಂಗಣದಲ್ಲಿ ಇಂದಿನಿಂದ ಮೇ 23ರವರೆಗೆ ರಾಜ್ಯ ಮಟ್ಟದ ಬ್ಯಾಡ್ಮಿಂಟನ್ ಪಂದ್ಯಾವಳಿ ಆಯೋಜಿಸಲಾಗಿದ್ದು, ಇಂದು ಈ ಕ್ರೀಡೋತ್ಸವಕ್ಕೆ ಉಸ್ತುವಾರಿ ಸಚಿವ ಎಂ ಬಿ.ಪಾಟೀಲ್ ಭವ್ಯ ಚಾಲನೆ ನೀಡಿದರು.

ಚಾಲನೆ ನೀಡಿ ಮಾತನಾಡಿದ ಅವರು ಈ ಕ್ರೀಡಾ–ಕೂಟದ ಮೂಲಕ ವಿಜಯಪುರ ನಗರಕ್ಕೆ ಹೊಸ ಕೀರ್ತಿ ಮತ್ತು ಹೊಸ ಗುರುತು ದೊರಕಿದೆ. ಒಂದು ಕಾಲದಲ್ಲಿ ಬರದ ನಾಡು, ಬಿಸಿಲಿನ ಜಿಲ್ಲೆ ಎಂದು ಕರೆಯಲ್ಪಡುತ್ತಿದ್ದ ವಿಜಯಪುರ, 2013 ರ ನಂತರ ಎಲ್ಲ ಕ್ಷೇತ್ರಗಳಲ್ಲಿಯೂ ಅಭಿವೃದ್ಧಿಯತ್ತ ವೇಗವಾಗಿ ಸಾಗುತ್ತಿದ್ದು, ಕ್ರೀಡಾ ಚಟುವಟಿಕೆಗಳಿಗೂ ವಿಶೇಷ ಉತ್ತೇಜನ ದೊರಕುತ್ತಿದ್ದು, ಸೈಕಲ್ ವೆಲೋಡ್ರೋಮ್ ಈಗಾಗಲೇ ಸ್ಥಾಪನೆಯಾಗಿದೆ. ಕನಕದಾಸ ಬಡಾವಣೆಯಲ್ಲಿ ಬ್ಯಾಡ್ಮಿಂಟನ್ ಕೋರ್ಟ್ ಕೂಡ ನಿರ್ಮಿಸಲಾಗಿದೆ. ಮುಂದಿನ ದಿನಗಳಲ್ಲಿ ಬ್ಯಾಸ್ಕೆಟ್‌ಬಾಲ್ ಟೂರ್ನಮೆಂಟ್ ಕೂಡ ಆಯೋಜಿಸಲಾಗುವುದು. ಕ್ರೀಡೆಗಳಿಗೆ ಹೆಚ್ಚಿನ ಉತ್ತೇಜನ ನೀಡುವ ನಿಟ್ಟಿನಲ್ಲಿ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಇಂತಹ ಕ್ರೀಡಾ ಚಟುವಟಿಕೆಗಳು ರಾಜ್ಯ ಹಾಗೂ ರಾಷ್ಟ್ರಮಟ್ಟದ ಕ್ರೀಡಾಪಟುಗಳು ರೂಪುಗೊಳ್ಳಲು ಉತ್ತಮ ವೇದಿಕೆಯಾಗಲಿವೆ ಎಂದರು. ಇದೇ ಸಂದರ್ಭದಲ್ಲಿ ಮಾಜಿ ಮುಖ್ಯಮಂತ್ರಿಗಳಾದ ದಿ॥ ಎಸ್. ಬಂಗಾರಪ್ಪ ಅವರು ಬ್ಯಾಡ್ಮಿಂಟನ್ ಕ್ರೀಡೆಗೆ ತೋರಿದ್ದ ಅಪಾರ ಆಸಕ್ತಿ ಹಾಗೂ ಅನೇಕ ಯುವಕರಿಗೆ ನೀಡಿದ ಪ್ರೇರಣೆಯನ್ನು ಸ್ಮರಿಸಿದರು.

## ಅಗ್ನಿ ಅವಘಡ ಕುರಿತು ಮಕ್ಕಳಿಗೆ ಅರಿವು

• ಮಲ್ಲಮ್ಮ ನುಡಿ ವಾರ್ತೆ ವಿಚಿಕ್ಕಬಳ್ಳಾಪುರ




ತಾಲೂಕಿನ ಮುದ್ದೇನಹಳ್ಳಿಯ ಅರಿವು ಕೇಂದ್ರಗ್ರಂಥಾಲಯದಲ್ಲಿ ನಡೆಯುತ್ತಿರುವ ಗ್ರಾಮೀಣ ಮಕ್ಕಳ ಬೇಸಿಗೆ ಶಿಬಿರದ 13ನೇ ದಿನದಲ್ಲಿ ಅಗ್ನಿ ಅವಘಡಗಳ ಕುರಿತು ವಿಶೇಷ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಯಿತು. ಅಗ್ನಿಶಾಮಕ ದಳದ ಠಾಣಾಧಿಕಾರಿಗಳು ಮಕ್ಕಳಿಗೆ ಅಗ್ನಿ ಅವಘಡಗಳ ಕಾರಣಗಳು, ತಡೆಗಟ್ಟುವ ಕ್ರಮಗಳು ಹಾಗೂ ತುರ್ತು ಪರಿಸ್ಥಿತಿಯಲ್ಲಿ ಕೈಗೊಳ್ಳಬೇಕಾದ ಕ್ರಮಗಳನ್ನು ವಿವರಿಸಿ ಪ್ರಾತ್ಯಕ್ಷಿಕೆಯನ್ನು ನೀಡಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಅತಿಕ್ ಪಾಷ, ಗ್ರಾಮ ಪಂಚಾಯತಿ ಆಡಳಿತಾಧಿಕಾರಿ ಶಿವಕುಮಾರ್, ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಎಂ.ಎನ್.ತಿಪ್ಪಯ್ಯ, ಕಾರ್ಯದರ್ಶಿ ರತ್ನಮ್ಮ, ಗ್ರಂಥಪಾಲಕರ ಸಂಘದ ಜಿಲ್ಲಾಧ್ಯಕ್ಷ ಅಶ್ವಥ್, ವಿ.ಆರ್.ಡಬ್ಲ್ಯೂ ಸುಜಾತ ಹಾಗೂ ಪಂಚಾಯಿತಿ ಸಿಬ್ಬಂದಿ ವೆಂಕಟನಾರಾಯಣ್ ಮತ್ತು ನವೀನ್ ಉಪಸ್ಥಿತರಿದ್ದರು.

# ಭವಿಷ್ಯಕ್ಕೆ ದಳಪತಿ ದಾಳ

### 75 ಕ್ಷೇತ್ರ ಗೆಲುವಿನ ಗುರಿ | ಜೆಡಿಎಸ್‌ರಾಜಾಧ್ಯಕ್ಷ ಎಚ್.ಡಿ.ಕೆ ಅಭಿಮತ | ಜಿಟಿ ದೇವೇಗೌಡರಿಲ್ಲದ ಸಭೆ

• ಮಲ್ಲಮ್ಮ ನುಡಿ ವಾರ್ತೆ ಮೈಸೂರು

ಮುಂಬರುವ ವಿಧಾನಸಭೆ ಚುನಾವಣೆಗೆ ಸಜ್ಜಾಗುವಂತೆ ಈಗಲೇ ಕಾರ್ಯಕರ್ತರ ಪಡೆಗೆ ಕರೆ ಕೊಟ್ಟ ಪಕ್ಷದ ರಾಜ್ಯಾಧ್ಯಕ್ಷರು ಆಗಿರುವ ಕುಮಾರಸ್ವಾಮಿ ಅವರು; ಮುಂದಿನ ವಿಧಾನಸಭೆ ಚುನಾವಣೆಯಲ್ಲಿ ಜೆಡಿಎಸ್ ಪಕ್ಷವು 75 ಕ್ಷೇತ್ರಗಳಲ್ಲಿ ಜಯ ಗಳಿಸುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ. 2028ರ ಚುನಾವಣೆಯಲ್ಲೂ ಚಾಮುಂಡೇಶ್ವರಿ ಕ್ಷೇತ್ರ ಜೆಡಿಎಸ್ ಪಾಲಾಗಲಿದೆ ಎಂದಿದ್ದಾರೆ.

ಮೈಸೂರಿನ ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದಲ್ಲಿ ನಡೆದ ಜನರೊಂದಿಗೆ ಜನತಾದಳ ಮತ್ತು ಸದಸ್ಯತ್ವ ಅಭಿಯಾನ ಕಾರ್ಯಕ್ರಮ ಉದ್ಘಾಟಿಸಿದ ಕೇಂದ್ರ ಸಚಿವರು ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.

**ಬಣಗಳ ಮೇಲಾಟ:** ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಶಾಸಕರನ್ನೇ ಧಿಕ್ಕರಿಸಿ ಅದೇ ಪಕ್ಷದ ಸಮಾವೇಶ ನಡೆಯುತ್ತಿರುವುದು ಗಮನ ಸೆಳೆದಿದೆ. ನಾನು ಜೆಡಿಎಸ್‌ನಲ್ಲೇ ಇದ್ದೇನೆ ಎಂದು ಜಿ.ಟಿ.ದೇವೇಗೌಡ ಹೇಳುತ್ತಿದ್ದರೂ, ಜಿಲ್ಲೆಯಲ್ಲಿ ಸಾ.ರಾ. ಮಹೇಶ್ ಬಣ ಅವರು ನಮ್ಮೊಂದಿಗಿಲ್ಲ ಎನ್ನುತ್ತಿದ್ದಾರೆ. ಕುಮಾರಸ್ವಾಮಿ ಕೂಡ ಇದಕ್ಕೆ ಧ್ವನಿಗೂಡಿಸಿದ್ದರೂ, ದೊಡ್ಡಗೌಡರು ಜಿಟಿಡಿ ಬಗ್ಗೆ ಸಾಫ್ಟ್ ಆಗಿದ್ದಾರೆ.

**ಮತ್ತೆ ಒಂದಾಗುತ್ತಾರೆ:** ಇದೇ ಸ್ಥಿತಿ ಕಳೆದ ವಿಧಾನ ಸಭಾ ಚುನಾವಣೆಯಲ್ಲಿಯೂ ಇತ್ತು. ಜಿ.ಟಿ.ದೇವೇಗೌಡರು ಕಾಂಗ್ರೆಸ್ಸಿಂದ ಸ್ಪರ್ಧಿಸುತ್ತಾರೆ ಎಂದೇ ಹೇಳಲಾಗಿತ್ತು. ಆದರೆ, ಕೊನೆ ಗಳಿಗೆಯಲ್ಲಿ ಜೆಡಿಎಸ್ನಲ್ಲಿ ರಾಜಿಯಾಯಿತು. ಎಲ್ಲರೂ ಒಂದಾದರು. ಜಿಟಿಡಿ ಗೆದ್ದರು. ಮುಂದಿನ ಚುನಾವಣೆಯಲ್ಲಿಯೂ ಇದೇ ಸ್ಥಿತಿ ಎಂದು ಹೇಳುತ್ತಾರೆ ಕಾರ್ಯಕರ್ತರು.



### ಧುರೀಣರ ಟಿಕೆಟ್ ಫೈಟ್

ಜಿಟಿಡಿ ಅವರಿಗೆ ಮುಂದಿನ ವಿಧಾನ ಸಭಾ ಚುನಾವಣೆಯಲ್ಲಿ ಟಿಕೆಟ್ ನೀಡುವುದಿಲ್ಲ ಎಂದು ಕುಮಾರಸ್ವಾಮಿ ಹಾಗೂ ಸಾ.ರಾ.ಮಹೇಶ್ ಅವರು ಬಹಿರಂಗವಾಗಿ ಹೇಳಿದ ಹಿನ್ನೆಲೆಯಲ್ಲಿ ಈಗಾಗಲೇ ಮುಖಂಡರಲ್ಲಿ ಪೈಪೋಟಿ ಆರಂಭವಾಗಿದೆ. ಕೆಲವರು ಹರೀಶ್‌ಗೌಡರು ಬರಲಿ ಎಂದರೆ ಇನ್ನು ಕೆಲವರು ವಿರೋಧ ವ್ಯಕ್ತಪಡಿಸಿದ್ದಾರೆ.

### ಭವಿಷ್ಯದಲ್ಲಿ ಜಿಟಿಡಿ ಸ್ಪರ್ಧೆ ಇಲ್ಲ..?

ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಭವಿಷ್ಯದಲ್ಲಿ ಬಾರಿ ಜಿಟಿಡಿ ಸ್ಪರ್ಧೆ ಮಾಡುವುದಿಲ್ಲ. ಹುಣಸೂರು ಕ್ಷೇತ್ರದ ಶಾಸಕ ಜಿ.ಡಿ.ಹರೀಶ್‌ಗೌಡ ಚಾಮುಂಡೇಶ್ವರಿಯಿಂದ ನಿಲ್ಲುತ್ತಾರೆ. ಈ ಕ್ಷೇತ್ರವನ್ನು ಜಿಟಿಡಿ ಕುಟುಂಬ ಉಳಿಸಿಕೊಂಡಂತೆಯೂ ಆಗುತ್ತದೆ, ಹರೀಶ್‌ಗೌಡರು ತಮ್ಮ ಆಪ್ತರ ಹುಣಸೂರಿನಿಂದ ನಿಲ್ಲಿಸ್ತಾರೆ. ಚಾಮುಂಡೇಶ್ವರಿ, ಹುಣಸೂರು ಕ್ಷೇತ್ರಗಳ ಉಸ್ತುವಾರಿ ವಹಿಸ್ತಾರೆ ಎನ್ನಲಾಗುತ್ತಿದೆ.

### ಗೊಂದಲವಿಲ್ಲ: ಎಚ್ಚರಿಕೆ

ನಮ್ಮ ಪಕ್ಷದಲ್ಲಿ ಯಾವುದೇ ಗೊಂದಲವಿಲ್ಲ. ಯಾವುದೇ ಒತ್ತಡಗಳಿಗೆ ಮಣಿಯುವುದಿಲ್ಲ. ಕಾರ್ಯಕರ್ತರ ಭಾವನೆಗಳಿಗೆ ಬೆಲೆ ಕೊಟ್ಟು ಚಾಮುಂಡೇಶ್ವರಿ ಕ್ಷೇತ್ರ ಜೆಡಿಎಸ್ ಭದ್ರಕೋಟೆ ಎಂದು ಮನವರಿಕೆ ಮಾಡಿಕೊಡಲು ಸಮಾವೇಶ ಮಾಡಿದ್ದೇವೆ. ನಮ್ಮ ಪಕ್ಷಕ್ಕೆ ಲಕ್ಷಾಂತರ ಮಂದಿ ನಿಷ್ಠಾವಂತ ಕಾರ್ಯಕರ್ತರು ಬೆನ್ನೆಲುಬಾಗಿದ್ದಾರೆ ಎಂದಿದ್ದಾರೆ ಎಚ್‌ಡಿಕೆ.

### ಹಾಲುಮತಸ್ಥರಿಗಾಗಿ ಪೇಟ

ಪೇಟ ಕಟ್ಟಿಕೊಂಡು ಭಾಷಣ ಮಾಡುತ್ತಿರುವುದು ನನಗೆ ಬಹಳ ಸಂತೋಷ ಉಂಟು ಮಾಡಿದೆ. ಹಾಲುಮತಸ್ಥರು, ಕುರುಬರಿಗೆ ಸಂದೇಶ ನೀಡುವ ಸಲುವಾಗಿ ಪೇಟ ಕಟ್ಟಿದ್ದೇನೆ. ಕುರುಬ ಸಮುದಾಯದ ಜೊತೆಗೆ ಜೆಡಿಎಸ್ ಕೂಡ ಇದೆ ಎಂಬುದನ್ನು ಮನವರಿಕೆ ಮಾಡಿಕೊಡಲು ಪೇಟ ಕಟ್ಟಿಕೊಂಡು ಮಾತನಾಡಿದ್ದೇನೆ ಎಂದಿದ್ದಾರೆ.

## ಶಾಲಾ ಮಕ್ಕಳಿಗೆ ಕೇಸರಿ ಶಾಲ್: ಯತ್ನಾಳ್

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ



ಜೂನ್ ನಲ್ಲಿ ಶಾಲೆ ಪ್ರಾರಂಭ ಆಗುತ್ತಿದ್ದಂತೆ ಪ್ರತಿಯೊಬ್ಬರಿಗೂ ಶಾಲ್ ವಿತರಣೆ ಮಾಡುತ್ತೇನೆ ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೇಳಿದ್ದಾರೆ.

ಹೌದು ಇಂದು ನಗರದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು ಕೇಸರಿ ಶಾಲ್ ಹಾಕಿಕೊಳ್ಳಲು ನಿಷೇಧ ಹೇರಲು ಇವರಿಗೆ ಅಧಿಕಾರ ಕೊಟ್ಟವರು ಯಾರು ಎಂದು ಪ್ರಶ್ನಿಸಿದರು ಕೇಸರಿ ಶಾಲ್ ಹಾಕೋದು ನಮ್ಮ ಹಕ್ಕಿದೆ, ನಮ್ಮ ಧರ್ಮ ಇದೆ , ರಾಜ್ಯದ ಎಲ್ಲಾ ಹಿಂದೂಗಳಿಗೆ ಕರೆ ಕೊಡುತ್ತೇನೆ ಎಲ್ಲಾ ಪಾಲಕರು ಮಕ್ಕಳಿಗೆ ತಿಲಕ ಹಾಗೂ ಕೇಸರಿ ಶಾಲ್ ಹಾಕಿ ಶಾಲೆಗೆ ಕಳುಹಿಸಿಕೊಡಬೇಕು ಎಂದರು, ಇವರು ಹೇಗೆ ವಿರೋಧ ಮಾಡುತ್ತಾರೆ ಹೇಗೆ ತಡಿತಾರೆ ನಾವು ನೋಡುತ್ತೇವೆ , ಇನ್ನು ಮುಂದೆ ಶಾಲಾ ಹಾಜರಾತಿ ವೇಳೆ ವಿದ್ಯಾರ್ಥಿಗಳು ಎಸ್ ಸರ್ ಅನ್ನೋ ಹಾಗಿಲ್ಲ ಬದಲು ಜೈ ಶ್ರೀರಾಮ ಅನ್ನಬೇಕು ಎಂದು ಕರೆ ನೀಡಿದರು.

## ಸಿಡಿಲಿನ ಹೊಡೆತಕ್ಕೆ ಬಣವಿ, ತಿಪ್ಪೆ ಸುಟ್ಟು ಭಸ್ಮ

• ಮಲ್ಲಮ್ಮ ನುಡಿ ವಾರ್ತೆ ಮುದಗಲ್



ಸಿಡಿಲಿನ ರವಿ ಹೊಡೆತಕ್ಕೆ ಬಣವಿ ಹಾಗೂ ತಿಪ್ಪೆ ಸುಟ್ಟು ಭಸ್ಮವಾದ ಘಟನೆ ಪಟ್ಟಣದ ಹೊರಭಾಗದಲ್ಲಿ ರವಿವಾರ ಜರುಗಿದೆ.

ಪಟ್ಟಣದ ಮೇಗಳಪೇಟೆ ರೈತ ಸಿದ್ದಪ್ಪ ತಂ. ಗೌಡಪ್ಪಹೊಳ್ಯಾಚಿಯವರಿಗೆ ಸೇರಿದ ಹೊಲದಲ್ಲಿ ಸಂಗ್ರಹಣೆ ಮಾಡಿಟ್ಟ ಧನಕರುಗಳಿಗೆ ಬೇಕಾಗುವ ಮೇವಿನ ಬಣವಿ, ಶೇಂಗಾ ವಟ್ಟಿನ ಬಣವಿ ಹಾಗೂ ತಿಪ್ಪೆ ಸುಟ್ಟು ಸುಮಾರು ಎರಡರಿಂದ ಎರಡುವರೆ ಲಕ್ಷ ಬೆಲೆಬಾಳುವ ಮೇವಿನ ಬಣವಿ ಸುಟ್ಟು ಭಸ್ಮವಾಗಿದೆ, ಬಣವಿ ಪಕ್ಕದಲಿಯೇ ರೇಷ್ಮೆ ಶೆಡ್ಡು, ಜಾನುವಾರಗಳು ಇದ್ದವು. ಅಕ್ಕಪಕ್ಕದ ರೈತರು ಕೂಡಲೆ ಸಮಯ ಪ್ರಜ್ಞೆ ಮರೆದು ಬೆಂಕಿಯ ಕೆನ್ನಾಲಿಗೆ ಇಂದ ತಪ್ಪಿಸಿದ್ದರಿಂದ ಜೀವಹಾನಿಗಳು ತಪ್ಪಿದಂತಾಗಿದೆ. ಅಲ್ಲಿಯೇ ಸರ್ವೇ ನಂ. 580ರ ರವಿಕುಮಾರ್ ವೆಂಕಣ್ಣ ಎಂಬುವರ ಕೋಳಿ ಫಾರ್ಮ್‌ನಲ್ಲಿ ಒಂದು ಮರಬಿದ್ದಿದೆ. ಬಿರುಗಾಳಿ ಹೊಡೆತಕ್ಕೆ ಹತ್ತಕ್ಕಿಂತ ಹೆಚ್ಚು ವಿದ್ಯುತ್ ಕಂಬಗಳು ಬಿದ್ದಿವೆ.

## ನೂತನ ಮೃಗಾಲಯ ಲೋಕಾರ್ಪಣೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ಕಲ್ಬುರ್ಗಿಯಲ್ಲಿ ಆಧುನೀಕರಿಸಲಾಗಿರುವ ನೂತನ ಮೃಗಾಲಯವನ್ನು ಮೇ 18ರಂದು ಲೋಕಾರ್ಪಣೆ ಮಾಡಲಾಗುವುದು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಚಿತ್ತಾಪುರ ತಾಲೂಕು ಮಾಡಬ್ಲೋಲ್ ನ ಸುಮಾರು 23 ಎಕರೆ ಪ್ರದೇಶದಲ್ಲಿ ಅಭಿವೃದ್ಧಿ ಪಡಿಸಲಾಗಿರುವ ಈ ಮೃಗಾಲಯದಲ್ಲಿ 23 ಪ್ರತ್ಯೇಕ ಪ್ರದೇಶಗಳಿದ್ದು, ಹುಲಿ, ಸಿಂಹ, ಕರಡಿ, ಆಮೆ, ಮೊಸಳೆ, ಚುಕ್ಕೆ ಚಿಂಕೆ, ಚಿನ್ನದ ಬಣ್ಣದ ನರಿ, ಜೀಬ್ರಾ, ಲಂಗೂರ್ ಸೇರಿದಂತೆ ಹಲವು ಪ್ರಾಣಿಗಳು ಹಾಗೂ ವಿವಿಧ ಪ್ರಭೇದದ ಪಕ್ಷಿಗಳ ಸುಂದರ ಕೋಣೆಗಳನ್ನು ವಿನ್ಯಾಸಗೊಳಿಸಲಾಗಿದೆ ಎಂದು ತಿಳಿಸಿದ್ದಾರೆ.

ಚಿತ್ತಾಪೂರದ ಶಾಸಕ ಹಾಗೂ ಪಂಚಾಯ್ತಿ ರಾಜ್ ಸಚಿವ ಪ್ರಿಯಾಂಕ ಖರ್ಗೆ ಅವರೂ ಈ ಮೃಗಾಲಯದ ಅಭಿವೃದ್ಧಿಗೆ ಆಸಕ್ತಿಯಿಂದ ಶ್ರಮಿಸಿದ್ದು, ಈ ಮೃಗಾಲಯ ನಿರ್ಮಾಣಕ್ಕೆ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯಿಂದ 27.61 ಕೋಟಿ ರೂ. ಕರ್ನಾಟಕ ಮೃಗಾಲಯ ಪ್ರಾಧಿಕಾರದಿಂದ 6 ಕೋಟಿ ರೂ. ಒದಗಿಸಲಾಗಿದೆ. ಕರ್ನಾಟಕ ಅರಣ್ಯ ಇಲಾಖೆ 50 ಲಕ್ಷ ರೂ. ವೆಚ್ಚದಲ್ಲಿ ಮೃಗಾಲಯದಲ್ಲಿ ಹುಲ್ಲುಗಾವಲು, ವೃಕ್ಷಾರೋಪಣ ಕಾರ್ಯವನ್ನು ಮಾಡಿದೆ ಎಂದು ತಿಳಿಸಿದ್ದಾರೆ.

ಕಲ್ಯಾಣ ಕರ್ನಾಟಕ ಭಾಗದಲ್ಲಿ ಹಂಪಿಯಲ್ಲಿ ಈಗಾಗಲೇ ಮೃಗಾಲಯವಿದ್ದು, ಕಲ್ಬುರ್ಗಿಯಲ್ಲಿ ನಾಳೆ ಉದ್ಘಾಟನೆಯಾಗಲಿರುವ ಮೃಗಾಲಯ ಹಲವು ದಶಕಗಳ ಬೇಡಿಕೆಯನ್ನು ಈಡೇರಿಸಿದೆ ಎಂದು ಅರಣ್ಯ ಸಚಿವರು ತಿಳಿಸಿದ್ದಾರೆ.

ಪ್ರತಿನಿತ್ಯ ಬೆಳಗ್ಗೆ 9.30ರಿಂದ ಸಂಜೆ 5.30ರವರೆಗೆ ಮೃಗಾಲಯ ಸಾರ್ವಜನಿಕರಿಗೆ ಮುಕ್ತವಾಗಿರುತ್ತದೆ. ಪ್ರತಿ ಮಂಗಳವಾರ ಮೃಗಾಲಯಕ್ಕೆ ರಜೆ ಇರುತ್ತದೆ ಎಂದು ಅವರು ತಿಳಿಸಿದ್ದಾರೆ.

ಅರಣ್ಯ ಪ್ರದೇಶ ಕಡಿಮೆ ಇರುವ ಕಲ್ಬುರ್ಗಿ ಮತ್ತು ಕಲ್ಯಾಣ ಕರ್ನಾಟಕದ ಜನರಿಗೆ ವಿವಿಧ ಪ್ರಾಣಿಗಳನ್ನು ಒಟ್ಟಿಗೆ ನೋಡುವ ಅವಕಾಶ ಈ ಮೃಗಾಲಯದಲ್ಲಿ ಲಭಿಸಲಿದ್ದು, 12 ವರ್ಷ ಮೇಲ್ಪಟ್ಟವರಿಗೆ 75 ರೂ., 5ರಿಂದ 12 ವರ್ಷ ವಯಸ್ಸಿನ ಮಕ್ಕಳಿಗೆ 40 ರೂ. ಹಾಗೂ ಸರ್ಕಾರಿ ಶಾಲಾ ಮಕ್ಕಳಿಗೆ ತಲಾ 25 ರೂ. ನಿಗಧಿ ಮಾಡಲಾಗಿದೆ ಟಿಕೆಟ್ ಗಳನ್ನು ಮೃಗಾಲಯದ ಕೌಂಟರ್ ನಲ್ಲಿ ಪಡೆಯಬಹುದು ಎಂದೂ ಈಶ್ವರ ಖಂಡ್ರೆ ತಿಳಿಸಿದ್ದಾರೆ.

ಶಾಲಾ ಮಕ್ಕಳಿಗೆ ಮೃಗಾಲಯ ಭೇಟಿಯಿಂದ ವಿವಿಧ ವನ್ಯಜೀವಿಗಳ ಬಗ್ಗೆ ಮಾಹಿತಿ ದೊರಕುವುದರ ಜೊತೆಗೆ ವಿವಿಧ ಜಾತಿಯ ಸಸ್ಯ ಪ್ರಭೇದಗಳ ಪರಿಚಯವೂ ಆಗುತ್ತದೆ. ಇದು ಮಕ್ಕಳಲ್ಲಿ ಪ್ರಕೃತಿ ಪರಿಸರದ ಬಗ್ಗೆ ಪ್ರೀತಿ ಮೂಡಿಸುತ್ತದೆ ಎಂದು ಹೇಳಿದ್ದಾರೆ.

## ಶಾದಿ ಮಹಲ್ ಮೇಲ್ಛಾವಣಿ ಧರೆಗೆ

• ಮಲ್ಲಮ್ಮ ನುಡಿ ವಾರ್ತೆ ಕೆಂಭಾವಿ



ಪಟ್ಟಣದಲ್ಲಿ ಇಂದು ಸಂಜೆ ಪ್ರಕೃತಿಯ ವಿಕೋಪಕ್ಕೆ ಸಾರ್ವಜನಿಕ ಕಟ್ಟಡವೊಂದು ತುತ್ತಾಗಿದ್ದು, ಭಾರಿ ಬಿರುಗಾಳಿ ಹಾಗೂ ಮಳೆಯ ಆರ್ಭಟಕ್ಕೆ ಇಲ್ಲಿನ ಎಸ್.ಬಿ.ಎಚ್ ಶಾದಿ ಮಹಲ್ ಸಂಪೂರ್ಣವಾಗಿ ಮುಗುಚಿಕೊಂಡು ಬಿದ್ದಿದೆ. ಕಟ್ಟಡದ ಮೇಲ್ಛಾವಣಿಯು ಗಾಳಿಯ ರಭಸಕ್ಕೆ ನೂರಾರು ಮೀಟರ್ ದೂರದವರೆಗೆ ಹಾರಿ ಹೋಗಿ ಬಿದ್ದಿರುವುದು ದುರಂತದ ತೀವ್ರತೆಗೆ ಕನ್ನಡಿ ಹಿಡಿದಿದೆ.

**ಅದೃಷ್ಟವಶಾತ್ ತಪ್ಪಿದ ಭಾರಿ ದುರಂತ:** ವಿಶೇಷವೆಂದರೆ, ಇಂದು ಈ ಶಾದಿ ಮಹಲ್‌ನಲ್ಲಿ ಮದುವೆ ಸಮಾರಂಭವೊಂದು ನಿಗದಿಯಾಗಿತ್ತು. ದುರಂತ ಸಂಭವಿಸಿದ ಸಾಯಂಕಾಲದ ಸಮಯದಲ್ಲಿ ಮಹಲ್‌ನಲ್ಲಿ ಜನರ ಸಂಖ್ಯೆ ವಿರಳವಾಗಿತ್ತು. ಆದಾಗ್ಯೂ, ಮದುವೆಗೆ ಬಂದಿದ್ದ ಕುಟುಂಬಸ್ಥರು ಹಾಗೂ ಆಪ್ತ ಸಂಬಂಧಿಕರು ಸೇರಿದಂತೆ ಸುಮಾರು 100 ರಷ್ಟು ಜನ ಕಟ್ಟಡದ ಆವರಣದಲ್ಲೇ ಉಳಿದುಕೊಂಡಿದ್ದರು. ಮೇಲ್ಛಾವಣಿ ಕುಸಿದು ಬೀಳುತ್ತಿದ್ದಂತೆ ಎಲ್ಲರೂ ದಿಕ್ಕಾಪಾಲಾಗಿ ಓಡಿ ಮತ್ತು ಅಡಿಯಲ್ಲಿ ಅಡಗಿಕೊಂಡು ಪ್ರಾಣ ಉಳಿಸಿಕೊಂಡಿದ್ದಾರೆ. ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯ ಅಥವಾ ಸಾರ್ವಜನಿಕರಿಗೆ ದೊಡ್ಡಮಟ್ಟದ ಗಾಯಗಳಾದ ವರದಿಯಾಗಿಲ್ಲ. ಮದುವೆ ಸಂಭ್ರಮದಲ್ಲಿದ್ದ ಕುಟುಂಬಗಳು ಕೂದಲೆಳೆ ಅಂತರದಲ್ಲಿ ಭಾರಿ ಅನಾಹುತದಿಂದ ಪಾರಾಗಿ ನಿಟ್ಟುಸಿರು ಬಿಟ್ಟಿದ್ದಾರೆ.

### ಲಕ್ಷಾಂತರ ರೂಪಾಯಿ ಮೌಲ್ಯದ ಹಾನಿ

ಬಿರುಗಾಳಿಯ ರೌದ್ರಾವತಾರಕ್ಕೆ ಶಾದಿ ಮಹಲ್‌ನ ಮೂಲಸೌಕರ್ಯಗಳು ಸಂಪೂರ್ಣವಾಗಿ ಜಖಂಗೊಂಡಿವೆ. ಪ್ರಾಥಮಿಕ ಅಂದಾಜಿನ ಪ್ರಕಾರ, ಕಟ್ಟಡದ ಮೇಲ್ಛಾವಣಿ, ಕಬ್ಬಿಣದ ಬೀಮ್‌ಗಳು ಹಾಗೂ ಒಳಗಿನ ಪೀಠೋಪಕರಣಗಳು ಸೇರಿದಂತೆ ಸುಮಾರು 60 ಕ್ಕೂ ಅಧಿಕ ಲಕ್ಷ ರೂಪಾಯಿಗಳಷ್ಟು ನಷ್ಟ ಸಂಭವಿಸಿದೆ ಎನ್ನಲಾಗಿದೆ.

**ಕನಕದಾಸರು ಸಾಮಾಜಿಕ ಅವ್ಯವಸ್ಥೆಯನ್ನು ಸರಿಮಾಡಲು ಪ್ರಾಮಾಣಿಕ ಪ್ರಯತ್ನ ಮಾಡಿದ್ದರಿಂದ ಅವರನ್ನು ವಿಶ್ವಮಾನವರಾಗಿ ಕಾಣಬೇಕು: ಸಿಎಂ ಸಿದ್ದರಾಮಯ್ಯ**

# ವಿದ್ಯುತ್ ಯೋಜನೆಗಳಿಗೆ ಹಂತ ಹಂತವಾಗಿ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ಬೀದರ





ಪ್ರಗತಿಗೆ ವಿದ್ಯುತ್ ಅನಿವಾರ್ಯವಾಗಿದ್ದು, ಜಿಲ್ಲೆಯ ಸಮಗ್ರ ಅಭಿವೃದ್ಧಿ ಹಾಗೂ ಇಂಧನ ಸ್ವಾವಲಂಬನೆಗೆ ಪೂರಕವಾಗಿ ಇತಿಹಾಸದಲ್ಲೇ ಹಿಂದೆಂದೂ ಕಾಣದ ಮಾದರಿಯಲ್ಲಿ ಸುಮಾರು 1,100 ಕೋಟಿ ರೂಪಾಯಿಗಳ ಬೃಹತ್ ವಿದ್ಯುತ್ ಕಾರಿಡಾರ್ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ. ಖಂಡ್ರೆ ಹೇಳಿದರು.

ಅವರು ಶನಿವಾರ ಬೀದರ ತಾಲ್ಲೂಕಿನ ಗೋರನಳ್ಳಿ.ಬಿ (ಚಿಟ್ಟಾ) ಗ್ರಾಮದಲ್ಲಿ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ವತಿಯಿಂದ ಆಯೋಜಿಸಿದ 110/11 ಕೆ.ವಿ. ಗೋರನಳ್ಳಿ.ಬಿ (ಚಿಟ್ಟಾ) ವಿದ್ಯುತ್ ಉಪ ಕೇಂದ್ರದ ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದರು.

ಈ ಬೃಹತ್ ಯೋಜನೆಯಡಿ 700 ಕೋಟಿ ರೂ. ವೆಚ್ಚದ 440 ಕೆವಿ ಕೇಂದ್ರ, 150 ಕೋಟಿ ರೂ. ವೆಚ್ಚದ 220 ಕೆವಿ ಕೇಂದ್ರ ಹಾಗೂ 22 ಕೋಟಿ ರೂ. ವೆಚ್ಚದಲ್ಲಿ ಒಟ್ಟು 16 ಹೊಸ ವಿದ್ಯುತ್ ವಿತರಣಾ ಉಪಕೇಂದ್ರಗಳನ್ನು ಸ್ಥಾಪಿಸಲಾಗುತ್ತಿದೆ ಎಂದು ತಿಳಿಸಿದರು. ಮುಂದಿನ ಒಂದು ವರ್ಷದೊಳಗೆ ಈ ಎಲ್ಲಾ ಕಾಮಗಾರಿಗಳು ಪೂರ್ಣಗೊಳ್ಳಲಿದ್ದು, ಇನ್ನುಮುಂದೆ ಜಿಲ್ಲೆಯಲ್ಲಿ ವಿದ್ಯುತ್ ಲೋಡ್ ಶೆಡ್ಡಿಂಗ್ ಹಾಗೂ ಟ್ರಿಪಿಂಗ್ ಸಮಸ್ಯೆ ತಗ್ಗಲಿದೆ ಎಂದರು.

ವಿಶೇಷವಾಗಿ ಕೃಷಿ ಪ್ರಧಾನವಾದ ಬೀದರ್ ಜಿಲ್ಲೆಯ ರೈತರು ಎದುರಿಸುತ್ತಿರುವ ವಿದ್ಯುತ್ ವ್ಯತ್ಯಯ ಹಾಗೂ ಟ್ರಾನ್ಸ್ಫಾರ್ಮರ್‌ಗಳು ಸುಟ್ಟುಹೋಗುವ ಸಮಸ್ಯೆಗಳಿಗೆ ಈ ಯೋಜನೆಗಳ ಮೂಲಕ ಶಾಶ್ವತ ಪರಿಹಾರ ಸಿಗಲಿದೆ. ಗುಣಮಟ್ಟದ ವಿದ್ಯುತ್ ವಿತರಣೆಯಿಂದ ಕೃಷಿ ಮತ್ತು ಕೈಗಾರಿಕಾ ಕ್ಷೇತ್ರಗಳಿಗೆ ನಿರಂತರ ವಿದ್ಯುತ್ ಪೂರೈಕೆಯಾಗಲಿದ್ದು, ಇಲ್ಲಿ ಉತ್ಪಾದನೆಯಾಗುವ ಹೆಚ್ಚುವರಿ ಇಂಧನವನ್ನು ಕಲಬುರಗಿ, ಹೈದರಾಬಾದ್ ಹಾಗೂ ಗೋವಾ ಸೇರಿದಂತೆ ನೆರೆಯ ಪ್ರಾಂತ್ಯಗಳಿಗೂ ಸರಬರಾಜು ಮಾಡಲು ಈ ನೂತನ ಕಾರಿಡಾರ್ ನೆರವಾಗಲಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಇದೇ ವೇಳೆ ಇಂಧನ ಸ್ವಾವಲಂಬನೆಯ ಮಹತ್ವವನ್ನು ಒತ್ತಿಹೇಳಿದ ಸಚಿವರು, ದೇಶದ ಆರ್ಥಿಕತೆಯ ಮೇಲಾಗುತ್ತಿರುವ ವಿದೇಶಿ ತೈಲ ಆಮದಿನ ಹೊರೆಯನ್ನು ತಪ್ಪಿಸಲು ರೈತರು ನವೀಕರಿಸಬಹುದಾದ ಇಂಧನ ಉತ್ಪಾದನೆಗೆ ಮುಂದಾಗಬೇಕು. ರೈತರು ತಮ್ಮ 3–4 ಎಕರೆ ಜಮೀನಿನಲ್ಲಿ ಸುಮಾರು 1 ಮೆಗಾವ್ಯಾಟ್ ಸಾಮರ್ಥ್ಯದ ಸೌರ (ಸೋಲಾರ್) ಅಥವಾ ಪವನ ವಿದ್ಯುತ್ ಉತ್ಪಾದನೆ ಮಾಡುವ ಮೂಲಕ, ತಮ್ಮ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ಪಡೆಯುವುದರ ಜೊತೆಗೆ ಹೆಚ್ಚುವರಿ ವಿದ್ಯುತ್ ಅನ್ನು ಸರ್ಕಾರಕ್ಕೆ ಮಾರಿ ಆರ್ಥಿಕ ಪ್ರಗತಿ ಸಾಧಿಸಬಹುದು ಎಂದು ಅವರು ಸಲಹೆ ನೀಡಿದರು.

ಬೀದರ ದಕ್ಷಿಣ ಕ್ಷೇತ್ರದ ಶಾಸಕ ಡಾ.ಶೈಲೇಂದ್ರ ಕೆ.ಬೆಲ್ದಾಳೆ ಮಾತನಾಡಿ, ಬೀದರ ಜಿಲ್ಲೆಯ ತೀವ್ರ ತಾಂತ್ರಿಕ ಸಮಸ್ಯೆಗಳು ಮತ್ತು ವಿದ್ಯುತ್ ಏರಿಳಿತಕ್ಕೆ ಶಾಶ್ವತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ, ಕೆಪಿಟಿಸಿಎಲ್ ವತಿಯಿಂದ ಗೋರನಳ್ಳಿ ಗ್ರಾಮದಲ್ಲಿ ನೂತನ ವಿದ್ಯುತ್ ಉಪಕೇಂದ್ರದ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಲಾಗಿದೆ. ಕಾರ್ಪೊರೇಷನ್ ವ್ಯಾಪ್ತಿಗೆ ಒಳಪಟ್ಟಿರುವ ಹಾಗೂ ವೇಗವಾಗಿ ಬೆಳೆಯುತ್ತಿರುವ ಶಾಹಪುರ, ಮಲಕಾಪುರ, ಸುಲ್ತಾನ್‌ಪುರ ಸೇರಿದಂತೆ ಸುತ್ತಮುತ್ತಲಿನ ಹಳ್ಳಿಗಳ ಸಾರ್ವಜನಿಕರ ನಿರಂತರ ವಿದ್ಯುತ್ ಬೇಡಿಕೆಯನ್ನು ಈ ಕೇಂದ್ರವು ಈಡೇರಿಸಲಿದೆ. ಸುದೀರ್ಘ ಪ್ರಯತ್ನ ಹಾಗೂ 34 ಎಕರೆ ಜಾಗದ ಕಾನೂನು ತೊಡಕುಗಳನ್ನು ನಿವಾರಿಸಿ ಈ ಯೋಜನೆಗೆ ಚಾಲನೆ ನೀಡಲಾಗಿದ್ದು, ಗುತ್ತಿಗೆದಾರರು ಹಾಗೂ ಇಲಾಖೆಯ ಎಂಜಿನಿಯರ್‌ಗಳು ನಿಗದಿತ ಕಾಲಮಿತಿಯೊಳಗೆ ಗುಣಮಟ್ಟದ ಕಾಮಗಾರಿಯನ್ನು ಪೂರ್ಣಗೊಳಿಸಿ ಸಾರ್ವಜನಿಕರ ಲೋಕಾರ್ಪಣೆಗೆ ಮುಕ್ತಗೊಳಿಸಬೇಕು ಎಂದರು.

ಈ ಸಂದರ್ಭದಲ್ಲಿ ವಿದ್ಯುಚ್ಛಕ್ತಿ, ಪ್ರಸರಣ ವಲಯ, ಕೆ.ವಿ.ಪ್ರ.ನಿ.ನಿ., ಕಲಬುರಗಿಯ ಮುಖ್ಯ ಅಭಿಯಂತರ ರಾಮಸ್ವಾಮಿ ಎಮ್.ಎಲ್., ಯೋಜನೆಗಳ ವೃತ್ತ, ಕೆ.ವಿ.ಪ್ರ.ನಿ.ನಿ., ಕಲಬುರಗಿಯ ಅಧೀಕ್ಷಕ ಅಭಿಯಂತರ ರಾಮಚಂದ್ರ ಎಸ್.ಜಿ., ಜೆಸ್ಕಾಂ ಕಲಬುರಗಿಯ ಮುಖ್ಯ ಅಭಿಯಂತರ ವೆಂಕಟೇಶ್ ಹಳವಿ, ಕೆ.ಪಿ.ಟಿ. ಸಿ.ಎಲ್ ಕಾರ್ಯನಿರ್ವಾಹಕ ಅಭಿಯಂತರ ಶಶಿರೇಖಾ ಪಾಟೀಲ್, ಜೆಸ್ಕಾಂ ಕಾರ್ಯನಿರ್ವಾಹಕ ಅಭಿಯಂತರ ರಮೇಶ್ ಪಾಟೀಲ್ ಯೋಜನೆಗಳ ವಿಭಾಗ, ಕೆ.ವಿ.ಪ್ರ.ನಿ.ನಿ., ಬೀದರನ ಅಧೀಕ್ಷಕ ಅಭಿಯಂತರರು ರೇಣುಕಾ ಟಿ.ಜೆ., ಯೋಜನೆಗಳ ವಿಭಾಗ, ಕೆ.ವಿ.ಪ್ರ.ನಿ.ನಿ., ಬೀದರನ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಪ್ರಭು ರೆಡ್ಡಿ, ಯೋಜನೆಗಳ ವಿಭಾಗ (ಸಿವಿಲ್) ಕೆ.ವಿ.ಪ್ರ.ನಿ.ನಿ., ಕಲಬುರಗಿಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ದಯಾನಂದ, ಜೆಸ್ಕಾಂ ಬೀದರನ ಅಧಿಕ್ಷಕ ಅಭಿಯಂತರ ವೀರಭದ್ರಪ್ಪ ಸಾಲಿಮನಿ ಸೇರಿದಂತೆ ಕೆಪಿಟಿಸಿಎಲ್ ಹಾಗೂ ಜೆಸ್ಕಾಂ ಅಧಿಕಾರಿಗಳು ಸಿಬ್ಬಂದಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ರೈತರ ನೆರವಿಗೆ ಇಲಾಖೆ ಮುಂದೆ ಬರಲಿ

ಹುಮನಾಬಾದ್ ತಾಲ್ಲೂಕಿನಲ್ಲಿ ವಿದ್ಯುತ್ ಸಮಸ್ಯೆ ದಿನದಿಂದ ದಿನಕ್ಕೆ ಗಂಭೀರವಾಗುತ್ತಿದೆ. ಅನಿಯಮಿತ ಲೋಡ್ ಶೆಡ್ಡಿಂಗ್, ರಾತ್ರಿ ವೇಳೆ ಸರಿಯಾದ ವಿದ್ಯುತ್ ಪೂರೈಕೆ ಇಲ್ಲದಿರುವುದು ರೈತರ ಮನವಿಗಳಿಗೆ ಅಧಿಕಾರಿಗಳು ಸ್ಪಂದಿಸದಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ. ವಿಶೇಷವಾಗಿ ರೈತರು ಬೆಳೆಗಳಿಗೆ ನೀರುಣಿಸಲು ವಿದ್ಯುತ್ ಅವಲಂಬಿತರಾಗಿದ್ದು, ಸರಿಯಾದ ಸಮಯಕ್ಕೆ ವಿದ್ಯುತ್ ಸಿಗದ ಕಾರಣ ಅಪಾರ ನಷ್ಟ ಅನುಭವಿಸುತ್ತಿದ್ದಾರೆ.

## ಸಂಪಾದಕೀಯ



**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**

ಕೃಷಿಯೇ ದೇಶದ ಬೆನ್ನೆಲುಬು ಎಂದು ಹೇಳುವ ಸರ್ಕಾರಗಳು ಮತ್ತು ಇಲಾಖೆಗಳು ರೈತರ ಸಮಸ್ಯೆಗಳಿಗೆ ಆದ್ಯತೆ ನೀಡಬೇಕು. ಆದರೆ ಹುಮನಾಬಾದ್ ಪ್ರದೇಶದಲ್ಲಿ ರೈತರು ವಿದ್ಯುತ್ ಇಲಾಖೆಯ ಕಚೇರಿಗಳಿಗೆ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಹಲವಾರು ಗ್ರಾಮಗಳಲ್ಲಿ ರಾತ್ರಿ ಹೊತ್ತಿನಲ್ಲಿ ಮಾತ್ರ ವಿದ್ಯುತ್ ನೀಡಲಾಗುತ್ತಿದ್ದು, ಕಡಿಮೆ ವೋಲ್ಟೇಜ್ ಸಮಸ್ಯೆಯಿಂದ ಮೋಟಾರ್‌ಗಳು ಸುಡುವ ಘಟನೆಗಳು ಹೆಚ್ಚಾಗಿವೆ. ಇದರಿಂದ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕುತ್ತಿದ್ದಾರೆ. ವಿದ್ಯುತ್ ಇಲಾಖೆಯ ಅಧಿಕಾರಿಗಳು ಕೇವಲ ಬಿಲ್ ವಸೂಲಿಗೆ ಮಾತ್ರ ಸೀಮಿತವಾಗದೆ, ಜನರ ಸಮಸ್ಯೆಗಳಿಗೆ ಸ್ಪಂದಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ಗ್ರಾಮೀಣ ಪ್ರದೇಶಗಳಲ್ಲಿ ಹಳೆಯ ವಿದ್ಯುತ್ ಲೈನ್‌ಗಳನ್ನು ಬದಲಾಯಿಸುವುದು, ಹಾಳಾದ ಟ್ರಾನ್ಸ್‌ಫಾರ್ಮರ್‌ಗಳನ್ನು ತಕ್ಷಣ ದುರಸ್ತಿ ಮಾಡುವುದು, ರೈತರ ದೂರಿಗೆ ಶೀಘ್ರ ಸ್ಪಂದನೆ ನೀಡುವುದು ಅತಿ ಅವಶ್ಯಕವಾಗಿದೆ.

ಜನರು ಸಮಯಕ್ಕೆ ಸರಿಯಾಗಿ ಬಿಲ್ ಪಾವತಿಸುತ್ತಿರುವಾಗ, ಅವರಿಗೆ ಗುಣಮಟ್ಟದ ಸೇವೆ ಒದಗಿಸುವ ಜವಾಬ್ದಾರಿ ಇಲಾಖೆಯ ಮೇಲಿದೆ. ವಿದ್ಯುತ್ ಇಲ್ಲದೆ ರೈತರು ಬೆಳೆ ಉಳಿಸಿಕೊಳ್ಳಲು ಸಾಧ್ಯವಿಲ್ಲ. ಬೆಳೆ ಹಾಳಾದರೆ ಕುಟುಂಬಗಳ ಜೀವನವೇ ಸಂಕಷ್ಟಕ್ಕೆ ಸಿಲುಕುತ್ತದೆ. ಆದ್ದರಿಂದ ವಿದ್ಯುತ್ ಇಲಾಖೆ ರೈತರ ನೋವನ್ನು ಅರ್ಥಮಾಡಿಕೊಂಡು ಮಾನವೀಯತೆ ತೋರಬೇಕು. ಜನಪ್ರತಿನಿಧಿಗಳು ಕೂಡ ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಶಾಶ್ವತ ಪರಿಹಾರ ಕಂಡುಹಿಡಿಯಬೇಕು. ಹುಮನಾಬಾದ್ ಪ್ರದೇಶದ ರೈತರು ಮತ್ತು ಸಾರ್ವಜನಿಕರ ಸಹನೆ ಪರೀಕ್ಷಿಸಬಾರದು. ತಕ್ಷಣ ಸಮರ್ಪಕ ವಿದ್ಯುತ್ ಪೂರೈಕೆ ವ್ಯವಸ್ಥೆ ಕಲ್ಪಿಸಿ ಜನರ ವಿಶ್ವಾಸ ಉಳಿಸಿಕೊಳ್ಳುವುದು ಇಲಾಖೆಯ ಕರ್ತವ್ಯವಾಗಿದೆ.

## ಸಮಾಜ ಸೇವೆಯೇ ಸಂಘ ಸಂಸ್ಥೆಗಳ ಧ್ಯೇಯ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ




ಸಮಾಜ ಸೇವೆಯೇ ಸಂಘ–ಸಂಸ್ಥೆಗಳ ಮುಖ್ಯ ಧ್ಯೇಯವಾಗಿರಬೇಕು ಮತ್ತು ಅವು ಸಮಾಜದ ಒಳಿತಿಗಾಗಿಯೇ ಕಾರ್ಯನಿರ್ವಹಿಸಬೇಕು ಎಂದು ಗ್ರಾಪಂ ಮಾಜಿ ಉಪಾಧ್ಯಕ್ಷ ಬಾಲಾಜಿ ತೆಲಂಗ್ ಹೇಳಿದರು.

ಪಟ್ಟಣದ ಅಲ್ಲಮಪ್ರಭು ವೃತ್ತದ ಬಳಿಯ ಬಸ್ ತಂಗುದಾಣದ ಎದುರು ಸಾಯಿ ಎಂಟರ್ ಪ್ರೈಸೆಸ್ ಸಹಯೋಗದಲ್ಲಿ, ಸಾಯಿ ಮೊಬೈಲ್‌ನ ಶೈಲೇಶ ಶಿವಣಕರ್ ಮತ್ತು ಸಾಯಿ ಮೋಟಾರ್ಸ್‌ನ ಅವಿನಾಶ ಶಿವಣಕರ್ ನೇತೃತ್ವದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಸಾರ್ವಜನಿಕ ಉಚಿತ ತಣ್ಣನೆಯ ಕುಡಿಯುವ ನೀರು ವಿತರಣಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಹಣ, ಆಸ್ತಿ, ಅಂತಸ್ತು, ಅಧಿಕಾರ ಶಾಶ್ವತವಲ್ಲ. ಅವು ನೀರಿನ ಮೇಲಿನ ಗುಳ್ಳೆಯಿದ್ದಂತೆ, ಬರುತ್ತವೆ ಮತ್ತು ಹೋಗುತ್ತವೆ. ಆದರೆ, ನಾವು ಮಾಡುವ ಪರೋಪಕಾರ, ಸೇವೆ ಹಾಗೂ ಸಹಾಯ ಮಾತ್ರ ಜನಮಾನಸದಲ್ಲಿ ಶಾಶ್ವತವಾಗಿ ಉಳಿಯುತ್ತವೆ. ಸಮಾಜ ಸೇವೆಯಿಂದ ಮಾತ್ರ ಸಂಘ ಸಂಸ್ಥೆಗಳ ಸ್ಥಾಪನೆ ಸಾರ್ಥಕವಾಗುತ್ತದೆ ಎಂದು ಹೇಳಿದರು. ಉದ್ಯಮಿ ಶೈಲೇಶ ಶಿವಣಕರ್ ಮಾತನಾಡಿ, ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಮತ್ತು ಸದಸ್ಯರು ಸೇವೆಗಾಗಿ ಬಾಳಬೇಕು. ಬಡವರು ಹಾಗೂ ಅಸಹಾಯಕರ ಕಷ್ಟಗಳಿಗೆ ಸದಾ ಸ್ಪಂದಿಸುವ ಗುಣವನ್ನು ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಸಂತೋಷ ಸುಲಾಖೆ, ಶರಣು ಸುಲಾಖೆ, ಅವಿನಾಶ ಶಿವಣಕರ್, ಬಾಲಾಜಿ, ವಿನೋದ ಬಿರಾದಾರ, ಮಹಾದೇವ ಬಿರಾದಾರ, ಗುಂಡಪ್ಪ ದಾನಾ ಸೇರಿದಂತೆ ಊರಿನ ಪ್ರಮುಖರು ಉಪಸ್ಥಿತರಿದ್ದರು.

## ಶನಿ ಮಹಾತ್ಮನ ದರ್ಶನಕ್ಕೆ ಬಂದ ಜನಸಾಗರ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ



ತಾಲೂಕಿನ ಖಾನಾಪುರ ಸಮೀಪದಲ್ಲಿರುವ ಪ್ರಸಿದ್ಧ ಶನಿ ಮಹಾತ್ಮ ದೇವಸ್ಥಾನಕ್ಕೆ ಶನಿವಾರದ ಅಮಾವಾಸ್ಯೆ ಅಂಗವಾಗಿ ಬಿರು ಬಿಸಿಲನ್ನೂ ಲೆಕ್ಕಿಸದೆ ಭಕ್ತಸಾಗರವೇ ಹರಿದು ಬಂದಿತ್ತು. ದೇವಸ್ಥಾನದ ಆವರಣವು ಭಕ್ತರ ಜಯಘೋಷಗಳಿಂದ ಮೊಳಗುತ್ತಿತ್ತು ಮುಂಜಾನೆಯಿಂದಲೇ ದೀಪಾಲಂಕಾರ, ದರ್ಶನ ?ನಸುಕಿನ 4 ಗಂಟೆಯಿಂದಲೇ ದೇವಸ್ಥಾನದ ಆವರಣದಲ್ಲಿ ಭಕ್ತರು ಸಾಲಿನಲ್ಲಿ ನಿಂತಿರುವುದು ಕಂಡುಬಂದಿತು.

ಕೇವಲ ಕರ್ನಾಟಕ ಮಹಾರಾಷ್ಟ್ರ ತೆಲಂಗಾಣ ಹಾಗೂ ಮಾತ್ರವಲ್ಲದೆ ನೆರೆಯ ರಾಜ್ಯಗಳಾದ ಆಂಧ್ರಪ್ರದೇಶಗಳಿಂದಲೂ ಸಹಸ್ರಾರು ಸಂಖ್ಯೆಯಲ್ಲಿ ಆಗಮಿಸಿದ್ದ ಭಕ್ತಾದಿಗಳು, ಶನಿ ಮಹಾತ್ಮನ ಭವ್ಯ ದರ್ಶನ ಪಡೆದು ಪುನೀತರಾದರು. ಶನಿ ದೋಷ ನಿವಾರಣೆ ಹಾಗೂ ವಿಶೇಷ ಪೂಜೆಗಳಿಗಾಗಿ ಭಕ್ತರು ಗಂಟೆಗಟ್ಟಲೆ ಸರತಿಯಲ್ಲಿ ಕಾಯುತ್ತಿದ್ದ ದೃಶ್ಯ ಕಂಡುಬಂದಿತು.

ಹೆಚ್ಚಾಗಿದ್ದರಿಂದ ಭಕ್ತರಿಗೆ ಯಾವುದೇ ತೊಂದರೆಯಾಗದಂತೆ ದೇವಸ್ಥಾನ ಸಮಿತಿ ಹಾಗೂ ಸ್ಥಳೀಯ ದಾನಿಗಳು ವಿಶೇಷ ?ಕಡು ಬಿಸಿಲಿನ ತಾಪ ವ್ಯವಸ್ಥೆ ಮಾಡಿದ್ದರು.

ಅಲ್ಲದೇ, ದರ್ಶನ ಪಡೆದು ಹೊರಬಂದ ಭಕ್ತರಿಗೆ ದಾನಿಗಳಿಂದ ಬಿಸಿಬಿಸಿ ಹುಗ್ಗಿ, ಅನ್ನ –ಸಾಂಬಾರು ಹಾಗೂ ಬಾಳೆಹಣ್ಣಿನ ಪ್ರಸಾದ ವಿತರಿಸಲಾಯಿತು. ಬಿಸಿಲಿನ ಬೇಗೆಯಿಂದ ಬಳಲಿದ ಭಕ್ತರ ದಾಹ ನೀಗಿಸಲು ಅಲ್ಲಲ್ಲಿ ತಣ್ಣನೆಯ ಕುಡಿಯುವ ನೀರಿನ ಸೂಕ್ತ ವ್ಯವಸ್ಥೆ ಕಲ್ಪಿಸಲಾಗಿತ್ತು. ಬಿಸಿಲಿನ ತಾಪಮಾನ ಹೆಚ್ಚಾಗಿದ್ದರೂ, ಭಕ್ತರ ಭಕ್ತಿ ಹಾಗೂ ಶ್ರದ್ಧೆಯ ಮುಂದೆ ಬಿಸಿಲು ಮಂಕಾದಂತಿತ್ತು. ಖಾನಾಪುರದ ಶನಿ ಮಹಾತ್ಮ ಸನ್ನಿಧಿಯಲ್ಲಿ ಅನೇಕ ಭಕ್ತಿಯ ಆಗಮಿಸಿದರು.

## ಅಕ್ರಮ ಆಸ್ತಿ ಕಬಳಿಕೆ: ವಿಷ್ಣುವರ್ಧನ ವಾಲದೊಡ್ಡಿ ವಿರುದ್ಧ ಕೂಡಲೇ ಕ್ರಮ

• ಮಲ್ಲಮ್ಮ ನುಡಿ ವಾರ್ತೆ ಬೀದರ್



ವಾಲದೊಡ್ಡಿ ಗ್ರಾಮದಲ್ಲಿರುವ ಸ್ಮಶಾನ ಭೂಮಿ ಹಾಗೂ ಸರ್ಕಾರಿ ಭೂಮಿಯನ್ನು ಅತಿಕ್ರಮಣ ಮಾಡಿ ಇಡೀ ಗ್ರಾಮದ ಜನರಿಗೆ ದೌರ್ಜನ್ಯ ಎಸಗುತ್ತಿರುವ ಕರ್ನಾಟಕ ಭೀಮ ಸೇನೆ ರಾಜ್ಯ ಕಾರ್ಯಾಧ್ಯಕ್ಷ ವಿಷ್ಣುವರ್ಧನ ವಾಲದೊಡ್ಡಿ, ಅವರ ಸಹೋದರ ಹರ್ಷವರ್ಧನ ವಾಲದೊಡ್ಡಿ ಹಾಗೂ ಅವರ ತಂದೆ ಗುರಪ್ಪ ವಾಲದೊಡ್ಡಿ ಅವರ ವಿರೂದ್ಧ ಕಾನೂನು ಕ್ರಮ ಜರುಗಿಸಬೇಕೆಂದು ಗಾದಗಿ ಮಾಜಿ ಗ್ರಾಮ ಸದಸ್ಯರಾದ ಕಾಶಿನಾಥ ಆಗ್ರಹಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ರವಿವಾರ ಪತ್ರಿಕಾ ಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಕಳೆದ ಐದು ವರ್ಷಗಳ ಹಿಂದೆ ತಾನು ಹರ್ಷವರ್ಧನ ವಾಲದೊಡ್ಡಿ ಅವರ ವಿರೂದ್ಧ ಸ್ಪರ್ಧಿಸಿ ಗಾದಗಿ ಗ್ರಾಮ ಪಂಚಾಯತ ಸದಸ್ಯನಾಗಿ ಆಯ್ಕೆಯಾದೆ. ಆಗಿನಿಂದ ನನ್ನ ಹಾಗೂ ನನ್ನ ಕುಟುಂಬದ ವಿರೂದ್ಧ ಸೇಡು ತೀರಿಸಿಕೊಳ್ಳಲು ಹವಣಿಸುತ್ತಿದ್ದರು. ಕೊನೆಗೆ ತನ್ನ ತಂಗಿ ಕಾಂಚನಾಗೆ ಸುಳ್ಳು ಹೇಳಿ ಮೋಸದಿಂದ ವರಿಸಿ 2017ರಲ್ಲಿ ವಿಷ್ಣುವರ್ಧನ ಮದುವೆಯಾದರು. ವಿಪರಿತ ಕಿರುಕುಳ ಕೊಟ್ಟ ಪರಿಣಾಮ 2022ರಲ್ಲಿ ನನ್ನ ತಂಗಿ ಸದ್ಯ ನಮ್ಮ ಮನೆಯಲ್ಲಿದ್ದಾಳೆ. ಹೀಗೆ ಇವರು ಸಂಬಂಧಿಕರೊಂದಿಗೆ ಜಗಳ, ಗ್ರಾಮದಲ್ಲಿ ಎಲ್ಲರೊಂದಿಗೆ ಕಿರಿಕಿರಿ ಮಾಡುವುದು ಇವರ ನಿತ್ಯದ ಚಾಳಿಯಾಗಿದೆ ಎಂದರು.

ಸಂಘಟನೆ ಹೆಸರು ಹೇಳಿಕೊಂಡು ಅನ್ಯಾಯ, ದೌರ್ಜನ್ಯ, ದಬ್ಬಾಳಿಕೆ ಎಸಗುತ್ತಿರುವ ವಿಷ್ಣುವರ್ಧನ ಅವರ ವಿರೂದ್ಧ ಚೌಬಾರಾ ಪೋಲಿಸ್ ಠಾಣೆಯಲ್ಲಿ ಕಳೆದ 10 ತಿಂಗಳ ಹಿಂದೆ ದೂರು ದಾಖಲಿಸಿದಾಗ ಆಗಿನ ಪಿಎಸ್‌ಐ ತಸ್ಲಿಮಾ, ಸಿಪಿಐ ಹಿರೇಮಠ ಅವರು ಯಾವುದೇ ಕ್ರಮ ಕೈಗೊಂಡಿಲ್ಲ. ಈ ವಿಚಾರವಾಗಿ ನಮ್ಮ ತಂಗಿ ಮೇಲಾದ ಅನ್ಯಾಯದ ವಿರೂದ್ಧ ದೂರು ನೀಡಲು ಮಹಿಳಾ ಪೋಲಿಸ್ ಠಾಣೆಗೆ ದೂರು ದಾಖಲಿಸಲಾಗಿತ್ತು. ಅಲ್ಲಿಯೂ ನ್ಯಾಯ ಸಿಕ್ಕಿಲ್ಲ. ಪುನಃ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿಗಳಿಗಳಲ್ಲಿಗೆ ಹೋಗಿ ದೂರು ನೀಡಿದಾಗಲೂ ಕುಂಟು ನೆಪ ಹೇಳಿ ಚೌಬಾರಾ ಪೋಲಿಸರು ಸಹಕರಿಸಲಿಲ್ಲ ಎಂದು ತಮ್ಮ ಅಸಮಧಾನ ಹೊರ ಹಾಕಿದರು. ನೊಂದ ಯುವತಿ ಕಾಂಚನಾ ಈ ಸಂದರ್ಭದಲ್ಲಿ ಮಾತನಾಡಿ, ನನ್ನನ್ನು ಮೋಸದಿಂದ ವಂಚಿಸಿ 2017ರಲ್ಲಿ ವಿಷ್ಣುವರ್ಧನ ಮದುವೆಯಾದರು. ನಿತ್ಯ ಹೊಡೆಯುವುದು, ಬಡಿಯುವುದು, ಹಿಂಸೆ ನೀಡುವುದು ಒಂದಲ್ಲ, ಎರಡಲ್ಲ ನಿತ್ಯ ಒದೆ ತನ್ನುವುದು ನನ್ನ ಕಾಯಕವಾಗಿ ಬಿಟ್ಟಿತ್ತು. ನಾನು ಕಾರ್ಮಿಕ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವಾಗಲೆ ಪುಸಲಾಯಿಸಿ ರಜಿಷ್ಟರ್ ಮದುವೆಯಾದರು. ಮೊದಲು ಮದುವೆಯಾಗಿತ್ತು. ಅದು ಡೈವರ್ಸ್ ಆಗಿದೆ ಎಂದು ಸುಳ್ಳು ಹೇಳಿ ಮೊಸದಿಂದ ವಿವಾಹವಾಗಿದ್ದರು. ನಾನು ಹಣ ಕೊಟ್ಟಾಗ ಸುಮ್ಮನಿರುವುದು ಇಲ್ಲವಾದಾಗ ಹಿಂಸೆ ನೀಡುವುದು ಅವರ ದೈನಂದಿನ ಚಾಳಿಯಾಗಿತ್ತು. ಅವರಿಗೆ ಬಟ್ಟೆ, ಬರೆ, ಕಾರು ಎಲ್ಲವನ್ನು ನನ್ನ ಸಂಬಳದಲ್ಲಿ ಕೊಡಿಸಿದ್ದರೂ ನನ್ನ ಪಾಲಿಗೆ ಬಂದಿದ್ದು ಬರೀ ಹಿಂಸೆ ಮಾತ್ರ. ಇದನ್ನು ತಾಳಲಾರದೆ 2022ರಲ್ಲಿ ತವರು ಮನೆಗೆ ಬಂದೆ. ಮೋಸ ಮಾಡಿ ನನ್ನ ಜೀವನ ಹಾಳು ಮಾಡಿ ನರ್ಕಮಯ ಮಾಡಿದ ವಿಷ್ಣುವರ್ಧನ ವಿರೂದ್ಧ ಕಠಿಣ ಕ್ರಮ ಜರುಗಿಸಬೇಕೆಂದು ಕಾಂಚನಾ ಒತ್ತಾಯಿಸಿದರು.

ಗ್ರಾಮದ ಮತ್ತೋರ್ವ ಯುವಕ ಪ್ರವಿಣಕುಮಾರ ಮಾತನಾಡಿ, 1995ರಲ್ಲಿ ನಮ್ಮ ತಾಯಿ ವಿಜಯಲಕ್ಷ್ಮಿ ಅವರು ಗ್ರಾಮದಲ್ಲಿ ನಿವೇಶನ ಖರಿದಿಸಿ ಮನೆ ಕಟ್ಟಿದ್ದರು. ಅದು 2025ರಲ್ಲಿ ಇದ್ದಕ್ಕಿದ್ದಂತೆ ಬಿದ್ದು ಬಿಟ್ಟಿತ್ತು. ಪುನಃ ಅದನ್ನು ಕಟ್ಟಲು ಮುಂದಾದಾಗ ವಿಷ್ಣುವರ್ಧನ ಹಾಗೂ ಅವರ ಕುಟುಂಬಸ್ತರು ಬಂದು ತಡೆದು ನಮಗೆ ಕೊಲೆ ಬೆದರಿಕೆ ಹಾಕಿದರು. ಈ ವಿಚಾರವಾಗಿಯೂ ಚೌಬಾರಾ ಪೋಲಿಸ್ ಠಾಣೆಗೆ ದೂರು ದಾಖಲಿಸಿದರೂ ಇಲ್ಲಿಯ ವರೆಗೆ ನ್ಯಾಯ ಸಿಕ್ಕಿಲ್ಲ ಎಂದು ತಮ್ಮ ಅಳಲು ತೋಡಿಕೊಂಡರು.

# ಯುವಜನತೆಯ ಪಾಲಿನ ಜ್ಞಾನ ದೇಗುಲ ಪ್ರಬುದ್ಧ ಅಕಾಡೆಮಿ


ಕಲ್ಯಾಣ ಕರ್ನಾಟಕ ಭಾಗವು ಅಪಾರ ಪ್ರತಿಭೆ ಮತ್ತು ಜ್ಞಾನಸಂಪತ್ತನ್ನು ಹೊಂದಿರುವ ಪ್ರದೇಶ. ಆದರೆ, ಸೂಕ್ತ ಮಾರ್ಗದರ್ಶನ, ಗುಣಮಟ್ಟದ ತರಬೇತಿ ಹಾಗೂ ಆಧುನಿಕ ಸಂಪನ್ಮೂಲಗಳ ಕೊರತೆಯಿಂದಾಗಿ ಈ ಭಾಗದ ನೂರಾರು ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿಗಾಗಿ ಬೆಂಗಳೂರು, ದೆಹಲಿ ಅಥವಾ ಹೈದರಾಬಾದ್‌ನಂತಹ ಮಹಾನಗರಗಳಿಗೆ ವಲಸೆ ಹೋಗಬೇಕಾದ ಅನಿವಾರ್ಯತೆ ಇತ್ತು. ಇದರಿಂದಾಗಿ ಬಡ ಮತ್ತು ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಆರ್ಥಿಕ ಹೊರೆ ಹೆಚ್ಚಾಗುತ್ತಿತ್ತು.

ಕಲ್ಯಾಣ ಕರ್ನಾಟಕ ಭಾಗದ ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಮನೋಭಾವನೆಯನ್ನು ಹೆಚ್ಚಿಸುವ ಮತ್ತು ಅವರಿಗೆ ಉನ್ನತ ಭವಿಷ್ಯವನ್ನು ರೂಪಿಸುವ ಮಹತ್ತರ ಉದ್ದೇಶದೊಂದಿಗೆ ಕಲಬುರಗಿಯಲ್ಲಿ ಅತ್ಯಾಧುನಿಕ ಪರೀಕ್ಷಾ ಪೂರ್ವ ತರಬೇತಿ ಕೇಂದ್ರವಾದ "ಪ್ರಬುದ್ಧ ಅಕಾಡೆಮಿ"ಯನ್ನು ಸ್ಥಾಪಿಸಲಾಗಿದೆ.

ಕಲಬುರಗಿ ಜಿಲ್ಲಾಡಳಿತ, ಸಮಾಜ ಕಲ್ಯಾಣ ಇಲಾಖೆ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಸಂಯೋಗದೊಂದಿಗೆ ಕಲಬುರಗಿ ನಗರದ ಅಟಲ್ ಬಿಹಾರಿ ವಾಜಪಾಯಿ ಬಡಾವಣೆಯಲ್ಲಿ ಅಂದಾಜು ರೂ. 25 ಕೋಟಿ ಅನುದಾನದಲ್ಲಿ 10,449.35 ಚದರ ಮೀಟರ್ ವಿಸ್ತೀರ್ಣದ ಈ ಭವ್ಯ ಕೇಂದ್ರವನ್ನು ನಿರ್ಮಿಸಲಾಗಿದೆ.

**ವಿದ್ಯಾರ್ಥಿಗಳ ಸಮಗ್ರ ಅಧ್ಯಯನಕ್ಕಾಗಿ ಇಲ್ಲಿ ವಿಶ್ವದರ್ಜೆಯ ಮೂಲಸೌಕರ್ಯಗಳನ್ನು ಕಲ್ಪಿಸಲಾಗಿದೆ:**

● ಆಧುನಿಕ ತಂತ್ರಜ್ಞಾನ ಹೊಂದಿರುವ, ತಲಾ 125 ಆಸನ ಸಾಮರ್ಥ್ಯದ 4 ವಿಶಾಲವಾದ ತರಬೇತಿ ಕೊಠಡಿಗಳು.



● ಅಂದಾಜು 100 ವಿದ್ಯಾರ್ಥಿ ಸಾಮರ್ಥ್ಯದ, ಎಲ್ಲಾ ಸ್ಪರ್ಧಾತ್ಮಕ ಪರೀಕ್ಷಾ ಪುಸ್ತಕಗಳನ್ನೊಳಗೊಂಡ ಸುಸಜ್ಜಿತ ಗ್ರಂಥಾಲಯ ಮತ್ತು ಡಿಜಿಟಲ್ ಲೈಬ್ರರಿ.

● ಸ್ವಯಂ ಅಧ್ಯಯನಕ್ಕಾಗಿ ಪ್ರತ್ಯೇಕ ಕ್ಯುಬಿಕಲ್ಸ್ ಮತ್ತು ತಜ್ಞರಿಂದ ವೈಯಕ್ತಿಕ ಮಾರ್ಗದರ್ಶನಕ್ಕಾಗಿ ಮೆಂಟರಿಂಗ್ ಕೊಠಡಿಗಳು.

● ರಿಯಾಯಿತಿ ದರದಲ್ಲಿ ಗುಣಮಟ್ಟದ ಆಹಾರ ನೀಡುವ ಉಪಹಾರ ಕೇಂದ್ರ ಮತ್ತು ಪ್ರಶಾಂತ ಶೈಕ್ಷಣಿಕ ವಾತಾವರಣಕ್ಕಾಗಿ ಸುಂದರವಾದ ಗಾರ್ಡನ್ ಸೌಲಭ್ಯ ಇರುತ್ತದೆ.

ಪ್ರಸ್ತುತ, ಈ ಅಕಾಡೆಮಿಯಲ್ಲಿ ಐ.ಎ.ಎಸ್ ಹಾಗೂ ಕೆ.ಎ.ಎಸ್ ಪರೀಕ್ಷೆಗಳ ಉಚಿತ ಪೂರ್ವಭಾವಿ ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಈ ತರಬೇತಿ ಕಾರ್ಯಕ್ರಮವು ಕಲ್ಯಾಣ ಕರ್ನಾಟಕ ಭಾಗದ ವಿದ್ಯಾರ್ಥಿಗಳಿಗೆ ಮಾತ್ರ ಸೀಮಿತವಾಗಿದ್ದು, ಯಾವುದೇ ಪದವಿ ಹೊಂದಿರುವ ಅಥವಾ ಅಂತಿಮ ವರ್ಷದ ಪದವಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. ಕನಿಷ್ಠ 21 ವರ್ಷಗಳು ಮತ್ತು ಗರಿಷ್ಠ 37 ವರ್ಷಗಳ ವಯೋಮಿತಿಯೊಳಗಿರಬೇಕು. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 21–05–2026 ಆಗಿರುತ್ತದೆ.

**ತರಬೇತಿ ಪ್ರಕ್ರಿಯೆ ಮತ್ತು ಆಯ್ಕೆ ವಿಧಾನ:**

● **ಪಾರದರ್ಶಕ ಆಯ್ಕೆ:** ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಕಲ್ಯಾಣ ಕರ್ನಾಟಕ ಭಾಗದ ವಿದ್ಯಾರ್ಥಿಗಳಿಗೆ ವಿಶೇಷ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಿ, ಸಂಪೂರ್ಣ ಅರ್ಹತೆ ಮತ್ತು ಪಾರದರ್ಶಕತೆಯ ಆಧಾರದ ಮೇಲೆ 500 ವಿದ್ಯಾರ್ಥಿಗಳನ್ನು ತರಬೇತಿಗಾಗಿ ಆಯ್ಕೆ ಮಾಡಲಾಗುತ್ತದೆ.

● **ಸಮಗ್ರ ಮಾರ್ಗದರ್ಶನ:** ಆಯ್ಕೆಯಾದ ಅಭ್ಯರ್ಥಿಗಳಿಗೆ ದೇಶದ ಪ್ರತಿಷ್ಠಿತ ತರಬೇತಿ ಸಂಸ್ಥೆಯಿಂದ 10 ತಿಂಗಳುಗಳ ಕಾಲ ಉಚಿತ ಮತ್ತು ಗುಣಮಟ್ಟದ ತರಬೇತಿಯನ್ನು ನೀಡಲಾಗುತ್ತದೆ. ಈ ತರಬೇತಿಯು ಪೂರ್ವಭಾವಿ ಪರೀಕ್ಷೆ, ಮುಖ್ಯ ಪರೀಕ್ಷೆ, ಹಾಗೂ ಸಂದರ್ಶನ ಒಳಗೊಂಡಂತೆ ಮೂರೂ ಹಂತಗಳಿಗೆ ಸಂಪೂರ್ಣ ಮಾರ್ಗದರ್ಶನವನ್ನು ನೀಡಲು ಉದ್ದೇಶಿಸಿದೆ.

**ತರಬೇತಿಯ ವಿಶೇಷತೆ:**

ಸ್ಪರ್ಧಾತ್ಮಕ ಪರೀಕ್ಷೆಗಳ ಪ್ರಸ್ತುತ ಬೇಡಿಕೆಗಳಿಗೆ ತಕ್ಕಂತೆ ಇಲ್ಲಿನ ಬೋಧನಾ ಕ್ರಮವನ್ನು ವಿನ್ಯಾಸಗೊಳಿಸಲಾಗಿದೆ. ವಿದ್ಯಾರ್ಥಿಗಳಲ್ಲಿ ಪರಿಕಲ್ಪನಾತ್ಮಕ ತಿಳುವಳಿಕೆ, ವಿಶ್ಲೇಷಣಾತ್ಮಕ ಕೌಶಲ್ಯಗಳು, ಪ್ರಚಲಿತ ವಿದ್ಯಮಾನಗಳ ಆಳವಾದ ಜ್ಞಾನ ಮತ್ತು ಸಂದರ್ಶನ ಎದುರಿಸುವ ಆತ್ಮವಿಶ್ವಾಸವನ್ನು ಹೆಚ್ಚಿಸಲು ವಿಶೇಷ ಒತ್ತು ನೀಡಲಾಗುತ್ತದೆ. ಶೈಕ್ಷಣಿಕ ತರಬೇತಿಯ ಜೊತೆಗೆ ಸಮಗ್ರ ವ್ಯಕ್ತಿತ್ವ ವಿಕಸನ ಮಾರ್ಗದರ್ಶನವನ್ನೂ ನೀಡಲಾಗುತ್ತಿದ್ದು, ಇದು ಕಲ್ಯಾಣ ಕರ್ನಾಟಕ ಭಾಗದಲ್ಲಿ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮಾನತೆಯನ್ನು ತರಲು ಗಣನೀಯ ಕೊಡುಗೆ ನೀಡಲಿದೆ.

ಅರ್ಜಿ ಸಲ್ಲಿಸುವ ವಿಧಾನ: ಆಸಕ್ತ ಮತ್ತು ಅರ್ಹ ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಅಧಿಕೃತ ವೆಬ್‌ಸೈಟ್ www.kalaburagi.nic.in ಗೆ ಭೇಟಿ ನೀಡಬಹುದು ಅಥವಾ ಪ್ರಕಟಣೆಯಲ್ಲಿ ನೀಡಿರುವ ಕ್ಯೂಆರ್ ಕೋಡ್ ಅನ್ನು ಸ್ಕ್ಯಾನ್ ಮಾಡುವ ಮೂಲಕ ನೇರವಾಗಿ ಅರ್ಜಿ ಸಲ್ಲಿಸಬಹುದಾಗಿದೆ.

**ಭವಿಷ್ಯದ ದೃಷ್ಟಿಕೋನ ಮತ್ತು ಪ್ರಾದೇಶಿಕ ಪ್ರಗತಿ:** ಕಲಬುರಗಿಯಲ್ಲಿ ಸ್ಥಾಪಿತವಾಗಿರುವ ಈ ಅಕಾಡೆಮಿಯು ಕೇವಲ ಒಂದು ತರಬೇತಿ ಕೇಂದ್ರವಾಗಿ ಉಳಿಯದೆ, ಇಡೀ ಉತ್ತರ ಕರ್ನಾಟಕ ಭಾಗದ ಶೈಕ್ಷಣಿಕ ಚಿತ್ರಣವನ್ನು ಬದಲಾಯಿಸುವ ಶಕ್ತಿಯನ್ನು ಹೊಂದಿದೆ.

ಸ್ಥಳೀಯ ಯುವಕರು ನಾಗರಿಕ ಸೇವೆಗಳು ಹಾಗೂ ಉನ್ನತ ವೃತ್ತಿಪರ ಕ್ಷೇತ್ರಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಪ್ರೇರೇಪಿಸುವ ಮೂಲಕ, ಈ ಪ್ರದೇಶದಲ್ಲಿ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮಾನತೆಯನ್ನು ತರಲು ಇದೊಂದು ಐತಿಹಾಸಿಕ ಹೆಜ್ಜೆಯಾಗಿದೆ. ಮುಂದಿನ ದಿನಗಳಲ್ಲಿ ಈ ಕೇಂದ್ರವು ಪ್ರಮುಖ ವಿಶ್ವವಿದ್ಯಾಲಯಗಳು ಹಾಗೂ ಜಾಗತಿಕ ಮಾರ್ಗದರ್ಶನ ಜಾಲಗಳೊಂದಿಗೆ ಪಾಲುದಾರಿಕೆ ಮಾಡಿಕೊಳ್ಳುವ ಮೂಲಕ ಮತ್ತಷ್ಟು ಎತ್ತರಕ್ಕೆ ಬೆಳೆಯುವ ಸರ್ವ ಸಾಧ್ಯತೆಗಳನ್ನು ಹೊಂದಿದೆ.

ಕಲ್ಯಾಣ ಕರ್ನಾಟಕ ಭಾಗದ ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಮನೋಭಾವನೆಯನ್ನು ಹೆಚ್ಚಿಸುವ ಮತ್ತು ಅವರಿಗೆ ಉನ್ನತ ಭವಿಷ್ಯವನ್ನು ರೂಪಿಸುವ ಮಹತ್ತರ ಉದ್ದೇಶದೊಂದಿಗೆ ಕಲಬುರಗಿಯಲ್ಲಿ "ಪ್ರಬುದ್ಧ ಅಕಾಡೆಮಿ"ಯನ್ನು ಸ್ಥಾಪಿಸಲಾಗಿದೆ.

ಈ ಯೋಜನೆಯು ಕಲ್ಯಾಣ ಕರ್ನಾಟಕ ಭಾಗದ ವಿದ್ಯಾರ್ಥಿಗಳ ಶೈಕ್ಷಣಿಕ ಉನ್ನತಿಗೆ ನೆರವಾಗುವುದರ ಜೊತೆಗೆ, ಈ ಭಾಗದ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮಾನತೆಯನ್ನು ಸಾಧಿಸುವ ನಿಟ್ಟಿನಲ್ಲಿ ಒಂದು ಮಹತ್ವದ ಹೆಜ್ಜೆಯಾಗಿದೆ.



**ಜಡಿಯಪ್ಪ ಗೆದ್ಲಗಟ್ಟಿ**
**ಉಪನಿರ್ದೇಶಕರು**
**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕಲಬುರಗಿ.**

## ಇಂದು ಪ್ರಗತಿ ಪರಿಶೀಲನಾ ಸಭೆ ತಾಪಂ ಇಒ ವೆಂಕಟೇಶ ವಂದಾಲ

• ಮಲ್ಲಮ್ಮ ನುಡಿ ವಾರ್ತೆಬಸವನಬಾಗೇವಾಡಿ

ಮೇ.17: ಮುಂಬರುವ ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಹಾಗೂ ಮುನ್ನೆಚ್ಚರಿಕೆ ಕ್ರಮಗಳ ಕುರಿತು ಮತ್ತು ವಿವಿಧ ಇಲಾಖೆಗಳ ಬಗ್ಗೆ ಜರುಗುವ ಪ್ರಗತಿ ಪರಿಶೀಲನಾ ಸಭೆಯನ್ನು ಇಂದು ಸೋಮವಾರ ಬೆಳಿಗ್ಗೆ 10:30ಕ್ಕೆ ಸಚಿವರಾದ ಶಿವಾನಂದ ಎಸ್ ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಪಟ್ಟಣದ ಪುರಸಭೆ ಸಭಾಭವನದಲ್ಲಿ ಆಯೋಜಿಸಲಾಗಿದೆ.

ಸದರಿ ಸಭೆಗೆ ಎಲ್ಲ ಇಲಾಖೆಗಳ ಅಧಿಕಾರಿಗಳು ಪ್ರಗತಿ ವರದಿಯೊಂದಿಗೆ ಹಾಜರಿರುವುದು. ತಪ್ಪದೇ ವೇಳೆಗೆ ಸರಿಯಾಗಿ ಕಡ್ಡಾಯವಾಗಿ ಉಪಸ್ಥಿತರಿರಲು. ಪ್ರತಿನಿಧಿಗಳಿಗೆ ಅವಕಾಶವಿರುವುದಿಲ್ಲ ಎಂದು ತಾಪಂ ಕಾರ್ಯನಿರ್ವಾಹಕ ಅಧಿಕಾರಿ ವೆಂಕಟೇಶ ವಂದಾಲ ತಿಳಿಸಿದ್ದಾರೆ.

## ಮುದಗಲ್ : ಬಕ್ರೀದ್ ಶಾಂತಿ ಸಭೆ



• ಮಲ್ಲಮ್ಮ ನುಡಿ ವಾರ್ತೆಮುದಗಲ್

ಎಲ್ಲಾ ಧರ್ಮದ ಮುಖಂಡರು ಯಾವುದೇ ಗೊಂದಲಕ್ಕೆ ಒಳಗಾಗದೆ ತ್ಯಾಗ ಬಲಿದಾನದ ಬಕ್ರೀದ್ ಹಬ್ಬವನ್ನು ಶಾಂತಿಯುತವಾಗಿ ಆಚರಿಸಬೇಕೆಂದು ಲಿಂಗಸಗೂರು ಡಿ ವೈ ಎಸ್ ಪಿ ದತ್ತಾತ್ರೇಯ ಕಾರ್ನಾಡ್ ತಿಳಿಸಿದರು.

ಪಟ್ಟಣದ ಪೊಲೀಸ್ ಠಾಣೆಯಲ್ಲಿ ಬಕ್ರೀದ್ ಹಬ್ಬದ ಅಂಗವಾಗಿ ರವಿವಾರ ನಡೆದ ಶಾಂತಿ ಸಭೆಯಲ್ಲಿ ಮಾತನಾಡಿ, ಕಾನೂನು ಸುವ್ಯವಸ್ಥೆ ಕಾಪಾಡಲು ಪೊಲೀಸ್ ಇಲಾಖೆ ಸದಾ ಸಿದ್ಧವಾಗಿದ್ದು, ಸಾಮಾಜಿಕ ಮಾಧ್ಯಮಗಳು ಕ್ರಿಯಾಶೀಲವಾಗಿದೆ. ಎಚ್ಚರಿಕೆಯಿಂದ ಬಳಕೆ ಮಾಡಬೇಕು. ಇಲಾಖೆಯ ನಿಯಮಗಳನ್ನು ಪಾಲಿಸಿ ಪೊಲೀಸರೊಂದಿಗೆ ಸಹಕರಿಸಬೇಕು ಎಂದು ವಿನಂತಿಸಿದರು.

ಇದೇ ವೇಳೆ ಮಸ್ಕಿ ವೃತ್ತ ಸಿಪಿಐ ರಾಮಣ್ಣ ಜಲಗೇರಿ, ಪಿಎಸ್ಐ ವೆಂಕಟೇಶ ಮಾಡಗೇರಿ, ಪುರಸಭೆ ಮಾಜಿ ಸದಸ್ಯ ಎಸ್ ಆರ್ ರಸೂಲ್ಸಾಬ್, ಜಮೀರ್ ಅಹ್ಮದ್ ಖಾಜಿ ಮಾತನಾಡಿದರು.

ಪುರಸಭೆ ಮಾಜಿ ಉಪಾಧ್ಯಕ್ಷ ಎಸ್‌ಕೆ ಅಜ್ಮೀರ್ ಬೆಳ್ಳಿಕಟ್, ಮಾಜಿ ಸದಸ್ಯ ಮೈಬೂಬ್ ಕಡ್ಡಿಪುಡಿ, ಹೇಮಂತ್ ನಾಗಲಾಪುರ, ಗಯಾಸುದ್ದಿನ್, ಬಸವರಾಜ ಬಂಕದಮನೆ, ಶರಣಪ್ಪ ಕಟ್ಟಿಮನಿ, ಅಮಿರಬೇಗ್ ಉಸ್ತಾದ, ರಘುವೀರ್ ಚಲವಾದಿ, ನ್ಯಾಮತ್ ಖಾದ್ರಿ, ನಂದಪ್ಪ ಕತ್ತಿ, ವೆಂಕಟೇಶ್ ಹಿರೇಮನಿ, ಜವರಲಾಲ್ ಸೇಟ್ ಸೇರಿದಂತೆ ಇತರರಿದ್ದರು.

## ಯರದೊಡ್ಡಿ ಗ್ರಾಮದಲ್ಲಿ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಣೆ



• ಮಲ್ಲಮ್ಮ ನುಡಿ ವಾರ್ತೆಮುದಗಲ್

ಸಮೀಪದ ಯರದೊಡ್ಡಿ ಗ್ರಾಮದಲ್ಲಿ ಮಹಾಸಾಧ್ವಿ ಶಿವ ಶರಣೆ ಹೇಮರೆಡ್ಡಿ ಮಲ್ಲಮ್ಮನವರ 5ನೇ ವರ್ಷದ ಜಯಂತಿ ಹಾಗೂ ವೇಮನಂದ ಮಹಾಶಿವಯೋಗಿ ಸ್ಮರಣೋತ್ಸವ ಶನಿವಾರ ಜರುಗಿತು.

ಕಾರ್ಯಕ್ರಮದಲ್ಲಿ ಶ್ರೀಗಳ ಆಶೀರ್ವಚನ ಹಾಗೂ ಉಪನ್ಯಾಸ ಕಾರ್ಯಕ್ರಮ ಜರುಗಿತು.

ಯರದೊಡ್ಡಿ ಗ್ರಾಮದ ದೈವದಕಟ್ಟೆಯಿಂದ ಶ್ರೀ ಬಸವೇಶ್ವರ ದೇವಸ್ಥಾನದವರೆಗೆ ಸಕಲ ವಾದ್ಯಮೇಳ ಹಾಗೂ ಕುಂಭ ಹೊತ್ತ ಮಹಿಳೆಯರು ಹಾಗೂ ಗ್ರಾಮಸ್ಥರಿಂದ ಹೇಮರೆಡ್ಡಿ ಮಲ್ಲಮ್ಮ ಹಾಗೂ ಮಹಾಶಿವಯೋಗಿ ಅವರ ವೇಮನಂದರ ಭಾವಚಿತ್ರದ ಮೆರವಣಿಗೆ ಎತ್ತಿನ ಬಂಡಿ ಮೂಲಕ ಸಡಗರ ಸಂಭ್ರಮದಿಂದ ಕರೆ ತರಲಾಯಿತು. ಸ್ಥಳದಲ್ಲಿಯೇ

ಶಿವ ಶರಣೆ ಹೇಮರೆಡ್ಡಿ ಮಲ್ಲಮ್ಮ ಹಾಗೂ ವೇಮನಂದರ ಭಾವ ಚಿತ್ರಕ್ಕೆ ಗ್ರಾಮಸ್ಥರಿಂದ ಪೂಜೆ ಸಲ್ಲಿಸಿ ಮಲರ್ಪಣೆ ಮಾಡಿದರು. ಪರಸ್ಪರ ಒಬ್ಬರಿಗೊಬ್ಬರು ಸಂತೋಷ ಹಂಚಿಕೊಂಡು ಕಾರ್ಯಕ್ರಮದಲ್ಲಿ ಭಾಗಿಯಾದ ಎಲ್ಲ ಭಕ್ತಾದಿಗಳಿಗೆ ಅನ್ನ ಪ್ರಸಾದ ಏರ್ಪಡಿಸಲಾಗಿತ್ತು.

ಡಿಜೆ ಸೌಂಡ್ಗೆ ಯುವಕರು ಹೆಜ್ಜೆ ಹಾಕಿ ಸಂಭ್ರಮಿಸಿದರು.

ರೆಡ್ಡಿ ಸಮುದಾಯದ ಬಂಧು ಬಾಂಧವರು ಸೇರಿದಂತೆ ವಿವಿಧ ಗ್ರಾಮಸ್ಥರು ಉಪಸ್ಥಿತರಿದ್ದರು.

**PUBLIC NOTICE**

My name is Rashida Bi W/o Maqhtum Miyan but due to oversight my name wrongly mentioned in Bank FD paper CTDR/STDR/TC/A No. 389048 as Rasheeda Begum W/o Maqdoom Miyan bearing FD Account No. 62020042071 and in another FD document No. TD/CS/A 0168993, FD Account No. 62094629084 as Rasheeda Begum W/o Maqdoom Miyan. I request related Bank Authorities to correct my name as per my Aadhaar Card and other documents having my correct name as Rashida Bi W/o Maqhtum Miyan. Vide affidavit sworn before the Notary, the above mentioned names are true and one and same person. There is no any fraud or misappropriation in this, if false I will be held responsible for the cause and consequences.Sd/- Rashida Bi W/o Maqhtum Miyan, R/o Shivapur Galli, Humnabad, Dist. Bidar.
Identified by:
M A Tousifoddin Advocate, Humnabad
KAR/454/2025

# ಮರುಳಸಿದ್ಧೇಶ್ವರರು ವಿಶ್ವಬಂಧುಗಳು: ಡಾ. ವಲಯಶಾಂತಮುನಿ ಸ್ವಾಮೀಜಿ



• ಮಲ್ಲಮ್ಮ ನುಡಿ ವಾರ್ತೆಬಸವನಬಾಗೇವಾಡಿ

ಜಾತಿ ಮತ ಎನ್ನದೇ ಸಕಲ ದೇವರ ಜಾತ್ರೆ ನಡೆಯುವ ರಾಜ್ಯದ ಏಕೈಕ ಮಠ ಡೋಣುರು ಕಟ್ಟಿಮನಿ ಹಿರೇಮಠ ಎಂದು ಶಿವಗಂಗೆಯ ಡಾ. ವಲಯಶಾಂತಮುನಿ ಶಿವಾಚಾರ್ಯ ಸ್ವಾಮೀಜಿ ಅಭಿಪ್ರಾಯಪಟ್ಟರು.

ಭಾನುವಾರ ತಾಲೂಕಿನ ಡೋಣೂರು ಗ್ರಾಮದ ಕಟ್ಟಿಮನಿ ಹಿರೇಮಠದ ಶ್ರೀಗುರು ಮರುಳಸಿದ್ದೇಶ್ವರ ಜಾತ್ರಾರಥೋತ್ಸವ ಹಿನ್ನಲೆಯಲ್ಲಿ ನಡೆದ ಅಭಿನಂದನಾ ಗೌರವ, ಸಾಮೂಹಿಕ ವಿವಾಹ ಹಾಗೂ ಅಗ್ನಿಶಮನ ಸಮಾರಂಭದಲ್ಲಿ ಮಾತನಾಡಿದ ಅವರು, ಈಗಿನ ಪೀಠಾಧಿಪತಿಗಳಾದ ಡಾ. ಸಿದ್ದಲಿಂಗ ಶಿವಾಚಾರ್ಯ ಸ್ವಾಮೀಜಿ ಅವರದು ಭಾವೈಕ್ಯತೆಯ ಸಂಕಲ್ಪವಾಗಿದ್ದು. ಮರುಳಸಿದ್ದೇಶ್ವರರು ಸುಖವನ್ನು ಬಿತ್ತರಿಸಿದರೆ ಈಗಿನ ಶ್ರೀಗಳು ದು:ಖವನ್ನು ಸಹಿಸುವ ಸುಗಮವಾಗಿ ಸಂಸಾರ ಸಾಗಿಸುವ ಕುರಿತಾಗಿ ಇಡೀ ಮನುಕುಲಕ್ಕೆ ಬಿತ್ತರಿಸುತ್ತಿದ್ದಾರೆ.

ಮನಸ್ಸು ನೋಯಿಸದವನೇ ಪರಮಪಾವನರು. ಇಲ್ಲಿಯ ಜೋಳ ಇಡೀ ರಾಜ್ಯಕ್ಕೆ ಖ್ಯಾತಿಯಾಗಿವೆ ಎಂದರು.

ಬೆಂಗಳೂರಿನ ಡಾ. ಮಹಾಂತಲಿಂಗ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಇಂದು ರೈತರು ಬದಲಾಗಬೇಕಾಗಿದೆ. ದುಶ್ಚಟಗಳನ್ನು ಬಿಟ್ಟು ರೈತರನ್ನೇ ವರಿಸುವ ಹಾಗೇ ಬದುಕಿ ತೋರಿಸಿ. ಈಗಿನ ಶ್ರೀಗಳ ಪಟ್ಟಧಿಕಾರಕ್ಕೆ 50ರ ಸಂಭ್ರಮ. ಹಿನ್ನಲೆಯಲ್ಲಿ ಭವ್ಯ ಸಮಾರಂಭ ಆಯೋಜಿಸಲಾಗುವುದು ಎಂದರು.

ಸಚಿವರಾದ ಶಿವಾನಂದ ಎಸ್ ಪಾಟೀಲ ಮಾತನಾಡಿ, ಡೋಣೂರು ಜಾತ್ರೆ ಸದಾ ಹೊಸತನದಿಂದ ಕೂಡಿರುವುದಲ್ಲದೇ ಇಡೀ ರಾಜ್ಯಕ್ಕೆ ಖ್ಯಾತಿ ಹೊಂದಿದೆ. ಸನಾತನ ಧರ್ಮ ಇಡೀ ವಿಶ್ವಕ್ಕೆ ಶಾಂತಿ ಕೊಟ್ಟಿರುವ ಧರ್ಮವಾಗಿದೆ. ಬಂಥನಾಳ, ಸುತ್ತೂರು, ಬೀಳೂರು , ಬಾಲ್ಕಿ ಸೇರಿದಂತೆ ಅನೇಕ ಪೂಜ್ಯರ ಶ್ರಮ ಫಲವಾಗಿ ವಿದ್ಯೆ ಹಾಗೂ ಅನ್ನವನ್ನು ನೀಡುವುದರ ಮೂಲಕ ಸರಕಾರ ಮಾಡದ ಕೆಲಸ ಮಾಡಿದ್ದಾರೆ ಎಂದರು.

ನೇತೃತ್ವ ವಹಿಸಿದ್ದ ಡಾ. ಸಿದ್ದಲಿಂಗ ಶಿವಾಚಾರ್ಯ ಸ್ವಾಮೀಜಿ, ಡಾ. ಶಿವಕುಮಾರ ಶಿವಾಚಾರ್ಯ ಸ್ವಾಮೀಜಿ,

> ಹೆಣ್ಮಕ್ಕಳ ವಿದ್ಯಾಭ್ಯಾಸಕ್ಕಾಗಿ ನೆರವು ಯಾವ ಊರಿನ ಹೆಣ್ಮಕ್ಕಳು. ಆಗಲಿ, ಆಗಲಿ ಆರು ಹೆಣ್ಣು ಮಕ್ಕಳ ಪೈಕಿ ಜೇಷ್ಠ ಪುತ್ರಿಗೆ ವಿದ್ಯಾಭ್ಯಾಸಕ್ಕೆಂದು ಐದು ಸಾವಿರ ನೆರವು ನೀಡಲಾಗುವುದು ಎಂದು ಗ್ರಾಮದ ಒರ್ವ ಪುತ್ರಿಯ ಪಾಲಕರಿಗೆ ನೆರವು ನೀಡಲಾಯಿತು.ನಿಮ್ಮ ಮಕ್ಕಳನ್ನು ರೈತರಿಗೆ ಕೊಟ್ಟು ಮದುವೆ ಮಾಡಿ.
>
> **ಡಾ. ಶಿವಕುಮಾರ ಶಿವಾಚಾರ್ಯ ಸ್ವಾಮೀಜಿ, ಕೆರೂರ**

ಡಾ. ಜಯಶಾಂತಲಿಂಗ ಶಿವಾಚಾರ್ಯ ಸ್ವಾಮೀಜಿ, ಮುರುಘೇಂದ್ರ ಶಿವಾಚಾರ್ಯ ಸ್ವಾಮೀಜಿ ಹಾಗೂ ಅಧ್ಯಕ್ಷತೆ ವಹಿಸಿದ್ದ ಬಂಥನಾಳದ ವೃಷಭಲಿಂಗ ಶಿವಯೋಗಿ ಸ್ವಾಮೀಜಿ ಮಾತನಾಡಿದರು.

ಈಸಂದರ್ಭದಲ್ಲಿ ಉತ್ತರಾಧಿಕಾರಿ ಅಲ್ಲಮಪ್ರಭುದೇವರು, ಸಿದ್ದ ರೇಣುಕ ಶಿವಾಚಾರ್ಯರು, ಡಾ. ನೀಲಕಂಠ ಶಿವಾಚಾರ್ಯರು, ರಾಯಚೋಟೇಶ್ವರ ಶಿವಾಚಾರ್ಯರು, ಅಭಿನವ ಸಿದ್ದರಾಮೇಶ್ವರ ಸ್ವಾಮೀಜಿ, ಶಾಂತಯ್ಯ ಹಿರೇಮಠ, ಎಸ್.ಎಂ ದುಂಬಾಳಿ ಸೇರಿದಂತೆ ಸಕಲ ಸದ್ಭಕ್ತರು ಇದ್ದರು. ಸಿದ್ಧರಾಮ ಹಳ್ಳಿ ಹಾಗೂ ಪ್ರಕಾಶ ಸೊನ್ನದ ಕಾರ್ಯಕ್ರಮ ನಿರ್ವಹಿಸಿದರು.

ಸಾಮೂಹಿಕ ವಿವಾಹ: ಮೂರು ಜೋಡಿಗಳು ದಾಂಪತ್ಯ ಜೀವನಕ್ಕೆ ಕಾಲಿರಿಸಿದರು.

ಭವ್ಯ ರಥೋತ್ಸವ: ಡಾ. ಸಿದ್ದಲಿಂಗ ಶಿವಾಚಾರ್ಯ ಸ್ವಾಮೀಜಿ ಹಗ್ಗಿ ಹಾಯ್ದರು.

ಸಂಜೆ ಅನೇಕ ಮಠಾಧೀಶರ ಹಾಗೂ ಅಸಂಖ್ಯಾತ ಭಕ್ತರ ಸಮ್ಮುಖ ಭವ್ಯ ರಥೋತ್ಸವ ಜರುಗಿತು.

### ಗ್ರಾಮದ ಅಭಿವೃದ್ಧಿಗೆ ಶ್ರಮಿಸುವೆ



ಡೋಣೂರು ಗ್ರಾಮಕ್ಕೆ ಎಲ್ಲ ಕಡೆಗಳಿಂದ ಸುಗಮ ಸಂಚಾರಕ್ಕೆ ಉತ್ತಮ ರಸ್ತೆ ನಿರ್ಮಾಣ ಮಾಡಲಾಗಿದೆ. 35 ಕೋಟಿ ವೆಚ್ಚದಲ್ಲಿ ಡೋಣುರು ಹಾಗೂ ದೇಗಿನಾಳ ಬ್ರಿಡ್ಜ್ ನಿರ್ಮಾಣ ಕೂಡ ಶೀಘ್ರದಲ್ಲಿ ಆರಂಭವಾಗುವುದು. ಗ್ರಾಮಕ್ಕೆ ಕುಡಿಯುವ ನೀರಿನ ಸಮಸ್ಯೆ ಇತ್ತು. ವಿಜಯಪುರ, ಬಸವನಬಾಗೇವಾಡಿ ಹಾಗೂ ಸಿಂದಗಿ ತಾಲೂಕುಗಳಿಗೆ 2050ಕ್ಕೆ ಬೇಕಾಗುವಷ್ಟು ನೀರು ಪೂರೈಕೆಗೆ 13 ಸಾವಿರ ಕೋಟಿ ರೂಗಳ ಯೋಜನೆಗೆ ಹಸಿರು ನಿಶಾನೆ ಸಿಕ್ಕಿದೆ.

**ಶಿವಾನಂದ ಎಸ್ ಪಾಟೀಲ, ಕೃಷಿ ಮಾರುಕಟ್ಟೆ ಸಚಿವರು.**

# ಬಣಜಿಗ ಸಮಾಜ ತಾಲೂಕು ಅಧ್ಯಕ್ಷರಾಗಿ ಸಂಜೀವಕುಮಾರ್ ಚಂದಾಪುರ ಆಯ್ಕೆ

• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ಕರ್ನಾಟಕ ರಾಜ್ಯ ಬಣಜಿಗ ಸಮಾಜದ ಕ್ಷೇಮಾಭಿವೃದ್ಧಿ ಸಂಘದ ಗುರುಮಠಕಲ್ ತಾಲೂಕು ಅಧ್ಯಕ್ಷರಾಗಿ ಸಂಜೀವಕುಮಾರ್ ಚಂದಾಪುರ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.ಯಾದಗಿರಿಯ ಚಾಮಾ ಕಲ್ಯಾಣ ಮಂಟಪದಲ್ಲಿ ನಡೆದ ಜಿಲ್ಲಾ ಮಟ್ಟದ ಸಭೆಯಲ್ಲಿ ರಾಜ್ಯಾಧ್ಯಕ್ಷ ಶ್ರೀ ಮಲ್ಲಿಕಾರ್ಜುನ ರೊಡಗಿ, ಹಿರಿಯ ರಾಜ್ಯ ಉಪಾಧ್ಯಕ್ಷ ಶ್ರೀ ಅಂದಪ್ಪ ಜವಳಿ, ರಾಜ್ಯ ಸಂಘಟನಾ ಕಾರ್ಯದರ್ಶಿ ಶ್ರೀ ಮಲಕಪ್ಪ ಪಾಟೀಲ ಹಾಗೂ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಶ್ರೀ ಸೂಗುರೇಶ ವಾರದ ಅವರ ಸಮ್ಮುಖದಲ್ಲಿ ಜಿಲ್ಲಾ ಅಧ್ಯಕ್ಷರಾಗಿ ಬನ್ನಪ್ಪ ಸುಂಕದ ಹಾಗೂ ಗುರುಮಠಕಲ್ ತಾಲೂಕು ಅಧ್ಯಕ್ಷರಾಗಿ ಸಂಜೀವಕುಮಾರ್ ಚಂದಾಪುರ ಅವರನ್ನು ಘೋಷಿಸಲಾಯಿತು. ಆಯ್ಕೆಯಾದ ಬಳಿಕ ಮಾತನಾಡಿದ ಸಂಜೀವಕುಮಾರ್ ಚಂದಾಪುರ, ಸಮಾಜದ ಜನರಿಗೆ ಸರ್ಕಾರದ ಸೌಲಭ್ಯಗಳಾದ 2ಎ ಪ್ರಮಾಣ ಪತ್ರ, ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಸೇರಿದಂತೆ ವಿವಿಧ ಯೋಜನೆಗಳನ್ನು ಮನೆಮನೆಗೆ ತಲುಪಿಸುವ ಕಾರ್ಯವನ್ನು





ಪ್ರಾಮಾಣಿಕವಾಗಿ ಮಾಡುವುದಾಗಿ ತಿಳಿಸಿದರು. ಸಮಾಜದ ಸಂಘಟನೆಯನ್ನು ಇನ್ನಷ್ಟು ಬಲಪಡಿಸಿ ಯುವಕರನ್ನು ಸಮಾಜಮುಖಿ ಚಟುವಟಿಕೆಗಳಲ್ಲಿ ತೊಡಗಿಸುವ ಉದ್ದೇಶ ಹೊಂದಿರುವುದಾಗಿ ಹೇಳಿದರು.ಈ ಸಂದರ್ಭದಲ್ಲಿ ಗುರುಮಠಕಲ್ ಖಾಸಾಮಠದ ಶ್ರೀ ಮುರುಘರಾಜೇಂದ್ರ ಸ್ವಾಮೀಜಿ ಗದ್ದುಗೆಗೆ ಪೂಜೆ ಸಲ್ಲಿಸಲಾಯಿತು. ಸಮಾಜದ ಅಭಿವೃದ್ಧಿಗೆ ಎಲ್ಲರೂ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು ಎಂದು ಅಧ್ಯಕ್ಷರು ಕರೆ ನೀಡಿದರು.ಸಭೆಯಲ್ಲಿ ಶಿವಕುಮಾರ್ ಕೋಟಕೊಂಡಿ,ಧರ್ಮವೀರ ವಾರದ, ಸಿದ್ದು ನೆಲ್ಲೋಗಿ, ಬಸವರಾಜ್ ಅವಂಟಿ, ರವಿಕುಮಾರ್ ವಾರದ, ಗೌರಿಶಂಕರ ಭೂಮಾ, ರವಿ ಅಡ್ಕಿ, ರವಿಶಂಕರ ಮುತ್ತಾಗಿ, ಚಂದ್ರಶೇಖರ್ ಪಾಟೀಲ್, ಮಲ್ಲಿಕಾರ್ಜುನ ನಾರಗಡ್ಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಮಕ್ಕಳನ್ನು ರೋಬೋಟ್‌ಗಳನ್ನಾಗಿ ಮಾಡಬೇಡಿ:ರಾಜಕುಮಾರ ರಾಠೋಡ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.16:ಮಕ್ಕಳಲ್ಲಿ ಅಡಗಿರುವ ಸುಪ್ತ ಪ್ರತಿಭೆಯನ್ನು ಹೊರಹಾಕಲು ಬೇಸಿಗೆ ಶಿಬಿರಗಳು ಅತ್ಯುತ್ತಮವೇದಿಕೆಯಾಗಿದ್ದು, ಪಾಲಕರು ಕೇವಲ ಅಂಕಗಳಿಗೆ ಆದ್ಯತೆ ನೀಡಿಮಕ್ಕಳನ್ನು ಯಂತ್ರಗಳನ್ನಾಗಿ(ರೋಬೋಟ್) ಮಾಡಬಾರದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದರಾಜಕುಮಾರ ರಾಠೋಡತಿಳಿಸಿದರು. ಶುಕ್ರವಾರ ನಗರದ ರಂಗಾಯಣ ಸಭಾಂಗಣದಲ್ಲಿ ರಾಜ್ಯ ಬಾಲ ಭವನ ಸೊಸೈಟಿ ಬೆಂಗಳೂರು, ಜಿಲ್ಲಾ ಪಂಚಾಯತ್ ಕಲಬುರಗಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಬಾಲ ಭವನ ಸಮಿತಿ ಹಾಗೂ ರಂಗಾಯಣ ಕಲಬುರಗಿ ಇವರ ಸಂಯುಕ್ತಾಶ್ರಯದಲ್ಲಿ 5 ರಿಂದ 16 ವರ್ಷದ ಮಕ್ಕಳಿಗಾಗಿ ಹಮ್ಮಿಕೊಳ್ಳಲಾಗಿರುವ 15 ದಿನಗಳ ಜಿಲ್ಲಾ ಮಟ್ಟದ ಉಚಿತ ಬೇಸಿಗೆ ಶಿಬಿರದ ಸಮಾರಂಭ ಉದ್ಘಾಟಿಸಿ ಗಿಡಕ್ಕೆ ನೀರುಣಿಸುವ ಮೂಲಕ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಪಾಲಕರು ಕೇವಲ ಅಂಕ



ಗಳಿಕೆಗೆ ಹೆಚ್ಚಿನ ಪ್ರಾಮುಖ್ಯತೆ ನೀಡುತ್ತಿರುವುದರಿಂದ, ಮಕ್ಕಳು ತಮ್ಮಲ್ಲಿರುವ ನೈಜ ಪ್ರತಿಭೆ, ಆಸೆ ಮತ್ತು ಆಕಾಂಕ್ಷೆಗಳನ್ನು ವ್ಯಕ್ತಪಡಿಸಲು ವಿಫಲರಾಗುತ್ತಿದ್ದಾರೆ ಎಂದು ಅವರು ಕಳವಳ ವ್ಯಕ್ತಪಡಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ರಾಜ್ಯ ಬಾಲ ಭವನ ಸೊಸೈಟಿಯ ರಾಜ್ಯ ಉಪಾಧ್ಯಕ್ಷರಾದ ಅನಿಲ ಕುಮಾರ್ ಜಮಾದಾರ್ ಅವರು ಮಾತನಾಡಿ, "ಮೇ 15 ರಿಂದ ಮೇ 29 ರವರೆಗೆ ನಡೆಯುವ ಈ ಬೇಸಿಗೆ ಶಿಬಿರದ ಸದುಪಯೋಗವನ್ನು ಎಲ್ಲಾ ಮಕ್ಕಳು ಪಡೆದುಕೊಳ್ಳಬೇಕು. ಪಾಲಕರು ತಮ್ಮ ಮಕ್ಕಳನ್ನು ಎಲ್ಲರೊಂದಿಗೆ ಬೆರೆಯುವಂತೆ ಪ್ರೇರೇಪಿಸಬೇಕುಹಾಗೂ ವಿದ್ಯಾಭ್ಯಾಸದ ಜೊತೆಗೆ ವಿವಿಧ ಪಠ್ಯೇತರ ಚಟುವಟಿಕೆಗಳಲ್ಲೂ ಭಾಗವಹಿಸಲು ಉತ್ತೇಜನ ನೀಡಬೇಕು" ಎಂದು ಕರೆ ನೀಡಿದರು. ಮಕ್ಕಳಕಲ್ಯಾಣ ಸಮಿತಿಯ ಅಧ್ಯಕ್ಷರಾದ ವಿಶ್ವಾರಾಧ್ಯ ಇಜೇರಿ ಅವರು ಮಾತನಾಡಿ, "ಅಂಕಗಳಿಕೆಗಾಗಿ ಪಾಲಕರು ಮಕ್ಕಳ ಮೇಲೆ ಮಾನಸಿಕ ಒತ್ತಡ ಹೇರುತ್ತಿದ್ದಾರೆ. ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಪಠ್ಯೇತರ ಚಟುವಟಿಕೆಗಳು ಅತ್ಯಗತ್ಯ. ಅದರೊಂದಿಗೆ ಭಾರತದ ಅಮೂಲ್ಯವಾದ ಸಂಸ್ಕೃತಿಯನ್ನು ಪ್ರತಿಯೊಂದುಮಗುವಿನಲ್ಲೂ ಅಳವಡಿಸುವಲ್ಲಿ ಪಾಲಕರ ಪಾತ್ರ ಬಹುಮುಖ್ಯವಾಗಿದೆ" ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧೀಕ್ಷಕರಾದ ಶೋಭಾ, ಇಲಾಖೆಯಸಿಬ್ಬಂದಿ, ಸಂಪನ್ಮೂಲ ವ್ಯಕ್ತಿಗಳು, ಪಾಲಕರು ಹಾಗೂ ಮುದ್ದು ಮಕ್ಕಳು ಉಪಸ್ಥಿತರಿದ್ದರು. ವಿಠಲ ಕಾರ್ಯಕ್ರಮ ನಿರೂಪಿಸಿದರು ಮತ್ತು ಜಿಲ್ಲಾ ಬಾಲ ಭವನ ಕಚೇರಿ ಸಹಾಯಕರಾದ ಮಾನು ಎಂ. ಹೂಗಾರ ವಂದಿಸಿದರು.

# ನೀಟ್-ಯುಜಿ 2026 ಅಕ್ರಮ ಪ್ರಕರಣ : ನಿಷ್ಪಕ್ಷಪಾತ ತನಿಖೆಗೆ ಎಬಿವಿಪಿ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ನೀಟ್–ಯುಜಿ 2026 ಪರೀಕ್ಷೆಯಲ್ಲಿ ನಡೆದಿರುವ ಪ್ರಶ್ನೆಪತ್ರಿಕೆ ಸೋರಿಕೆ ಹಾಗೂ ವಿವಿಧ ಪರೀಕ್ಷಾ ಅಕ್ರಮಗಳ ಕುರಿತು ಕೇಂದ್ರ ಸರ್ಕಾರವು ನಿಷ್ಪಕ್ಷಪಾತ ಮತ್ತು ಪರೀಕ್ಷಾ ಅಕ್ರಮ ವಿರೋಧಿ ವಿಶೇಷ ಕಠಿಣ ಕಾಯ್ದೆ ಜಾರಿಗೆ ತರಬೇಕು ಹಾಗೂ ಸಮಗ್ರ ತನಿಖೆ ನಡೆಸಬೇಕು ಎಂದು ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ (ಎಬಿವಿಪಿ) ಒತ್ತಾಯಿಸಿದೆ.

ಈ ಕುರಿತು ಪ್ರಧಾನ ಮಂತ್ರಿಗಳಿಗೆ ಮನವಿ ಸಲ್ಲಿಸಿದ ಎಬಿವಿಪಿ ಕಾರ್ಯಕರ್ತರು, ದೇಶದ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯಕ್ಕೆ ಸಂಬಂಧಿಸಿದ ರಾಷ್ಟ್ರೀಯ ಮಟ್ಟದ ಪರೀಕ್ಷೆಗಳಲ್ಲಿ ಪಾರದರ್ಶಕತೆ ಹಾಗೂ ವಿಶ್ವಾಸಾರ್ಹತೆ ಕಾಪಾಡುವುದು ಅತ್ಯಂತ ಅಗತ್ಯವಾಗಿದೆ ಎಂದು ತಿಳಿಸಿದರು.ಹೇಮಂತ ವಿಭಾಗ ಸಂಘಟನ ಕಾರ್ಯದರ್ಶಿಗಳಾದ ಮಾತನಾಡಿ,ನೀಟ್–ಯುಜಿ 2026 ಪರೀಕ್ಷೆಯಲ್ಲಿ ಪ್ರಶ್ನೆಪತ್ರಿಕೆ ಸೋರಿಕೆ ಹಾಗೂ ಅಕ್ರಮಗಳ ಕುರಿತು ವಿವಿಧ ಮಾಧ್ಯಮಗಳಲ್ಲಿ ವರದಿಗಳು ಪ್ರಕಟವಾಗಿದ್ದು, ವಿದ್ಯಾರ್ಥಿಗಳು ಮತ್ತು ಪೋಷಕರಲ್ಲಿ ಆತಂಕ ಸೃಷ್ಟಿಯಾಗಿದೆ. ಪರಿಶ್ರಮಪಟ್ಟು ಪರೀಕ್ಷೆಗೆ ಸಿದ್ಧತೆ ನಡೆಸುವ ವಿದ್ಯಾರ್ಥಿಗಳಿಗೆ ಇದು



ದೊಡ್ಡ ಅನ್ಯಾಯವಾಗಿದ್ದು, ಪ್ರಕರಣದ ಕುರಿತು ಕೇಂದ್ರತನಿಖಾ ಸಂಸ್ಥೆಗಳ ಮೂಲಕ ನ್ಯಾಯಸಮ್ಮತ ಹಾಗೂ ಪರೀಕ್ಷಾ ಅಕ್ರಮ ವಿರೋಧಿ ವಿಶೇಷ ಕಠಿಣ ಕಾಯ್ದೆ ಜಾರಿಗೆ ತರಬೇಕು,ನೀಟ್ ಅಕ್ರಮದಲ್ಲಿ ಭಾಗಿಯಾದವರಿಗೆ ಜೀವಾವಧಿ ಶಿಕ್ಷೆ ಅಥವಾ ದೀರ್ಘಾವಧಿ ಕಠಿಣ ಶಿಕ್ಷೆ ವಿಧಿಸುವ ವ್ಯವಸ್ಥೆ ಮಾಡಬೇಕು ,ಪ್ರಶ್ನೆಪತ್ರಿಕೆ ಸೋರಿಕೆ ರಾಷ್ಟ್ರದ ಭವಿಷ್ಯದ ವಿರುದ್ಧದ ಅಪರಾಧ ಎಂದು ಘೋಷಿಸಬೇಕು"ಒಬ್ಬ ವಿದ್ಯಾರ್ಥಿಯ ಕನಸು ಹಾಳು ಮಾಡಿದರೆ – ದೇಶದ ಭವಿಷ್ಯ ಹಾಳು ಮಾಡಿದಂತೆಯೇ" ಎಂಬ ನೀತಿಯಲ್ಲಿ ಸರ್ಕಾರ ಕ್ರಮ ಕೈಗೊಳ್ಳಬೇಕು ನಿಗದಿತ ಅವಧಿಯೊಳಗಿನ ತನಿಖೆ ನಡೆಸಬೇಕು ಎಂದು ಆಗ್ರಹಿಸಿದರು.ಪರೀಕ್ಷಾ ಮಾಫಿಯಾ ಸೇರಿದಂತೆ ಅಕ್ರಮದಲ್ಲಿ ಭಾಗಿಯಾಗಿರುವ ಎಲ್ಲರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ಜೊತೆಗೆ ರಾಷ್ಟ್ರೀಯ ಪರೀಕ್ಷಾ ಸಂಸ್ಥೆ (ಎನ್.ಟಿ.ಎ) ತನಿಖೆ ಪೂರ್ಣಗೊಳ್ಳುವವರೆಗೆ ಸಂಪೂರ್ಣ ಪಾರದರ್ಶಕತೆ ಕಾಪಾಡಿಕೊಂಡು ವಿದ್ಯಾರ್ಥಿಗಳು ಹಾಗೂ ಪೋಷಕರಿಗೆ ವಾಸ್ತವಾಂಶಗಳನ್ನು ಬಹಿರಂಗಪಡಿಸಬೇಕು ಎಂದು ಒತ್ತಾಯಿಸಲಾಗಿದೆ.ಭವಿಷ್ಯದಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ರಾಷ್ಟ್ರೀಯ ಮಟ್ಟದ ಪರೀಕ್ಷೆಗಳಲ್ಲಿ ತಾಂತ್ರಿಕ ಭದ್ರತೆ, ಪ್ರಶ್ನೆಪತ್ರಿಕೆಯ ಗೌಪ್ಯತೆ ಹಾಗೂ ಪರೀಕ್ಷಾ ಕೇಂದ್ರಗಳ ಮೇಲ್ವಿಚಾರಣೆಯನ್ನು ಮತ್ತಷ್ಟು ಬಲಪಡಿಸಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಮಹಾನಗರ ಕಾರ್ಯದರ್ಶಿ ಶರಣು ಪೂಜಾರಿ,ವಿಭಾಗ ಸಂಘಟನ ಕಾರ್ಯದರ್ಶಿ ಹೇಮಂತ, ರಾಜ್ಯ ಕಾರ್ಯಕಾರಣಿ ಸದಸ್ಯರಾದ ಸಿದ್ದಲಿಂಗ ತಳವಾರ,ಮನೋಜ ಪಾಟೀಲ,ಶ್ರವಣ ಜಳಕಿ,ರಾಜಪ್ಪ,ಸಾವನ ಕಾರ್ಯಕರ್ತ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಕವಿವಿ ಮಟ್ಟದಎನ್.ಎಸ್.ಎಸ್. ನಾಯಕತ್ವ ಶಿಬಿರ : ಸ್ವಯಂ ಸೇವಕರಿಂದ ಕಡಲ ತೀರ ಸ್ವಚ್ಛತೆ

• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ಪಟ್ಟಣದಗೋಖಲೆಸೆಂಟಿನರಿಕಾಲೇಜಿನಲ್ಲಿಪ್ರಾರಂಭವಾಗಿರುವ ಕವಿವಿ ಮಟ್ಟದ ಎನ್‌ಎಸ್‌ಎಸ್. ನಾಯಕತ್ವ ಶಿಬಿರದ ನೂರಾರು ಸ್ವಯಂಸೇವಕರುಶನಿವಾರ ಮುಂಜಾನೆಸಮೀಪದ ನದಿಭಾಗ ಕಡಲತೀರದಲ್ಲಿ ಸ್ವಚ್ಛತಾ ಅಭಿಯಾನ ನಡೆಸಿದರು. ಸಮುದ್ರತೀರದಲ್ಲಿ ಹರಡಿದ್ದಸುಮಾರು ಹತ್ತು ಚೀಲ ಪ್ಲಾಸ್ಟಿಕ್ ತ್ಯಾಜ್ಯವನ್ನು ಸಂಗ್ರಹಿಸಿ ವಿಲೇವಾರಿ ಮಾಡಿದರು. ಅರಣ್ಯ ಇಲಾಖೆಯ ಕರಾವಳಿಮತ್ತು ಮರಿನ್ ಇಕೊ ಸಿಸ್ಟಮ್ ಕಾರವಾರ ಘಟಕದ ಸಹಯೋಗದಲ್ಲಿ ಸ್ವಚ್ಛತಾ ಕಾರ್ಯಕ್ರಮ ನಡೆಸಲಾಯಿತು. ಸ್ವಚ್ಛತಾ ಅಭಿಯಾನಕ್ಕೆ ಚಾಲನೆ ನೀಡಿದಅರಣ್ಯಾಧಿಕಾರಿಕಿರಣ



ಮನ್ವಾಚಾರಿ ಮಾತನಾಡಿ,ಸಮುದ್ರ ಪ್ರದೇಶದಲ್ಲಿ ಮಾಲಿನ್ಯದಿಂದಾಗಿಕಡಲಜೀವಿಗಳಿಗೆಅಪಾಯಉಂಟಾಗುತ್ತಿದೆಎಂದರು. ಉಪವಲಯಅರಣ್ಯಾಧಿಕಾರಿರಾಜೇಶನಾಯ್ಕಕಡಲಾಮೆಗಳ ಜೀವನಚಕ್ರ,ಸಮುದ್ರಪರಿಸರವ್ಯವಸ್ಥೆಯಲ್ಲಿಆಮೆಗಳಪಾತ್ರ ಹಾಗೂ ಆಮೆಗಳ ಸಂತತಿಯನ್ನುರಕ್ಷಿಸುವುದರ ಮಹತ್ವಕುರಿತುವಿದ್ಯಾರ್ಥಿಗಳಿಗೆಮಾಹಿತಿನೀಡಿದರು.ಈ ಸಂದರ್ಭದಲ್ಲಿ ಸಿಬ್ಬಂದಿಗಳಾದಮಲ್ಲಿಕಾರ್ಜುನ ಭಂಡಾರಿ, ಸುನೀಲ್, ಸುದರ್ಶನ, ಸತೀಶ ಹಾಗೂಪ್ರಾಚಾರ್ಯಡಾ.ಎಸ್.ವಿ.ವಸ್ತ್ರದ,ಎನ್.ಎಸ್.ಎಸ್. ಅಧಿಕಾರಿಗಳಾದ ಡಾ. ನಂಜುಂಡಯ್ಯ,ಡಾ. ರೇಖಾ ಯಲಿಗಾರ, ಉಪನ್ಯಾಸಕರಾದ ಕೆ. ಬಿ. ಮಹಾಲೆ, ನಿಶಾನ್ ನಾಯ್ಕ ಉಪಸ್ಥಿತರಿದ್ದರು.

# ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ 17 : ಯಾದಗಿರಿ ಜಿಲ್ಲೆಯಾದ್ಯಂತ2026ರ ಮೇ 18 ರಿಂದ 23ರ ವರೆಗೆ ಎಸ್.ಎಸ್.ಎಲ್.ಸಿ ಪರೀಕ್ಷೆ–2 ನಡೆಸಲಾಗುತ್ತಿದ್ದು, ಈ ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆಯನ್ನು ಜಾರಿಗೊಳಿಸಿ ಯಾದಗಿರಿ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು ಆದೇಶ ಹೊರಡಿಸಿದ್ದಾರೆ.ಯಾದಗಿರಿ ಜಿಲ್ಲೆಯಲ್ಲಿ ದಂಡ ಪ್ರಕ್ರಿಯೆ ಬಿ.ಎನ್.ಎಸ್.ಎಸ್, 2023ರ ಕಲಂ 163 ಅನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ 2026ರ ಮೇ 18, ಮೇ.19 ಮೇ.20, ಮೇ.21, ಮೇ.22, ಮೇ.23 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1.30 ಗಂಟೆಯ ವರೆಗೆ ಎಸ್.ಎಸ್.ಎಲ್.ಸಿ ಪರೀಕ್ಷೆ–2 ಯಾದಗಿರಿ ಜಿಲ್ಲೆಯ ಗುರುಮಠಕಲ್ ತಾಲೂಕಿನ 4 ಪರೀಕ್ಷಾ ಕೇಂದ್ರಗಳು, ಶಹಾಪೂರ, ವಡಗೇರಾ ತಾಲೂಕಿನ 6 ಪರೀಕ್ಷಾ ಕೇಂದ್ರಗಳು ಮತ್ತು ಸುರಪುರ, ಹುಣಸಗಿ ತಾಲೂಕಿನ 3 ಪರೀಕ್ಷಾ ಕೇಂದ್ರಗಳು ಒಟ್ಟು ಜಿಲ್ಲೆಯಲ್ಲಿ 13 ಪರೀಕ್ಷಾ ಕೇಂದ್ರಗಳಲ್ಲಿ ನಡೆಸಲಾಗುತ್ತಿದ್ದು, ಈ ಪರೀಕ್ಷೆಯು ಸುಸೂತ್ರವಾಗಿ ನಡೆಸುವ ಹಿತದೃಷ್ಟಿಯಿಂದ, ಪರೀಕ್ಷಾ ದಿನಗಳಂದು ಬೆಳಿಗ್ಗೆ 8.30 ರಿಂದ ಮಧ್ಯಾಹ್ನ 3 ಗಂಟೆಯ ವರೆಗೆ ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆಯನ್ನು ಜಾರಿಗೊಳಿಸಿ ಹಾಗೂ ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲೂ ಇರುವ ಬೆರಳಚ್ಚು ಕೇಂದ್ರ ಝುರಾಕ್ಸ್ ಮಳಿಗೆ ಹಾಗೂ ಪುಸ್ತಕದ ಮಳಿಗೆಗಳನ್ನು ಮುಚ್ಚಲು ಷರತ್ತಿಗೊಳಪಟ್ಟು ಆದೇಶಿಸಿದೆ.ಷರತ್ತುಗಳು : ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್, ವ್ಯಾಪ್ತಿಯಲ್ಲಿ ಯಾವುದೇ ರೀತಿಯ ಎಸ್.ಟಿ.ಡಿ ಮೊಬೈಲ್ ಬ್ಲೂಟೂತ್ ಡಿವೈಸ್, ಡಿಜಿಟಲ್ ವಾಚ್, ಪೇಜರ್, ವೈರಲೆಸ್, ಝುರಾಕ್ಸ್ ಟೈಪಿಂಗ್, ಪುಸ್ತಕ ಮಳಿಗೆಗಳು ಮುಂತಾದವುಗಳನ್ನು ನಿಷೇಧಿಸಲಾಗಿದೆ. ಪರೀಕ್ಷಾ ಕೇಂದ್ರದಲ್ಲಿ ನಿಗದಿಪಡಿಸಿದ ಅಧಿಕಾರಿಗಳನ್ನು, ಶಿಕ್ಷಕರನ್ನು ಹೊರತುಪಡಿಸಿ ಇನ್ನುಳಿದವರಿಗೆ ಪರವಾನಿಗೆ ಇಲ್ಲದೇ ಪರೀಕ್ಷಾ ಕೇಂದ್ರದಲ್ಲಿ ಪ್ರವೇಶ ಮಾಡುವುದನ್ನು ನಿಷೇಧಿಸಲಾಗಿದೆ. 200 ಮೀಟರ್ ಪರೀಕ್ಷಾ ಕೇಂದ್ರದ ಸುತ್ತಲೂ ಜನರು ಮಾರಕಾಸ್ತ್ರಗಳನ್ನು ಹಿಡಿದು ತಿರುಗಾಡುವದನ್ನು ನಿಷೇಧಿಸಿದೆ. ಮದುವೆ, ಶವ ಸಂಸ್ಕಾರಗಳು ಹಾಗೂ ಇನ್ನಿತರ ಧಾರ್ಮಿಕ ಕಾರ್ಯಕ್ರಮಗಳಿಗೆ ಈ ಆದೇಶ ಅನ್ವಯವಾಗುವುದಿಲ್ಲ. ಲಿಂಗೇರಿ ಕೋನಪ್ಪ ಆರ್.ನಾಡಗೌಡ ಸ್ಮಾರಕ ಪ್ರೌಢ ಶಾಲೆ, ಯಾದಗಿರಿ ಪರೀಕ್ಷಾ ಕೇಂದ್ರ ಭಾಗ್ಯಲಕ್ಷ್ಮಿ ??? ಚಿತ್ರಮಂದಿರಕ್ಕೆ ಹೊಂದಿದ ಅಂದು ಯಾವುದೇ ಚಲನ ಚಿತ್ರಗಳ ಪ್ರದರ್ಶನವನ್ನು ನಿಷೇಧಿಸಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನೀಟ್ ಪರಿಕ್ಷೆ ಅವ್ಯವಸ್ಥೆ:ಡಾ.ಕಾಮರಡ್ಡಿ ಖಂಡನೆ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ನೀಟ್ ಪರೀಕ್ಷೆಯ ಪ್ರಶ್ನೆಪತ್ರಿಕೆ ಸೋರಿಕೆ ಹಾಗೂ ಪರೀಕ್ಷಾ ಪ್ರಕ್ರಿಯೆಯಲ್ಲಿನ ಗೊಂದಲಗಳು ದೇಶದ ಶಿಕ್ಷಣ ವ್ಯವಸ್ಥೆಯ ಮೇಲಿನ ವಿಶ್ವಾಸವನ್ನೇ ಕುಸಿಯುವಂತೆ ಮಾಡಿದ್ದು, ಇದು ವಿದ್ಯಾರ್ಥಿಗಳಿಗೆ ಕೇಂದ್ರ ಸರ್ಕಾರ ಎಸಗಿದ ದ್ರೋಹವಾಗಿದೆ ಎಂದು ಯಾದಗೀರಿ ಮತಕ್ಷೇತ್ರದ ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ ಹಾಗೂ ಖ್ಯಾತ ವೈದ್ಯರಾದ ಡಾ. ಎಸ್.ಬಿ. ಕಾಮರಡ್ಡಿ ಅವರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.ಈ ಕುರಿತು ಪತ್ರಿಕಾ ಪ್ರಕಟಣೆ ತಿಳಿಸಿರುವ ಅವರು, ದೇಶದಾದ್ಯಂತ ಸುಮಾರು 22 ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳು ವೈದ್ಯಕೀಯ ಶಿಕ್ಷಣದ ಕನಸಿನೊಂದಿಗೆ ನೀಟ್ ಪರೀಕ್ಷೆಗೆ ಸಿದ್ಧತೆ ನಡೆಸಿದ್ದರು. ಕರ್ನಾಟಕವೊಂದರಲ್ಲೇ ಸುಮಾರು 1 ಲಕ್ಷಕ್ಕೂ ಅಧಿಕ ವಿದ್ಯಾರ್ಥಿಗಳು ಹಗಲು–ರಾತ್ರಿ ಶ್ರಮಪಟ್ಟು ಪರೀಕ್ಷೆಗೆ ತಯಾರಾಗಿದ್ದರು. ವಿದ್ಯಾರ್ಥಿಗಳ ಜೊತೆಗೆ ಪೋಷಕರು ಕೂಡ ಮಕ್ಕಳ ಭವಿಷ್ಯಕ್ಕಾಗಿ ಅನೇಕ ತ್ಯಾಗಗಳನ್ನು ಮಾಡಿದ್ದಾರೆ. ಆದರೆ, ಪರೀಕ್ಷೆಯನ್ನು ಪಾರದರ್ಶಕವಾಗಿ ಹಾಗೂ ಸುರಕ್ಷಿತವಾಗಿ ನಡೆಸುವಲ್ಲಿ ಕೇಂದ್ರ ಸರ್ಕಾರ ಸಂಪೂರ್ಣವಾಗಿ ವಿಫಲವಾಗಿದೆ ಎಂದು ಟೀಕಿಸಿದ್ದಾರೆ.ಪ್ರತಿ ವರ್ಷವೂ ನೀಟ್ ಪರೀಕ್ಷೆಯಲ್ಲಿ ಪ್ರಶ್ನೆಪತ್ರಿಕೆ ಸೋರಿಕೆ, ಅಕ್ರಮ ಹಾಗೂ ಅವ್ಯವಸ್ಥೆಗಳು ಮರುಕಳಿಸುತ್ತಿದ್ದು, ವಿದ್ಯಾರ್ಥಿಗಳ ಭವಿಷ್ಯದೊಂದಿಗೆ ಚೆಲ್ಲಾಟವಾಡುವ ಪರಿಸ್ಥಿತಿ ನಿರ್ಮಾಣವಾಗಿದೆ.ವಿದ್ಯಾರ್ಥಿಗಳ ಪರಿಶ್ರಮ, ಪೋಷಕರ ಕನಸು ಮತ್ತು ದೇಶದ ಶಿಕ್ಷಣ ವ್ಯವಸ್ಥೆಯ ಗೌರವವನ್ನು ರಕ್ಷಿಸುವಲ್ಲಿ ಕೇಂದ್ರ ಸರ್ಕಾರ ಸತತವಾಗಿ. ವಿಫಲವಾಗುತ್ತಿದೆ ಎಂದು ಅವರು ಬೇಸರ ವ್ಯಕ್ತಪಡಿಸಿದ್ದಾರೆ.ಒಂದೆಡೆ ವಿದ್ಯಾರ್ಥಿಗಳು ವರ್ಷಪೂರ್ತಿ ಶ್ರಮಪಟ್ಟು ಪರೀಕ್ಷೆಗೆ ಸಿದ್ಧರಾಗುತ್ತಿದ್ದಾರೆ, ಇನ್ನೊಂದೆಡೆ ಸರ್ಕಾರದ ನಿರ್ಲಕ್ಷ್ಯ ಮತ್ತು ವ್ಯವಸ್ಥೆಯ ದೋಷದಿಂದ ಅವರ ಕನಸುಗಳು ಭಗ್ನಗೊಳ್ಳುತ್ತಿವೆ. ಇದು ಕೇವಲ ಆಡಳಿತಾತ್ಮಕ ವೈಫಲ್ಯವಲ್ಲ, ಬದಲಾಗಿ ದೇಶದಯುವಜನತೆಗೆ ಮಾಡುತ್ತಿರುವ ಅನ್ಯಾಯವಾಗಿದೆ ಎಂದು ಡಾ. ಕಾಮರಡ್ಡಿ ಟೀಕಿಸಿದ್ದಾರೆ.ನೀಟ್ ಪರೀಕ್ಷೆಯಲ್ಲಿನ ಅಕ್ರಮಗಳ ಕುರಿತು ಸಮಗ್ರ ಹಾಗೂ ಪಾರದರ್ಶಕ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು' ಎಂದು ಆಗ್ರಹಿಸಿದ್ದಾರೆ.

# ಭೀಮಾಂಬಿಕಾದೇವಿ ಮಠದಲ್ಲಿ 386 ನೇ ಶಿವಾನುಭವ ಗೋಷ್ಠಿ



• ಮಲ್ಲಮ್ಮ ನುಡಿ ವಾರ್ತೆಯಲಬುರ್ಗಾ

ತಾಯಿ ತಂದೆಗಳೆ ನಿಜವಾದ ದೇವರು ಅವರನ್ನು ನಾವು ಪ್ರೀತಿಯಿಂದ ಕಾಣಬೇಕು ,ಅವರಿಗೆ ಗೌರವ ಕೊಡಬೇಕು ಅಂದಾಗ ನಮ್ಮ ಬದುಕು ಸಾರ್ಥಕವಾಗುತ್ತದೆ ಎಂದು ಇನ್ನರ್ ವೀಲ್ ಕ್ಲಬ್ ಅದ್ಯಕ್ಷೆ ಚೆನ್ನಮ್ಮ ಪಾಟೀಲ್ ಅವರು ದಮ್ಮೂರು ಗ್ರಾಮದ ಶ್ರೀ ಭೀಮಾಂಬಿಕಾ ದೇವಿಯ ಮಠದಲ್ಲಿ 386 ನೇ ಶಿವಾನುಭವ ಗೋಷ್ಠಿಯಲ್ಲಿ " ಮಾತೃ ದೇವೋ ಭವ ಚಿಂತನ ಗೋಷ್ಠಿಯಲ್ಲಿ ಮಾತನಾಡಿದರು. ತಾಯಿ ಮಕ್ಕಳಗೆ ಸಂಸ್ಕಾರ ಸಂಕೃತಿ ಕಲಿಸುವ ಜೋತೆಗೆ ಮಕ್ಕಳನ್ನು ಬೆಳೆಸುತ್ತಾಳೆ ಆದರೆ ತಂದೆ ಆರ್ಥಿಕ ವೆಚ್ಚವನ್ನು ಭರಿಸುತ್ತಾನೆ ಇವರಿಬ್ಬರ ಸೇವೆ ಅಪಾರವಾಗಿದೆ ಎಂದು ಇನ್ನರ್ ವೀಲ್ ಕ್ಲಬ್ ಮಾಜಿ ಅದ್ಯಕ್ಷೆ ಶಕುಂತಲಾದೇವಿ ಮಾಲಿ ಪಾಟೀಲ್ ಅವರು ಶ್ರೀ ಭೀಮಾಂಬಿಜಾದೇವಿ ಮಠದಲ್ಲಿ , ಬಾದಮಿ ಅಮಾವಾಸ್ಯೆ ಚತುರ್ದಶಿ ನಿಮಿತ್ತವಾಗಿ ತಾಲೂಕಿನ ದಮ್ಮೂರ ಗ್ರಾಮದಲ್ಲಿ 386 ನೇ ಶಿವಾನುಭವ ಗೋಷ್ಠಿಯಲ್ಲಿ ಮಾತೃ ದೇವೋ ಭವ ವಿಷಯ ಕುರಿತು ಮಾತನಾಡಿದರು. ಮಠದ ಒಡೆ–ಯರಾದ ಹನುಮಂತಪ್ಪಜ್ಜ ಧರ್ಮರಮಠ, ಹಾಗು ಶರಣಯ್ಯ ಹಿರೇಮಠ ಸಾನಿಧ್ಯ ವಹಿಸಿದ್ದರು. ಒಬ್ಬ ತಾಯಿ ತನ್ನ ಕಷ್ಟಗಳನ್ನು ಸಹಿಸಿಕೊಂಡು ತಾನು ಉಪವಾಸವಿದ್ದು ಹತ್ತು ಮಕ್ಕಳನ್ನು ಜೋಪಾನ ಮಾಡಿ ಬೇಳೆಸುತ್ತಾಳೆ ಆದರೆ ಹತ್ತು ಮಕ್ಕಳು ಸೇರಿ ಒಬ್ಬ ತಾಯಿಯನ್ನು ಜೋಪಾನ ಮಾಡಲಾರದ ಪರಿಸ್ಥಿತಿ ಇಂದು ನಿರ್ಮಾಣವಾಗಿದೆ ಆದ್ದರಿಂದ ತಾಯಿ ತಂದೆಯವರನ್ನು ಪ್ರೀತಿಯಿಂದ ಕಾಣಬೇಕು ಎಂದು ಶ್ರೀ ಭೀಮಾಂಭಿಕಾದೇವಿ ಶಿವಾನುಭವ ಸೇವಾ ಸಮಿತಿ ಅದ್ಯಕ್ಷ ಶರಣಬಸಪ್ಪ ದಾನಕೈ ಅವರು ಅದ್ಯಕ್ಷತೆ ವಹಿಸಿ ಮಾತನಾಡಿದರು. ಈ ವೇಳೆ ಹುಲಗಪ್ಪ ಬಂಡಿವಡ್ಡರ, ಮಹೇಶ ಕಟಗೇರಿ ಭೀಮಣ್ಣ ಹವಳಿ ಮಾತನಾಡಿದರು. ಈರಪ್ಪ ರಾವಣಕಿ,ಡಿ. ಮೌನೇಶ ಬಡಿಗೇರ, ಬಸವರಾಜ ಪ್ರಭಣ್ಣನವರ, ಮಾಬುಸಾಬ ವಾಲಿಕಾರ,ಹೆಚ್.ಪಿ.ವಾಲಿಕಾರ,ಈರಣ್ಣ ಕಟಗೇರಿ, ಭೀಮಣ್ಣ ಚಿಕ್ಕಗೌಡ್ರ,ಬಸವರಾಜ ಮೇಲಸಕ್ರಿ,ಗುರುಮೂರ್ತಿ ಬಡಿಗೇರ , ಉಪಸ್ಥಿತಿ ಇದ್ದರು. ಈಶಪ್ಪ ಪ್ರಭಣ್ಣನವರ, ಸಂಕ್ರಪ್ಪ ಬಡಿಗೇರ ಕಳಕಪ್ಪ ಹಡಪದ ಸಂಗೀತ ಸೇವೆ ನೀಡಿದರು. ಬಳಿಕ ಅನ್ನ ಸಂತರ್ಪಣೆ ಜರುಗಿತು.

# ಮೃತರ ಕುಟುಂಬಕ್ಕೆ ಪ್ರತಿ ವಕ್ತಿಗೂ10 ಲಕ್ಷ ಪರಿಹಾರ ನೀಡಬೇಕೆಂದು ಸರ್ಕಾರಕ್ಕೆ ಬಿಜೆಪಿಗರ ಒತ್ತಾಯ


• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಶುಕ್ರವಾರ ದಿವಸ ಮುನಿರಾಬಾದ್ ಬಳಿಯ ರಾಷ್ಟ್ರೀಯ ಹೆದ್ದಾರಿಯ ಸೇತುವೆ ಮೇಲಿಂದ ಟ್ರ್ಯಾಕ್ಟರ್ ಕೆಳಗೆ ಬಿದ್ದ ಘಟನೆಯಲ್ಲಿ ಗಾಯಗೊಂಡಿರುವವರನ್ನು ಇಂದು ಮಾಜಿ ಸಚಿವ ಬಿ ಶ್ರೀರಾಮಲು ರವರೊಂದಿಗೆ ಕೊಪ್ಪಳ ಬಿಜೆಪಿ ಜಿಲ್ಲಾಅಧ್ಯಕ್ಷ ನವೀನಕುಮಾರ ಗುಳಗಣ್ಣವರ ಅವರು ಕೊಪ್ಪಳ ಜಿಲ್ಲಾ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ಆರೋಗ್ಯ ವಿಚಾರಿಸಿದರು,ಈ ವೇಳೆ ವೈದ್ಯರನ್ನು ಭೇಟಿ ಮಾಡಿ ಗಾಯಾಳುಗಳಿಗೆ ಸೂಕ್ತ ಚಿಕಿತ್ಸೆ ನೀಡುವಂತೆ ತಿಳಿಸಿದರು ಮೃತರ ಕುಟುಂಬಕ್ಕೆ ಪ್ರತಿ ವ್ಯಕ್ತಿಗೂ 10 ಲಕ್ಷ ರೂಪಾಯಿ ನೀಡಬೇಕೆಂದು ಸರ್ಕಾರಕ್ಕೆ ಒತ್ತಾಯಿಸಿದರು.ಗಾಯಾಳುಗಳು ಶೀಘ್ರ ಗುಣಮುಖರಾಗಲಿ ಎಂದು ದೇವರಲ್ಲಿ ಪ್ರಾರ್ಥಿಸುತ್ತೇನೆ. ಇಂತಹ ದುರ್ಘಟನೆಗಳು ಮತ್ತೆ ಮರುಕಳಿಸದಿರಲಿ ಎಂದು ಹೇಳಿದರು .ಈ ಸಂಧರ್ಭದಲ್ಲಿ ಡಾ ಬಸವರಾಜ್ ಕ್ಯಾವಟರ , ಗ್ರಾಮೀಣ ಮಂಡಲದ ಅಧ್ಯಕ್ಷ ವೀರೇಶ್ ಸಜ್ಜನ್, ನಗರ ಮಂಡಲದ ಅಧ್ಯಕ್ಷ ಅಮರೇಶ್ ಮುರಳಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸುನಿಲ್ ಹೆಸರೂರು, ಮತ್ತು ಮಹೇಶ್ ಅಂಗಡಿ, ಚನ್ನಬಸವ ಗಾಳಿ, ದೇವರಾಜ್, ರಘು ಚಕ್ರವರ್ತಿ, ಪ್ರದೀಪ್ ಹಿಟ್ನಾಳ, ಬಾಬು ರಾವ್, ರಾಜು ವಸ್ತ್ರದ, ಶಂಕರ್ ನರೇಗಲ, ಪಂಪಯ್ಯ ಹಿರೇಮಠ್, ನೀಲಕಂಠಯ್ಯ ಹಿರೇಮಠ್, ಮಾರುತಿ ಅಲ್ಲಾನಗರ, ಸಿದ್ದು ಪಾಟೀಲ್, ರಮೇಶ್ ಕವಲೂರ, ಹಾಗೂ ಪಕ್ಷದ ಮುಖಂಡರು ಭಾಗವಹಿಸಿದ್ದರು

# ವೀರಶೈವ ಮಹಾಸಭೆಗೆ ಅರುಣಿ ನೇಮಕ: ಜಿಲ್ಲಾ ಜೆಡಿಎಸ್ ನಿಂದ ಹೃದಯಸ್ಪರ್ಷಿ ಸನ್ಮಾನ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ಗುರುಮಠಕಲ್ ತಾಲ್ಲೂಕಿನ ಕ್ರಿಯಾಶೀಲ ಯುವ ನಾಯಕ, ಸಂಘಟನಾ ಚತುರನಾದ ಮಲ್ಲಿಕಾರ್ಜುನ ಅರುಣಿ ಅವರಿಗೆ ವೀರಶೈವ ಲಿಂಗಾಯತ ಮಹಾಸಭೆಯ ಯುವ ಘಟಕದ ರಾಷ್ಟ್ರೀಯ ಪದಾಧಿಕಾರಿಗಳಲ್ಲಿ ಸ್ಥಾನ ದೊರೆತಿರುವುದು ಜಿಲ್ಲೆಗೆ ಸಂದ ಗೌರವವಾಗಿದೆ ಎಂದು ಜೆಡಿಎಸ್ ಜಿಲ್ಲಾಧ್ಯಕ್ಷ ಶುಭಾಶ್ಚಂದ್ರ ಕಟಕಟಿ ಅಭಿಪ್ರಾಯಪಟ್ಟರು.

ರವಿವಾರ ಇಲ್ಲಿನ ಗುರುಮಠಕಲ್ ಶಾಸಕ ಶರಣಗೌಡ ಕಂದಕೂರು ಅವರ ಜನಸಂಪರ್ಕ ಕಚೇರಿಯಲ್ಲಿ ಜೆಡಿಎಸ್ ಪಕ್ಷದ ವತಿಯಿಂದ ಹಮ್ಮಿಕೊಂಡಿದ್ದ ಸನ್ಮಾನ ಕಾರ್ಯಕ್ರಮದಲ್ಲಿ ಆತ್ಮೀಯವಾಗಿ ಸನ್ಮಾನಿಸಿ ಮಾತನಾಡಿದರು.

ರಾಜಕೀಯದ ಜೊತೆ ಜೊತೆಯಲ್ಲಿ ಸಮಾಜದ ಸಂಘಟನೆಯಲ್ಲಿ ಕ್ರಿಯಾಶೀಲರಾಗಿ ಕಾರ್ಯನಿರ್ವಹಿಸುತ್ತಾ ಬಂದಿರುವ ಅರುಣಿ ಇವರಿಗೆ ಮನೆತನದ ಹಿನ್ನೆಲೆಯಲ್ಲಿಯೇ ಸೇವೆ ಹಾಗೂ ಗುರು ಹಿರಿಯರ ಸಮಾಜದ ಸೇವೆಯ ಗುಣ ರಕ್ತಗತವಾಗಿ ಬಂದಿರುವುದರಿಂದ ಇವರಿಗೆ ದೊಡ್ಡ ಸ್ಥಾನ ಮಾನ ಲಭಿಸಿದೆ ಎಂದು ಹೇಳಿದರು.

ಮುಂಬರುವ ದಿನಗಳಲ್ಲಿ ಇನ್ನು ಹೆಚ್ಚಿನ ಸೇವೆ ಸಲ್ಲಿಸಿ ಉನ್ನತ ಸ್ಥಾನ ಮಾನಗಳು ಪಡೆಯುವಂತಾಗಲಿ ಎಂದು ಆಶಿಸುವುದಾಗಿ ಹೇಳಿದರು.

ಇನ್ನೋರ್ವ ಮುಖಂಡ ಜೆಡಿಎಸ್ ಜಿಲ್ಲಾ ವಕ್ತಾರ ಮಲ್ಲಣ್ಣಗೌಡ ಹಳಿಮನಿ ಕೌಳೂರ್ ಮಾತನಾಡಿ ಅರುಣಿ ಅವರು ವಿದ್ಯಾರ್ಥಿ ದೆಸೆಯಿಂದಲೇ ಸೇವಾ ಮನೋಭಾವನೆ ರೂಢಿಸಿಕೊಂಡಿದ್ದು ಸೇವೆಗೆ ತಕ್ಕಂತೆ ದೊಡ್ಡ ಸ್ಥಾನ ಮಾನ ಲಭಿಸಿದೆ ಇನ್ನು ಹೆಚ್ಚು ಸೇವೆ ಸಲ್ಲಿಸುವಂತಾಗಲಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ದೊಡ್ಡಣ್ಣಗೌಡ ಆರೀಕೆರಿ, ನರಸಿಂಹರಡ್ಡಿ ಚಿಂತಕುಂಟ, ಮಲ್ಲಣ್ಣಗೌಡ ಹೊಸಳ್ಳಿ, ಬಾಬುಗೌಡ ಸೌರಾಷ್ಟ್ರಳ್ಳಿ, ಆನಂದ್ ವಡ್ವಾಟ್, ಭೀಮಲಿಂಗ ಕೋಳಿ, ನಾಗಾಲಿಂಗಪ್ಪ ಬೊಯ್, ಮರೆಪ್ಪ ಗುಡಗುಡಿ, ಯಲ್ಲಪ್ಪ ಬೂತ, ಯಲ್ಲಾಲಿಂಗ ಚಾಮನಳ್ಳಿ, ರಾಜು ಉಪ್ಪಿನ್, ನಿರಂಜನರೆಡ್ಡಿ, ಮೌನೇಶ್ ಪಾಟೀಲ್, ಬಂದೇಶ್ ಮಾಡ್ವಾರ್, ಅಶೋಕರೆಡ್ಡಿ ಹೊನಿಗೇರ, ಸಿದ್ದುರೆಡ್ಡಿ ಆರೀಕೆರ, ಶಂಕರೆಪ್ಪಗೌಡ ಹೊರುಂಚ, ಶಿವು ಚವಾಣ್ ಇನ್ನಿತರರು ಇದ್ದರು.

# ಮಕ್ಕಳ ಪ್ರತಿಭೆ ಗುರುತಿಸಿ ಪುರಸ್ಕಾರ ನೀಡುವುದು ಶ್ಲಾಘನೀಯ: ಚನ್ನಬಸಪ್ಪ ಮುಧೋಳ್

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ




ನಗರ ಕನ್ನಡ ಸಾಹಿತ್ಯ ಪರಿಷತ್ತು ಭವನದಲ್ಲಿ ರುಚಿ ಟ್ರಸ್ಟ್ 3 ನೇ ವರ್ಷದ ವಾರ್ಷಿಕೋತ್ಸವ ಹಾಗು ರುಚಿ ರತ್ನ ಪ್ರಶಸ್ತಿ ಪ್ರಧಾನ ಮತ್ತು ಎಸ್ ಎಸ್ ಎಲ್ ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತಮ ಶ್ರೇಣಿಯಲ್ಲಿ ತೇ–ರ್ಗಡೆಯಾದ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಸಮಾರಂಭವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಯಾದಗಿರಿ ಉಪನಿರ್ದೇಶಕರು ಸಿ ಎಸ್ ಮುಧೋಳ್ ತಮ್ಮ ಭಾಷಣದಲ್ಲಿ ರುಚಿ ಟ್ರಸ್ಟ್ ವಿಶೇಷವಾಗಿ ಹತ್ತನೇ ತರಗತಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತಮ ಶ್ರೇಣಿಯಲ್ಲಿ ತೇರ್ಗಡೆ–ಯಾದ ಮಕ್ಕಳನ್ನು ಗುರುತಿಸಿ ಪ್ರತಿಭಾ ಪುರಸ್ಕಾರ ಜೊತೆಗೆ ಪೋಟೋ ದೊಂದಿಗೆ ನೆನಪಿನ ಕಾಣಿಕೆ ನೀಡಿ ಸನ್ಮಾನಿಸಿರುವ ಕಾರ್ಯವೈಖರಿ ಎಲ್ಲದಕ್ಕೂ ಮಿಗಿಲಾದದ್ದು ಎಂದು ಹೇಳಿದರು.ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಯಾದಗಿರಿ ಸ್ಟೇಷನ್ ಬಜಾರ್ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾದ ಮಲ್ಲಿಕಾರ್ಜುನ ಪೂಜಾರಿ ಮಾತನಾಡಿ ರುಚಿ ನಿರಂತರವಾಗಿ ಗ್ರಾಮೀಣ ಮಹಿಳೆಯರ ಶ್ರೇಯೋಭಿವೃದ್ಧಿಗೆ ಶ್ರಮಿಸುತ್ತಾ ಬಂದಿದ್ದು ನಮ್ಮ ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕಾರ್ಯೋನ್ಮುಖವಾಗಿದೆ ಎಂದರು. ಅತಿಥಿಗಳಾಗಿ ಆಗಮಿಸಿದ್ದ ಶಶಿಕಾಂತ ಜನಾರ್ದನ ಶಿಕ್ಷಕರು ರುದ್ರಸ್ವಾಮಿ ಚಿಕ್ಕಮಠ ಪರಸನಹಳ್ಳಿ ಇವರು ರುಚಿ ಟ್ರಸ್ಟ್ ಸ್ಥಾಪಿಸಿ ಮಹಿಳಾ ಸಬಲೀಕರಣ ಮಾಡುವಲ್ಲಿ ನಿರಂತರವಾಗಿ ಶ್ರಮಿಸುತ್ತಿರುವ ಕಾರ್ಯ ನಿಜಕ್ಕೂ ಶ್ಲಾಘನೀಯ ಎಂದರು. ರುಚಿ ಟ್ರಸ್ಟ್ ಸಂಸ್ಥಾಪಕರು ರುಚಿ ಪರಸನಹಳ್ಳಿ ಮಾತನಾಡಿ ನಮ್ಮ ಸಮಾಜದಲ್ಲಿನ ಪ್ರತಿಯೊಬ್ಬ ಮಹಿಳೆ ಮತ್ತು ಪುರುಷರು ಉದ್ಯೋಗ ಕೈಗೊಂಡು ಸ್ವಂತ ಬದುಕು ಕಟ್ಟಿಕೊಳ್ಳಲು ಸಾಧ್ಯ ಅದಕ್ಕಾಗಿಯೇ ರುಚಿ ಟ್ರಸ್ಟ್ ಕೌಶಲ್ಯಾಭಿವೃದ್ಧಿಯ ವಿವಿಧ ಬಗೆಯ ತರಬೇತಿಗಳು ನೀಡಿ ಸ್ವಂತ ಉದ್ಯೋಗ ಕೈಗೊಳ್ಳುವಂತೆ ಮಾಡುವ ಕಾರ್ಯ ಚಟುವಟಿಕೆಗಳು ಯಶಸ್ವಿಯಾಗಿ ನಡೆಸಿಕೊಂಡು ಬರುತ್ತಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ವೈಜನಾಥ ಹಿರೇಮಠ,ಶಿಕ್ಷಕಿಯರಾದ ಸುವರ್ಣ ರಾಠೋಡ ಮತ್ತು ಯಲ್ಲಪ್ಪ ಜಿನಕೇರಾ ಶಿಕ್ಷಕರು ಮಾತನಾಡಿದರು. ರುಚಿ ರತ್ನ ಪ್ರಶಸ್ತಿಗೆ ಭಾಜನರಾದ ವೈಜನಾಥ ಹಿರೇಮಠ, ಸಿದ್ದಯ್ಯ ಮಠ ರಂಗಂಪೇಠ,ಪ್ರಭಾಕರ ಗುಣ್ಣಾರಿ, ಯಲ್ಲಪ್ಪ ಜಿನಕೇರಾ,ಅಮರಗುಂಡಪ್ಪಹೂಗಾರ,ಶಂಕರ್ ಶಾಸ್ತ್ರಿ,ಡಾ.ಸಿ ಆರ್ ಕಂಬಾರ, ಬಂಗಾರೆಪ್ಪ ಹೊಸಮನಿ,ಶಾಂತಪ್ಪ ಖಾನಹಳ್ಳಿ,ಸಿ ಲಕ್ಷ್ಮಣ್ಣ ಗುತ್ತೇದಾರ, ಇವರುಗಳಿಗೆ ನೆನಪಿನ ಕಾಣಿಕೆ ನೀಡಿ, ಗೌರವಿಸಿ ಸನ್ಮಾನಿಸಲಾಯಿತು. ಎಸ್ ಎಸ್ ಎಲ್ ಸಿ ಯಲ್ಲಿ ಉತ್ತಮ ಶ್ರೇಣಿಯಲ್ಲಿ ತೇರ್ಗಡೆಯಾದ ಮಕ್ಕಳಾದ ಜ್ಯೋತಿ ಸಿದ್ರಾಮಪ್ಪ ಪೂಜಾರಿ,ಸ್ವಾಮಿ ಮೋನಪ್ಪ ಜಿನಕೇರಾ, ವಿಕಾಸ ವಿಜಯಕುಮಾರ,ಚೆನ್ನಾರೆಡ್ಡಿ ಎಸ್ ,ಪೋ, ಪಾಟೀಲ್,ದೀಪಾ ರವಿಕುಮಾರ ಬಾಚಿಮಟ್ಟಿ, ಹೊನ್ನುಕುಮಾರ್ ಶಿವಪ್ಪ ವಡಿಗೇರಾ, ಸರಸ್ವತಿ ನರಸಪ್ಪ ಗೋಡಿಹಾಳ,ಸವಿತಾ ಮರಲಿಂಗಪ್ಪ ತೇಕರಾಳ, ಶಿವಶಂಕರ ಮಲ್ಲರಡ್ಡಿ ಕಣೇಕಲ್,ನಿಖಿತಾ ಮಾರ್ಥಂಡಪ್ಪ ಖಾನಹಳ್ಳಿ, ವಿದ್ಯಾರ್ಥಿಗಳಿಗೆ ನೆನೆಪಿನ ಕಾಣಿಕೆ ನೀಡಿ ಗೌರವಿಸಿ ಸನ್ಮಾನಿಸಲಾಯಿತು. ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತಮ ಶ್ರೇಣಿಯಲ್ಲಿ ತೇರ್ಗಡೆಯಾದ ಮಕ್ಕಳಾದ. ಅರ್ಪಿತಾ ನರೇಶಕುಮಾರ್ ಗೊಂಗ್ಲೆ,ಸುಪ್ರಿತಾ ಅಶೋಕ್ ಕಡತದ,ಭಾಗೇಶ ಬನ್ನಯ್ಯ ಸ್ವಾಮಿ ಹಿರೇಮಠ, ಭವಾನಿ ಸಿದ್ದಲಿಂಗಯ್ಯ ಸ್ವಾಮಿ ಹಿರೇಮಠ,ಚಂದನ ಮಲ್ಲಿಕಾರ್ಜುನ ಕಂಬಳಿ, ಪ್ರೀಯದರ್ಶಿನಿ ಆಂಜನೇಯ ಮಾಶಿನಹಳ್ಳಿ,ರಕ್ಷೀತಾ ನಿಂಗನಗೌಡ ಬಿರಾದಾರ, ವೈಶಾಲಿ ಚಂದ್ರ ಪವಾರ, ಶ್ವೇತಾ ಮಲ್ಲಪ್ಪ ದೊಡಮನಿ,ಪ್ರೀಯಾಂಕ ಶ್ರೀನಿವಾಸ ತಗಡಗರ , ಮಹಾಲಕ್ಷ್ಮಿ ಮೋನಪ್ಪ ರೊಟ್ಟಿ, ಈ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರದ ನೆನಪಿನ ಕಾಣಿಕೆ ನೀಡಿ ಗೌರವಿಸಿ ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಶ್ರೀ ಶಾಂತಿನಿಕೇತನ ಗ್ರಾಮೀಣ ಅಭಿವೃದ್ಧಿ ಸಂಸ್ಥೆ ರಿ ಯಾದಗಿರಿ ಸಂಸ್ಥೆಗೆ ಸಗರನಾಡು ರುಚಿ ರತ್ನ ಪ್ರಶಸ್ತಿಯನ್ನು ಸಂಸ್ಥಾಪಕ ಅಧ್ಯಕ್ಷರಾದ ದಿನೇಶ್ ಕುಮಾರ್ ಅವರಿಗೆ ನೀಡಿ ಗೌರವಿಸಲಾಯಿತು.ವಿಶೇಷ ಸನ್ಮಾನಿತರಾದ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಸದಸ್ಯರಾದ ಕಲೀಮುದ್ದೀನ ಅವರನ್ನು ವೇದಿಕೆಯಲ್ಲಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಡಾಕ್ಟರ್ ವೆಂಕಟೇಶ್ವರ, ಸುಭಾಸ್ ಮಾಳಿಕೇರಿ,ಸಾಯಪ್ಪ ಮುನಿ, ಸೋಮಣ್ಣ ಬಿಂಗೇರಿ ಹೆಗ್ಗಣದೊಡ್ಡಿ,ಮೋನಪ್ಪ ರೊಟ್ಟಿ, ಶಶಾಂಕಸ್ವಾಮಿ ಆರ್ ಚಿಕ್ಕಮಠ ಉಪಸ್ಥಿತರಿದ್ದರು ಶರಣು ಕೊಲಕುಂದ,ಮಹೇಶ್ ಶಿರವಾಳ, ಶಂಕರಶಾಸ್ತ್ರಿ ಇವರಿಂದ ಸಂಗೀತ ಸೇವೆ ನಡೆಯಿತು,ಕಾರ್ಯಕ್ರಮವನ್ನು ಗುರುಪ್ರಸಾದ್ ವೈದ್ಯ ನಿರೂಪಿಸಿ ವಂದಿಸಿದರು

# ಕೊಪ್ಪಳ ಜಿಲ್ಲೆಯ ಬೆಳೆ ಹಾನಿ ಪ್ರದೇಶಕ್ಕೆ ಬಿಜೆಪಿ ನಾಯಕರ ಭೇಟಿ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಜಿಲ್ಲೆಯ ವಿವಿಧೆಡೆ ಸುರಿದ ಮಳೆಗೆ ಹಾಳಾಗಿರುವ ತೋಟಗಾರಿಕೆ ಹಾಗೂ ಕೃಷಿ ಬೆಳೆ ಬೆಳೆದ ರೈತರಿಗೆ ಸರ್ಕಾರ ಕೂಡಲೇ ಪ್ರತಿ ಎಕರೆಗೆ 5 ಲಕ್ಷ ರೂ. ಪರಿಹಾರ ಕೊಡಬೇಕು ಎಂದು ಜಿಲ್ಲಾ ಬಿಜೆಪಿ ನಾಯಕರು ಒತ್ತಾಯಿಸಿದರು.

ತಾಲೂಕಿನ ಹೊಸಹಳ್ಳಿ, ಮುದ್ದಾಬಳ್ಳಿ, ಹ್ಯಾಟಿ ಗ್ರಾಮದ ರೈತರ ಹೊಲಗಳಿಗೆ ಭಾನುವಾರ ಸುರಿದ ಮಳೆಗೆ ಅನ್ನದಾತರೊಂದಿಗೆ ಭೇಟಿ ನೀಡಿ, ಪರಿಶೀಲಿಸಿದರು. ಏಕಾಏಕಿ ಸುರಿದ ಮಳೆಗೆ ಬೆಳೆ ಹಾಳಾಗಿರುವುದನ್ನು ರೈತರು ಬಿಜೆಪಿ ನಾಯಕರಿಗೆ ತೊರಿಸಿದರು.

ಬಾಳೆ ಬೆಳೆ, ಕಬ್ಬು, ಎಲೆ ನೂರಾರು ಎಕರೆ ಪ್ರದೇಶದಲ್ಲಿ ಹಾಳಾಗಿರುವುದನ್ನು ಪರಿಶೀಲನೆ ಮಾಡಿದರು.ಈ ವೇಳೆ ಮಾತನಾಡಿದ ಕೊಪ್ಪಳ ಲೋಕಸಭಾ ಕ್ಷೇತ್ರದ ನಿಕಟಪೂರ್ವ ಅಭ್ಯರ್ಥಿ ಡಾ.ಬಸವರಾಜ ಕ್ಯಾವಟರ್ ಮಾತನಾಡಿ, ರೈತರು ಕಷ್ಟ ಪಟ್ಟು ಬೆಳೆದ ಬೆಳೆಗಳೆಲ್ಲ ಹಾಳಾಗಿರುವುದು ಸಂಕಟ ತಂದಿದೆ ಎಕರೆಗೆ ಲಕ್ಷಾಂತರ ರೂ. ಖರ್ಚು ಮಾಡಿ, ಇನ್ನೇನು ಬೆಳೆ ಕೈಗೆ ಬರುತ್ತದೆ ಎನ್ನುವಷ್ಟರಲ್ಲಿ ಅಕಾಲಿಕ ಮಳೆಗೆ ಬೆಳೆ ಹಾಳಾಗಿದೆ. ಸರಕಾರ, ಹಾಳಾದ ಬೆಳೆಗೆ ಎಕರೆಗೆ 22,500 ರೂ. ಕೊಡಲು ಮುಂದಾಗಿದೆ. ಆದರೆ, ಇದು, ಸರಿಯಲ್ಲ. ಎಕರೆಗೆ ಕನಿಷ್ಠ 5 ಲಕ್ಷ ರೂ. ಪರಿಹಾರ ಕೊಡಬೇಕು. ಅಲ್ಲದೆ, ಬಹಳಷ್ಟು ಹಲವು ರೈತರು ವರ್ಷಕ್ಕೆ 1.5 ಲಕ್ಷಕ್ಕೆ ಗುತ್ತಿಗೆ ಆಧಾರದ ಮೇಲೆ ಹೊಲ ಪಡೆದು ಉಳುಮೆ ಮಾಡಿದ್ದಾರೆ. ಇತ್ತ ಬೆಳೆ ಬೆಳೆ ಬೆಳೆಯಲು 2 ಲಕ್ಷ ರೂ.ವರೆಗೆ ಖರ್ಚು ಮಾಡಿದ್ದಾರೆ. ಹೀಗಾಗಿ ಸರಕಾರ ಕೊಡುವ 22500 ರೂ. ಪರಿಹಾರ ಯಾವುದಕ್ಕೂ ಸಾಲುವುದಿಲ್ಲ. ಕೂಡಲೇ ಪರಿಹಾರವನ್ನು 5 ಲಕ್ಷ ರೂ. ಗೆ ಏರಿಸಿ ಎಂದು ಒತ್ತಾಯಿಸಿದರು.

ವಿಧಾನ ಪರಿಷತ್ ಸದಸ್ಯೆ ಹೇಮಲತಾ ನಾಯಕ ಮಾತನಾಡುತ್ತಾ ಅಕಾಲಿಕ ಮಳೆಗೆ ರೈತರು ಬೆಳೆದ ತೋಟಗಾರಿಕೆ ಬೆಳೆಗಳು ಸಂಪೂರ್ಣ ಹಾಳಾಗಿವೆ. ರೈತರ ಕಷ್ಟವನ್ನು ನೋಡಲಾಗುತ್ತಿಲ್ಲ. ನಮಗೆಲ್ಲ ಅನ್ನ ಕೊಡುವ ರೈತನಿಗೆ ಸಂಕಷ್ಟ ಎದುರಾಗಿದೆ.

ಸರಕಾರ, ಈ ವಿಚಾರದಲ್ಲಿ ನಿರ್ಲಕ್ಷ್ಯ ಮಾಡದೇ ಕೂಡಲೇ ಹೆಚ್ಚಿನ ಮಟ್ಟದಲ್ಲಿ ಪರಿಹಾರ ವಿತರಣೆಗೆ ಕ್ರಮ ವಹಿಸಬೇಕೆಂದು ಒತ್ತಾಯಿಸಿದರು.

ಗ್ರಾಮೀಣ ಹಾಗೂ ನಗರ ಮಂಡಲದ ಬಿಜೆಪಿ ಅಧ್ಯಕ್ಷರಾದ ವೀರೇಶ ಸಜ್ಜನ್ ಹಾಗೂ ಅಮರೇಶ ಮುರುಳಿ, ಮುಖಂಡರಾದ ಅಪ್ಪಣ್ಣ ಪದಕಿ, ಮಹಾಂತೇಶ್ ಪಾಟೀಲ್ ಮೈನಳ್ಳಿ , ಚಂದ್ರಶೇಖರ ಕವಲೂರ್, ಹಲವರ್ತಿ ವೆಂಕಟೇಶ್, ಗಣೇಶ ಹೊರತಟ್ನಾಳ್, ಪ್ರದೀಪ್ ಹಿಟ್ನಾಳ್, ರಮೇಶ ಕವಲೂರ್, ಯೋಗಾನಂದ ಲೇಬಗೇರಿ, ಚನ್ನಬಸವ ಗಾಳಿ, ಗವಿ ಹಲವರ್ತಿ , ಮಾರುತಿ ಹಡಪದ, ಗುರಪ್ಪ, ದೇವರಾಜ ಹಾಲಸಮುದ್ರ , ಸಿದ್ದನಗೌಡ ಪಾಟೀಲ್ ಹಾಗೂ ಸ್ಥಳೀಯರು ಉಪಸ್ಥಿತರಿದ್ದರು, ನೂರಾರು ರೈತರು ಸೇರಿದಂತೆ ಬಿಜೆಪಿ ಪಕ್ಷದ ಮುಖಂಡರು, ಕಾರ್ಯಕರ್ತರ ಪಾಲ್ಗೊಂಡಿದ್ದರು.

> ಮೂರು ತಿಂಗಳ ಹಿಂದೆ ಬಸಾಪೂರ ಬಳಿ ಕಾಲುವೆ ಹೊಡೆದು ಅಪಾರ ಪ್ರಮಾಣದಲ್ಲಿ ಭತ್ತ ಬೆಳೆ ಹಾಳಾದರೂ ಈವರೆಗೆ ರೈತರಿಗೆ ಪರಿಹಾರ ಕೊಟ್ಟಿಲ್ಲ. ಅದರಂತೆ ಈಗಲೂ ಮಳೆಗೆ ಹಾನಿಗೊಳಗಾದ ರೈತರ ಪರಿಸ್ಥಿತಿಯಾಗಬಾರದು. ಶಾಸಕ ಹಿಟ್ನಾಳ್ ಕೇವಲ ಕಾಟಾಚಾರಕ್ಕೆ ಬೆಳೆ ಹಾನಿ ವೀಕ್ಷಣೆ ಮಾಡುವುದಲ್ಲ. ಕೂಡಲೇ ಸರಕಾರದಿಂದ ಪರಿಹಾರ ಕೊಡಿಸುವುದಕ್ಕೆ ಮೊದಲ ಆದ್ಯತೆ ನೀಡಬೇಕು. ಇಲ್ಲದಿದ್ದರೇ ರೈತರು ದಂಗೆ ಏಳಲಿದ್ದಾರೆ. ಅನ್ನದಾತರೊಂದಿಗೆ ನಾವು ಕೂಡ ಜತೆಯಾಗಿ ಉಗ್ರ ಪ್ರತಿಭಟನೆ ಮಾಡಬೇಕಾಗುತ್ತದೆ
>
> **ಡಾ. ಬಸವರಾಜ್ ಎಸ್ ಕ್ಯಾವಟರ್**
> **ನಿಕಟಪೂರ್ವ ಬಿಜೆಪಿ ಅಭ್ಯರ್ಥಿಗಳು ಕೊಪ್ಪಳ ಲೋಕಸಭಾ ಕ್ಷೇತ್ರ**

# ಬ್ಯಾಂಕ್ ಸಖಿ ಸೇವೆ ಮಹಿಳೆಯರಿಗೆ ಅನುಕೂಲವಾಗಲಿದೆ– ಬಸವರಾಜ ಕಟ್ಟಿಮನಿ

• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ



ಮೇ. 17: ಹಣ ಜಮಾ ಮಾಡುವುದು, ಹಣ ಹಿಂಪಡೆಯುವ, ಹೊಸ ಖಾತೆ ತೆರೆಯುವ ಸೇವೆ ಒದಗಿಸುವುದು, ಸೇರಿದಂತೆ ವಿವಿಧ ರೀತಿಯ ಬ್ಯಾಂಕ್ ಸಖಿ ಸೇವೆ ಮಹಿಳೆಯರಿಗೆ ಅನುಕೂವಾಗಲಿದೆ ಎಂದು ತಾಲೂಕು ಪಂಚಾಯತ ಕಾರ್ಯಕ್ರಮದ ಪ್ರಭಾರಿ ವ್ಯವಸ್ಥಾಪಕ ಬಸವರಾಜ ಕಟ್ಟಿಮನಿ ಹೇಳಿದರು.

ತಾಲೂಕಿನ ಈಚನಾಳ ಗ್ರಾಮದಲ್ಲಿ ಶ್ರೀ ಅಮರೇಶ್ವರ ಸಂಜೀವಿನಿ ಗ್ರಾಮ ಪಂಚಾಯತ್ ಮಟ್ಟದ ಒಕ್ಕೂಟದ ವ್ಯಾಪ್ತಿಯ ಸಾಯಿಬಾಬಾ ಸ್ವ ಸಹಾಯ ಸಂಘದ ಮಹಿಳೆ ಬ್ಯಾಂಕ್ ಸಖಿ ವಿಶಾಲಾಕ್ಷಿ ಇವರ ಸಾಮಾನ್ಯ ಸೇವಾ ಕೇಂದ್ರ ಚಾಲನೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ತಾಲೂಕಿನಲ್ಲಿ ಎಲ್ಲಾ ಗ್ರಾಮ ಪಂಚಾಯತ್ ಮಟ್ಟದಲ್ಲಿ ಸ್ವ ಸಹಾಯ ಸಂಘದ ಮಹಿಳೆಯರಿಗೆ ಬ್ಯಾಂಕ್ ಸಖಿಯಾಗಿ ಆಯ್ಕೆ ಮಾಡಿಕೊಂಡು 7 ದಿನದ ಉಚಿತ ತರಬೇತಿ ನೀಡಿ IIBಈ ಪರೀಕ್ಷೆ ಪಾಸ್ ಮಾಡಿದ ಪ್ರಮಾಣಪತ್ರ ನೀಡಿ, ಒಕ್ಕೂಟದಿಂದ ಸಮುದಾಯ ಬಂಡವಾಳ ನಿಧಿ ಸಾಲ ನೀಡಿ ಉದ್ಯೋಗ ಪ್ರಾರಂಭ ಮಾಡುವುದು ಗ್ರಾಮೀಣ ಮಹಿಳೆಯರಿಗೆ ಸ್ವಾವಲಂಬನೆ ಮತ್ತು ಉದ್ಯೋಗಾವಕಾಶ ಒದಗಿಸಲಾಗುವುದು ಎಂದರು.ಸರ್ಕಾರಿ ಯೋಜನೆಗಳು: ಪಿಂಚಣಿ ಹಣ ವಿತರಣೆ, ವಿಮೆ ಮತ್ತು ಸರ್ಕಾರದ ಸಬ್ಸಿಡಿ ತಲುಪಿಸುವುದು,

ಸಾಲ ಸೌಲಭ್ಯ: ಸ್ವ–ಸಹಾಯ ಗುಂಪುಗಳಿಗೆ ಸಾಲ ಪಡೆಯಲು ಮತ್ತು ಮರುಪಾವತಿಸಲು ಸಹಾಯ ಮಾಡುವುದು.

ಆರ್ಥಿಕ ಜಾಗೃತಿ: ಗ್ರಾಮೀಣ ಜನರಿಗೆ ಡಿಜಿಟಲ್ ವಹಿವಾಟುಗಳು ಮತ್ತು ಉಳಿತಾಯದ ಬಗ್ಗೆ ತಿಳಿವಳಿಕೆ ನೀಡುವುದು, ಪ್ರತಿ ವ್ಯವಹಾರಕ್ಕೆ ಬ್ಯಾಂಕ್ ನಿಂದ ಕಮಿಷನ್, MicroATM, Fingerprintscanner, ಮೊಬೈಲ್ ಫೋನ್ ಮೂಲಕ ಬ್ಯಾಂಕ್ ಸೇವೆ ಒದಗಿಸುವುದು, ಖಾತೆ ತೆರೆಯುವಿಕೆ: PMJDY, SHG ಸದಸ್ಯರ ಖಾತೆ, ವಿಮೆ/ಪಿಂಚಣಿ: PMJJBY, PMSBY, APY ನೋಂದಣಿ, ಆಧಾರ್ ಸೀಡಿಂಗ್: ಖಾತೆಗೆ ಆಧಾರ್ ಲಿಂಕ್ ಮಾಡುವುದ, ಹಣ ವರ್ಗಾವಣೆ: NEFT/IMPS ಮೂಲಕ ಗ್ರಾಮೀಣ ಮಹಿಳೆಯರಿಗೆ ಸೇವೆ ಒದಗಿಸುವುದು ಎಂದರು.

ಕಾರ್ಯಕ್ರಮದಲ್ಲಿ ಮಹಿಳಾ ಒಕ್ಕೂಟದ ಯಂಕಮ್ಮ, ಚಂದ್ರಕಲಾ, ದೇವಮ್ಮ, ಬಸಮ್ಮ, ಜ್ಯೋತಿ, ವಿಶಾಲಾಕ್ಷಿ ಸೇರಿದಂತೆ ಸ್ವಸಹಾಯ ಸಂಘದ ಸದಸ್ಯರು ಪಾಲ್ಗೊಂಡಿದ್ದರು.

# ಜ್ಞಾನೋತ್ಸವದಲ್ಲಿ ಬೀದರ್‌ನ ಲಿಂಗರಾಜ ಅಪ್ಪ ಇಂಜಿನಿಯರಿಂಗ್ ಕಾಲೇಜಿಗೆ ಸಮಗ್ರ ವೀರಾಗ್ರಣಿ ಪ್ರಶಸ್ತಿ
# ಕಲಬುರಗಿಯ ಪೂಜ್ಯ ದೊಡ್ಡಪ್ಪ ಅಪ್ಪ ಇಂಜಿನಿಯರಿಂಗ್ ಕಾಲೇಜ್ ರನ್ನರ್ ಅಪ್

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.17:ನಗರದ ಪ್ರತಿಷ್ಠಿತ ಶರಣಬಸವ ವಿಶ್ವವಿದ್ಯಾಲಯದಲ್ಲಿ ಜರುಗಿದ ಎರಡು ದಿನಗಳ ಜ್ಞಾನೋತ್ಸವ–2026 ಟೆಕ್ನೋ ಕಲ್ಚರಲ್ ಉತ್ಸವಕ್ಕೆ ಶನಿವಾರ ಸಂಜೆ ಅದ್ದೂರಿ ತೆರೆ ಬಿದ್ದಿತು. ವಿವಿಯ ಆವರಣದಲ್ಲಿ ಜರುಗಿದ ಸಮಾರೋಪ ಸಮಾರಂಭದಲ್ಲಿ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿಗಳಾದ ಶ್ರೀ ಬಸವರಾಜ ದೇಶಮುಖ ಹಾಗೂ ಗುಲಬರ್ಗಾ ವಿದ್ಯುಚ್ಛಕ್ತಿ ಸರಬರಾಜು ಕಂಪನಿಯ ನಿರ್ದೇಶಕ ಚಂದ್ರಕಾಂತ ಪಾಟೀಲ ಅವರು ಸಮಗ್ರ ವೀರಾಗ್ರಣಿ ಪ್ರಶಸ್ತಿಯನ್ನು ಬೀದರ್‌ನ ಲಿಂಗರಾಜ ಅಪ್ಪ ಇಂಜಿನಿಯರಿಂಗ್ ಕಾಲೇಜಿಗೆ ಹಾಗೂ ರನ್ನರ್ ಅಪ್ ಸ್ಥಾನ ಪಡೆದಿರುವ ಕಲಬುರಗಿಯ ಪೂಜ್ಯ ದೊಡ್ಡಪ್ಪ ಇಂಜಿನಿಯರಿಂಗ್ ಕಾಲೇಜುಗಳ ತಂಡಕ್ಕೆ ಟ್ರೋಫಿ ವಿತರಿಸಿದರು.

ಇದಕ್ಕೂ ಮುನ್ನ ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಶ್ರೀ ಬಸವರಾಜ ದೇಶಮುಖ ಮಾತನಾಡಿ, ಈ ಜ್ಞಾನೋತ್ಸವ ಯಶಸ್ವಿಯಾಗಿ ಸಂಪನ್ನಗೊಂಡಿರುವುದು ನಮ್ಮೆಲ್ಲರಿಗೂ ಅಪಾರ ಸಂತೋಷವನ್ನುಂಟು ಮಾಡಿದೆ. ಈ ಉತ್ಸವದಲ್ಲಿ ವಿದ್ಯಾರ್ಥಿಗಳು ತಾಂತ್ರಿಕ ಹಾಗೂ ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ತಮ್ಮ ಪ್ರತಿಭೆಯನ್ನು ಅತ್ಯುತ್ತಮವಾಗಿ ಪ್ರದರ್ಶಿಸಿದ್ದಾರೆ. ವಿವಿಧ ಸ್ಪರ್ಧೆಗಳು, ಕಾರ್ಯಾಗಾರಗಳು ಮತ್ತು ಮನರಂಜನಾ ಕಾರ್ಯಕ್ರಮಗಳು ವಿದ್ಯಾರ್ಥಿಗಳಲ್ಲಿ ಹೊಸ ಉತ್ಸಾಹ ಮತ್ತು ಆತ್ಮವಿಶ್ವಾಸವನ್ನು ತುಂಬಿವೆ ಎಂದರು

ಎಲ್ಲಾ ವಿದ್ಯಾರ್ಥಿಗಳು ತಮ್ಮ ಕೌಶಲ್ಯವನ್ನು ಒಳ್ಳೆಯ ರೀತಿಯಿಂದ ತೋರಿಸಿದ್ದೀರಿ. ಲಿಂಗೈಕ್ಯ ಪೂಜ್ಯ ಡಾ. ಶರಣಬಸವಪ್ಪ ಅಪ್ಪಾ ಅವರು ಹಾಕಿ ಕೊಟ್ಟ ಮಾರ್ಗದಲ್ಲಿ ನಾವೆಲ್ಲರೂ ಮುನ್ನಡೆಯೋಣ.



ಮುಂದಿನ ವರ್ಷ ಇನ್ನೂ ಹೆಚ್ಚಿನ ವಿದ್ಯಾರ್ಥಿಗಳು ತಮ್ಮ ಕೌಶಲ್ಯವನ್ನು ಪ್ರದರ್ಶಿಸಬೇಕೆಂದು ಕರೆ ನೀಡಿದರು. ಈ ಕಾರ್ಯಕ್ರಮದ ಯಶಸ್ಸಿಗೆ ಶ್ರಮಿಸಿದ, ವಿವಿಯ ಎಲ್ಲಾ ವಿಭಾಗಗಳ ಡೀನರು, ಮುಖ್ಯಸ್ಥರು, ಪ್ರಾಧ್ಯಾಪಕರು ಆಯೋಜಕರು ಹಾಗೂ ವಿದ್ಯಾರ್ಥಿಗಳು ಅಭಿನಂದನಾರ್ಹರು. ಪ್ರತಿಯೊಂದು ವಿಭಾಗವೂ ಶಿಸ್ತಿನಿಂದ ಹಾಗೂ ಸಮರ್ಪಣಾಭಾವದಿಂದ ಕಾರ್ಯನಿರ್ವಹಿಸಿ ಉತ್ಸವವನ್ನು ಸ್ಮರಣೀಯವಾಗಿಸಿದೆ. ಭಾಗವಹಿಸಿದ ಪ್ರತಿಯೊಬ್ಬ ವಿದ್ಯಾರ್ಥಿಯ ಸಹಕಾರ ಮತ್ತು ಸಕ್ರಿಯ ಭಾಗವಹಿಸುವಿಕೆ ಈ ಉತ್ಸವದ ವಿಶೇಷತೆಯಾಗಿದೆ. ಈ ಟೆಕ್ನೋ–ಕಲ್ಚರಲ್ ಫೆಸ್ಟ್ ವಿದ್ಯಾರ್ಥಿಗಳಲ್ಲಿ ಸೃಜನಶೀಲತೆ ಮತ್ತು ನಾಯಕತ್ವ ಗುಣಗಳನ್ನು ಬೆಳೆಸುವಲ್ಲಿ ಮಹತ್ವದ ಪಾತ್ರವಹಿಸಿದೆ ಎಂದು ಹೇಳಿದರು.

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಭಾಗವಹಿಸಿದ ಗುಲಬರ್ಗಾ ವಿದ್ಯುಚ್ಛಕ್ತಿ ಸರಬರಾಜು ಕಂಪನಿಯ ನಿರ್ದೇಶಕ ಚಂದ್ರಕಾಂತ ಪಾಟೀಲ ಮಾತನಾಡಿ, ಈ ಭಾಗದ ಶರಣಬಸವ ವಿಶ್ವವಿದ್ಯಾಲಯದಲ್ಲಿ ತಾವೆಲ್ಲ ಅಧ್ಯಯನ ಮಾಡುತ್ತಿರುವುದು ತಮ್ಮ ಸೌಭಾಗ್ಯವೇ ಸರಿ. ಇಲ್ಲಿ ಅಧ್ಯಯನದೊಂದಿಗೆ ಮಾನವೀಯ ಮೌಲ್ಯಗಳನ್ನು ಕಲಿಯುತ್ತೀರಿ. ಇಲ್ಲಿ ಕಲಿತವರು ಮುಂದೆ ಎಲ್ಲಾ ರಂಗಗಳಲ್ಲಿಯೂ ಯಶಸ್ಸನ್ನು ಕಾಣುವಿರಿ. ಶರಣಬಸವ ವಿವಿ ಅನೇಕ ತಾಂತ್ರಿಕ ಕೋರ್ಸ್‌ಗಳನ್ನು ಹೊಂದಿದೆ. ಇದರಿಂದ ಈ ಭಾಗದ ಮಕ್ಕಳಿಗೆ ತಾಂತ್ರಿಕ ಜ್ಞಾನವನ್ನು ವೃದ್ಧಿಸಲು ಅನುಕೂಲವಾಗಿದೆ ಎಂದು ಹೇಳಿದರು.

ಮೊಬೈಲ್‌ನ್ನು ಹೆಚ್ಚು ಬಳಸದೇ ತಂದೆ ತಾಯಿಯರಿಗೆ, ಶಿಕ್ಷಕರಿಗೆ ಗೌರವ ಕೊಟ್ಟು ಸಂಸ್ಕೃತಿಯನ್ನು ಕಾಪಾಡಿ.

ಹೆಚ್ಚು ಪುಸ್ತಕಗಳನ್ನು ಓದಿ. ಅಂಕಗಳಿಗೆಗಷ್ಟೇ ಸಿಮಿತವಾಗದೇ ಕೌಶಲ್ಯವನ್ನು ವೃದ್ಧಿಸಿ ಸಾಧನೆ ಮಾಡಿ. ಎಲ್ಲರ ಜೊತೆ ಪ್ರೀತಿ, ವಿಶ್ವಾಸ, ಬಾಂಧವ್ಯದಿಂದಿರಿ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತನ್ನು ಹೇಳಿದರು.

ಈ ಸಂಭ್ರಮದ ಸಮಾರೋಪ ಸಮಾರಂಭದಲ್ಲಿ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ನೀಡಿ ಗೌರವಿಸಲಾಯಿತು. ಶರಣಬಸವ ವಿಶ್ವವಿದ್ಯಾಲಯದ ಉಪಕುಲಪತಿಗಳಾದ ಪ್ರೊ. ಅನಿಲಕುಮಾರ ಬಿಡವೆ, ಕುಲಸಚಿವರಾದ ಡಾ. ಲಕ್ಷ್ಮೀ ಪಾಟೀಲ ಮಾಕಾ, ಕುಲಸಚಿವ (ಮೌಲ್ಯಮಾಪನ) ಡಾ. ಎಸ್. ಎಚ್. ಹೊನ್ನಳ್ಳಿ, ಹಣಕಾಸು ಅಧಿಕಾರಿ ಡಾ. ಕಿರಣ ಮಾಕಾ, ಸಂಶೋಧನಾ ಡೀನ್ ಡಾ. ಸುಜಾತಾ ಮಲ್ಲಾಪುರ ವೇದಿಕೆ ಮೇಲಿದ್ದರು. ವಿವಿಯ ಎಲ್ಲಾ ವಿಭಾಗಗಳ ಡೀನರು, ಮುಖ್ಯಸ್ಥರು, ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಜ್ಞಾನೋತ್ಸವ–2026 ಟೆಕ್ನೊ ಕಲ್ಚರಲ್ ಫೆಸ್ಟ್ ಸಮಾರೋಪ ಸಮಾರಂಭದಲ್ಲಿ ಎಲ್ಲಾ ಅತಿಥಿ ಗಣ್ಯರನ್ನು ಶರಣಬಸವ ವಿಶ್ವವಿದ್ಯಾಲಯದ ಡೀನ್ ಡಾ. ಶಿವಕುಮಾರ ಜವಳಿಗಿ ಸ್ವಾಗತಿಸಿದರು.

## ಕ್ರೀಡಾಪಟುಗಳು ನಿರ್ಣಾಯಕರ ತೀರ್ಪಿಗೆ ತಲೆಬಾಗಿ ಆಟವಾಡಿ ಕ್ರೀಡಾಭಿಮಾನಿಗಳ ಮನ ಗೆಲ್ಲಬೇಕು : ಶರಣಬಸವ ಮೇಟಿ

• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ

ಆಟಗಾರರು ಪರಸ್ಪರ ಸ್ನೇಹ ಪ್ರೀತಿ ಸೌಹಾರ್ಧವಾಗಿ ನಿರ್ಣಾಯಕರ ತೀರ್ಪಿಗೆ ತಲೆಬಾಗಿ ಆಟವಾಡಿ ಕ್ರೀಡಾ ಪ್ರೇಮಿಗಳ ಮನಗೆಲ್ಲಬೇಕು ಎಂದು ಯುವ ಮುಖಂಡ ಶರಣಬಸವ ಎ ಮೇಟಿ ಹೇಳಿದರು.

ಪಟ್ಟಣದ ಹೊಸ ತಾಲೂಕ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಲಿಂಗಸಗೂರು ಪ್ರೀಮಿಯರ್ ಲೀಗ್ ಸೀಸನ್ 8ರ ಕ್ರಿ–ಕೆಟ್ ಪಂದ್ಯಾವಳಿಯನ್ನು ಉದ್ಘಾಟಿಸಿ ಮಾತನಾಡಿದ ಅವರು ಆಟಗಾರರು ಪ್ರತಿ ಹಂತದಲ್ಲಿಯೂ ನಿರ್ಣಾಯಕರು ನೀಡುವ ತೀರ್ಪಿಗೆ ಹೆಚ್ಚು ಗೌರವ ಕೊಟ್ಟು ಆಟವಾಡಬೇಕು. ಬಿಸಿಲಿನ ತಾಪ ಹೆಚ್ಚು ಇರುವುದರಿಂದ ಆಟಗಾರರು ತಮ್ಮ ಆರೋಗ್ಯದ ಕಡೆಗೆ ಹೆಚ್ಚು ಗಮನ ಹರಿಸಿ ಆಟವಾಡುವಾಗ ತಲೆಗೆ ಕ್ಯಾಪ್ ಕಾಲಿಗೆ ಶೂ ಧರಿಸಿ ಆಟವಾಡಬೇಕು. ಆಯೋಜಕರು ಪಂದ್ಯವನ್ನು ಆದಷ್ಟು ಬೇಗನೆ ಬೆಳಿಗ್ಗೆ 8 ಗಂಟೆಯೊಳಗೆ ಪ್ರಾರಂಭಿಸಿ ನಂತರ ಎರಡನೇ ಪಂದ್ಯವನ್ನ ಮಧ್ಯಾಹ್ನ ಬಿಸಿಲಿನ ತಾಪ ಕಡಿಮೆಯಾದ ನಂತರದಲ್ಲಿ ಪ್ರಾರಂಭಿಸಿದರೆ ಆಟಗಾರರಿಗೆ ಬಿಸಿಲಿನ ತಾಪದ ಪರಿಣಾಮ



ಕಡಿಮೆಯಾಗಬಹುದು. ಕ್ರೀಡಾಕೂಟ–ದ ಆಯೋಜಕರು ಕ್ರೀಡಾಪಟುಗಳಿಗೆ ಆಟದ ಮಧ್ಯದಲ್ಲಿ ತಂಪು ಪಾನೀಯ ನೀಡುವುದು ಒಳಿತು ಎಂದು ಅವರು ಹೇಳಿದರು. ಕ್ರೀಡಾಕೂಟದಲ್ಲಿ ಒಟ್ಟು ಎಂಟು ತಂಡಗಳು ಪಾಲ್ಗೊಂಡಿದ್ದವು.

ಈ ಸಂದರ್ಭದಲ್ಲಿ ಉಮಾಮಹೇಶ್ವರಿ ಕಾಲೇಜಿನ ಆಡಳಿತ ಅಧಿಕಾರಿ ವಿನಯ್ ಕುಮಾರ್ ಗಣಾಚಾರಿ, ಪತ್ರಕರ್ತರ ಸಂಘದ ತಾಲೂಕ ಅಧ್ಯಕ್ಷ ಶಿವರಾಜ್ ಕೆಂಭಾವಿ, ಕನ್ನಡ ಪರ ಸಂಘಟನೆಯ ಹನುಮಂತ ನಾಯಕ್, ತಿಮ್ಮಾರೆಡ್ಡಿ ಮುನ್ನೂರ, ಆಂಜನೇಯ ಭಂಡಾರಿ, ಚಂದ್ರಶೇಖರ್ ಹಿರೇಮಠ ಸೇರಿದಂತೆ ಹಲವು ಮುಖಂಡರು ಹಾಗೂ ಕ್ರೀಡಾ–ಕೂಟದ ಬಹುಮಾನ ಆಯೋಜಕರು, ಕ್ರೀಡಾಪಟುಗಳು ಕ್ರೀಡಾಭಿಮಾನಿಗಳು ಉಪಸ್ಥಿತರಿದ್ದರು.

## ಉಪ ನಿರ್ದೇಶಕರಾಗಿ ಶರಣಮ್ಮ ಅಧಿಕಾರ ಸ್ವೀಕಾರ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಮೇ.17: ರಾಯಚೂರಿನ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ನೂತನ ಉಪ ನಿರ್ದೇಶಕರಾಗಿ (ಡಿಡಿ) ಶರಣಮ್ಮ ಅವರು ಶುಕ್ರವಾರ ಅಧಿಕಾರ ಸ್ವೀಕರಿಸಿದರು.



ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ನಿರ್ಗಮಿತ ಉಪ ನಿರ್ದೇಶಕರಾದ ನವೀನ್ ಕುಮಾರ್ ಅವರು ಅಧಿಕಾರ ಹಸ್ತಾಂತರಿಸಿದರು.

ಈ ವೇಳೆ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ, ಅಂಗನವಾಡಿ ಕಾರ್ಯಕರ್ತೆಯರು ನೂತನ ಉಪ ನಿರ್ದೇಶಕರಿಗೆ ಶುಭ ಕೋರಿದರು.

## ಮಳೆ, ಸಿಡಿಲಿನ ಮುನ್ಸೂಚನೆಗಳಿಗೆ ನಾನಾ ಸೌಲಭ್ಯ ಬಳಸಿ



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಮಳೆ ಮತ್ತು ಸಿಡಿಲಿನ ಮುನ್ಸೂಚನೆಗಳಿಗಾಗಿ ವಿವಿಧ ಸೌಲಭ್ಯಗಳನ್ನುಬಳಸಿಕೊಳ್ಳಬಹುದು ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದಅಧ್ಯಕ್ಷರುಆಗಿರುವ ಜಿಲ್ಲಾಧಿಕಾರಿಗಳಾದ ಡಾ.ಸುರೇಶ ಬಿ ಇಟ್ನಾಳ ಅವರು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.ಮಳೆ ಮತ್ತುಸಿಡಿಲಿನಎಚ್ಚರಿಕೆಯ ಸಂದೇಶವನ್ನು ಪಡೆಯಲು https://www.ksndmc.org/MobileReister_Kn.asp ಮೂಲಕ ಚಂದಾದಾರಿಕೆ ಸೌಲಭ್ಯ ಬಳಸಬಹುದು.ಅದೆ ರೀತಿ, https:/play.google.com/store/apps/details ಎನ್ನುವ ಸಿಡಿಲು ಆಂಡ್ರಾಯ್ಡ್ ಅಪ್ಲಿಕೇಶನ್ ಬಳಸಿ ಮಳೆ ಮತ್ತು ಸಿಡಿಲು ವಿವರಗಳನ್ನುಪಡೆಯಬಹುದುಕರ್ನಾಟಕ ರಾಜ್ಯ ನೈಸರ್ಗಿಕ ವಿಪತ್ತು ನಿರ್ವಹಣಾ ಕೇಂದ್ರದ ವೆಬ್‌ಸೈಟ್ https://www.ksndmc.org/ ಬಳಸಿ ಹವಾಮಾನದ ಬಗ್ಗೆ ಎಚ್ಚರಿಕೆಗಳಿಗಳನ್ನು ಪಡೆಯಬಹುದು.ದೂರವಾಣಿಸಂಖ್ಯೆ080–67355000 ಅಥವಾ ವರುಣ ಮಿತ್ರ24*7:9243345433ಗು ಸಂಪರ್ಕಿಸಿಮಾಹಿತಿ ಪಡೆಯಬಹುದುಎಂದು ಕೊಪ್ಪಳ ಜಿಲ್ಲಾಡಳಿತವು ಸಾರ್ವಜನಿಕರಲ್ಲಿ ಮನವಿಮಾಡಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.ಗೆ ನಾನಾ ಸೌಲಭ್ಯ ಬಳಸಿ: ಡಾ.ಸುರೇಶ ಇಟ್ನಾಳ ಮನವಿ

## ವಸತಿ ನಿಲಯಗಳಲ್ಲಿನ ವಿದ್ಯಾರ್ಥಿಗಳ ಮಾನಸಿಕ ಆರೋಗ್ಯದ ಕಡೆ ಗಮನ ಹರಿಸಿ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಮಾನಸಿಕ ಆರೋಗ್ಯ ಮತ್ತು ದೈಹಿಕ ಆರೋಗ್ಯ ಒಂದೇ ನಾಣ್ಯದ ಎರಡು ಮುಖಗಳಾಗಿದ್ದು, ವಸತಿ ನಿಲಯಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಮಾನಸಿಕ ಆರೋಗ್ಯದ ಕಡೆ ಗಮನ ಹರಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ. ಲಿಂಗರಾಜು ಟಿ. ಅವರು ಹೇಳಿದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಪೋಲಿಸ್ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಇತ್ತೀಚೆಗೆ ಜಿಲ್ಲಾ ಪಂಚಾಯತ ಜಿ.ಹೆಚ್ ಪಟೇಲ್ ಸಭಾಂಗಣದಲ್ಲಿ ವಸತಿನಿಲಯಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ವಸತಿನಿಲಯ ಪಾಲಕರಿಗೆ ಹಮ್ಮಿಕೊಂಡಿದ್ದ ಮಾನಸಿಕ ಆರೋಗ್ಯ ಹಾಗೂ ಮಾದಕ ವಸ್ತುಗಳ ವ್ಯಸನ ಕುರಿತಾದ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ವಸತಿ ನಿಲಯಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಮಾನಸಿಕ ಆರೋಗ್ಯದ ಕಡೆ ಗಮನ ಹರಿಸಬೇಕು. ಹದಿ–ಹರೆಯದ ಮಕ್ಕಳಲ್ಲಿ ಏನಾದರೂ ಮಾನಸಿಕ ಸಮಸ್ಯೆಗಳು ಇದ್ದರೆ ತಮ್ಮ ಸಮಿಪದ ತಾಲೂಕಾ ಅಥವಾ ಜಿಲ್ಲಾ ಆಸ್ಪತ್ರೆಗಳಲ್ಲಿ ಇರುವ ಇತರ ಎಲ್ಲಾ ಖಾಯಿಲೆಗಳಂತೆ, ಮಾನಸಿಕ ಖಾಯಿಲೆಯನ್ನು ಗುಣಪಡಿಸಬಹುದು. ಸೂಕ್ತ ಸಮಯದಲ್ಲಿ ರೋಗಲಕ್ಷಣಗಳನ್ನು ಗುರುತಿಸಿ, ಆಪ್ತ ಸಮಾಲೋಚನೆ ಹಾಗೂ ಚಿಕಿತ್ಸೆಯನ್ನು ಪಡೆದರೆ, ಆ ವ್ಯಕ್ತಿಯು ಇತರರಂತೆ ಜೀವನ ನಡೆಸಬಹುದು. ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು ಸಮುದಾಯ ಆರೋಗ್ಯ ಕೇಂದ್ರಗಳು ಹಾಗೂ ಸಾರ್ವಜನಿಕ ಆಸ್ಪತ್ರೆಗಳಲ್ಲಿಯೂ ಸಹ ಪ್ರಾಥಮಿಕ ಹಂತಗಳಲ್ಲಿ ಮಾನಸಿಕ ರೋಗಿಗಳಿಗೆ ಚಿಕಿತ್ಸೆ ನೀಡಲಾಗುತ್ತದೆ ಎಂದು ತಿಳಿಸಿದರು. ಕಿಮ್ಸ್ ಹೆಚ್‌ಓಡಿ ಹಾಗೂ ಮನೋವೈದ್ಯರಾದ ಡಾ.ರವಿಕುಮಾರ ಅವರು ತಮ್ಮ ವಿಶೇಷ ಉಪನ್ಯಾಸ ಪಿ.ಪಿ.ಟಿ ಬಳಸುವುದರ ಮೂಲಕ ಮಾತನಾಡುತ್ತಾ, ಮಾನಸಿಕ ಖಾಯಿಲೆ ಬರುವುದಕ್ಕೆ ಹಲವಾರು ಕಾರಣಗಳಿದ್ದು, ಒತ್ತಡ, ಜೀವನ ಶೈಲಿ, ಜೀವನದಲ್ಲಿ ಬರುವಂತಹ ಆಘಾತಕಾರಿ ಘಟನೆಗಳಿಂದ ಮಾನಸಿಕ ಖಾಯಿಲೆ ಉಂಟಾಗಬಹುದು. ಪ್ರಾರಂಭಿಕ ಹಂತದಲ್ಲಿ ಈ ರೋಗಗಳನ್ನು ಗುರುತಿಸಿ ವೈದ್ಯಕೀಯ ಸಹಾಯ ಪಡೆದು ಆಪ್ತಸಮಾಲೋಚನೆ ಸೇರಿದಂತೆ ಔಷಧೋಪಚಾರಗಳನ್ನು ಪಡೆದಲ್ಲಿ ಗುಣಪಡಿಸಬಹುದು. ಮಾದಕ ವಸ್ತುಗಳ ವ್ಯಸನ ಯುವಕರಲ್ಲಿ ಅತೀ ಹೆಚ್ಚಾಗಿ ಕಾಣಸಿಕೊಳ್ಳುತ್ತಿದ್ದು, ಇದರಿಂದ ದೈಹಿಕವಾಗಿ ದುಷ್ಪರಿಣಾಮ ಉಂಟಾಗುತ್ತದೆ ಉದಾಹರಣೆ: ಕರುಳಿನ ಕ್ಯಾನ್ಸರ್, ಜಾಂಡೀಸ್, ಜಠರ ಸಮಸ್ಯೆ ಇತ್ಯಾದಿ ತೊಂದರೆಗಳು ಕಾಣಿಸಿಕೊಳ್ಳುತ್ತವೆ. ಜೊತೆಗೆ ಮಾನಸಿಕವಾಗಿಯೂ ವ್ಯಕ್ತಿಯು ನಿಯಂತ್ರಣವನ್ನು ಕಳೆದುಕೊಳ್ಳುತ್ತಾನೆ. ಇದರಿಂದ ಮುಕ್ತ ಪಡೆಯಲು ಚಿಕಿತ್ಸೆ ಹಾಗೂ ಆಪ್ತಸಮಾಲೋಚನೆ ನೀಡಬಹುದು. ಅತೀ ಒತ್ತಡವೂ ಸಹ ವ್ಯಕ್ತಿಯನ್ನು ಮಾನಸಿಕ ರೋಗಕ್ಕೆ ತುತ್ತಾಗಿಸುತ್ತದೆ. ಒತ್ತಡದಿಂದ ಹೊರಬರಲು ಉತ್ತಮ ಜೀವನಶೈಲಿ, ಯೋಗ, ಧ್ಯಾನ, ವ್ಯಾಯಾಮಗಳಂತಹ ಅಭ್ಯಾಸಗಳನ್ನು ರೂಢಿಸಿಕೊಳ್ಳುವುದು, ಉತ್ತಮ ಆಹಾರ ಪದ್ಧತಿಯನ್ನು ಅಳವಡಿಸಿಕೊಳ್ಳುವುದು ಮತ್ತು ಇತರರೊಂದಿಗೆ ಸ್ನೇಹ ಸೌಹಾರ್ದತೆಯಲ್ಲಿ ಜೀವನ ನಡೆಸುವುದು ಹಾಗೂ ಒತ್ತಡದಿಂದ ವ್ಯಕ್ತಿಯನ್ನು ದೂರವಿರಿಸಲು ಅತೀ ಮುಖ್ಯವಾಗಿದೆ. ಮಾನಸಿಕ ಖಾಯಿಲೆಯ ಯಾವುದೇ ಲಕ್ಷಣಗಳು ಇದ್ದರೆ, ಟೆಲಿ ಮನಸ್ ದೂರವಾಣಿ ಸಂಖ್ಯೆ 14416ಗೆ ಕರೆ ಮಾಡಬಹುದು ಎಂದರು. ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಶಿವಾನಂದ ವಿ.ಪಿ ಸೇರಿದಂತೆ ಜಿಲ್ಲೆಯ ಎಲ್ಲಾ ವಸತಿ ನಿಲಯದ ಪಾಲಕರು ಹಾಗೂ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದ ಸಿಬ್ಬಂದಿಗಳು ಉಪಸ್ಥಿತರಿದ್ದರು. ಮನಃಶಾಸ್ತ್ರಜ್ಞರಾದ ಪುಷ್ಪಾ ಥೇರೇಸಾ ಅವರು ವಂದಿಸಿದರು.

## ಸಿಡಿಲಿಗೆ ಮಹಿಳೆ ಬಲಿ

• ಮಲ್ಲಮ್ಮ ನುಡಿ ವಾರ್ತೆ ಪಿರಿಯಾಪಟ್ಟಣ

ಸಿಡಿಲು ಬಡಿದು ಮಹಿಳೆ ಆಸ್ಪತ್ರೆಗೆ ಸಾಗಿಸುವ ಮಾರ್ಗ ಮಧ್ಯೆ ಮೃತಪಟ್ಟರೆ 2 ಹಸುಗಳು ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ಶನಿವಾರ ಸಂಜೆ ನಡೆದಿದೆ. ತಾಲೂಕಿನ ಸತ್ಯಗಾಲ ಗ್ರಾಮದಲ್ಲಿ ಮನೆಯ ಪಕ್ಕದ ಹೊಲದ ಬಳಿ ಇರುವ ಮಾವಿನ ಮರದಡಿಯಲ್ಲಿ ಕಟ್ಟಿ ಹಾಕಿದ್ದ ಎರಡು ಅಪಾರ ಬೆಲೆ ಬಾಳುವ ಹಸುಗಳು ಹಾಗೂ ಈ ಹಸುಗಳ ಮಾಲೀಕರಾದ ವಿನೋದ ಚಂದ್ರಶೇಖರ್ (38) ಎಂಬ ಮಹಿಳೆ ಸಂಜೆ ಬಿದ್ದ ಅಪಾರ ಮಳೆ ಗಾಳಿ ಗುಡುಗು ಸಿಡಿಗೆ ಬಲಿಯಾಗಿದ್ದಾರೆ.

ಈ ಬಗ್ಗೆ ಪಿರಿಯಾಪಟ್ಟಣ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.



## ವಿದ್ಯಾರ್ಥಿಗಳು ಉತ್ತಮ ಅಂಕಗಳಿಗೆ ಸೀಮಿತರಾಗದೆ ಸಂಸ್ಕಾರವಂತರಾಗಿರಿ

• ಮಲ್ಲಮ್ಮ ನುಡಿ ವಾರ್ತೆಯಲಬುರ್ಗಾ

ತಾಲೂಕಿನ ವಣಗೇರಿ ಬಸವ ಯೋಗಾಶ್ರಮದಲ್ಲಿ 2025–26 ನೆ ಸಾಲಿನ ಎಸ್.ಎಸ್.ಎಲ್.ಸಿ ಹಾಗು ಪಿಯುಸಿ ಪರೀಕ್ಷೆಯಲ್ಲಿ ಅತ್ಯುತ್ತಮ ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಸನ್ಮಾನಿಸಿ, ವಿದ್ಯಾರ್ಥಿಗಳು ಕೇವಲ




ಅಂಕಗಳಿಗೆಸಿಮಿತವಾಗವಾರದು ,ಉತ್ತಮ ಸಂಸ್ಕೃತಿ ಸಂಸ್ಕಾರ ಪಡೆದು ಕೊಂಡು ಶರಣರ ಆಚಾರ ವಿಚಾರಗಳನ್ನು ಅರಿಯಬೇಕು ಎಂದು ಕೊಪ್ಪಳದ ಗುರುಬಸವ ಮಹಾಮನೆಯ ಅರ್ಚನಾ ತಾಯಿ ಶಶಿಮಠ ಅವರು ಸನ್ಮಾನಿಸಿ ಮಾತನಾಡಿದರು. ಮಕ್ಕಳಿಯಶಿವಾನಂದಸ್ವಾಮೀಜಿ, ಲೇಬಗೀರಿಯ ಶಿವಕುಮಾರ ಸ್ವಾಮೀಜಿ,ವಣಗೇರಿಯ ಬಸವ ಯೋಗಾಶ್ರಮದ ಯಶವಂತ ಶರಣರು ,8 ನೆ ವಚನ ದರ್ಶನ ಚಿಂತನ ವಿಷಯ ಕಳಬೇಡ

ಕೊಲಬೇಡ ಹುಸಿಯ ನುಡಿಯಬೇಡ ,ಅನ್ಯರಿಗೆ ಅಸಹ್ಯಪಡಬೇಡ ವಚನಕುರಿತು ಶ್ರೀಗಳು ಮಾತನಾಡಿದರು. ಹಾಗು ಸಂಗಮೇಶ ತೆಗ್ಗಿನ ಮನಿ, ಸುನೀಲ್ ದೇಸಾಯಿ,ಕಳಕೇಶ ಬಳಿಗಾರ ಬಸವರಾಜ ಮಾಸ್ತಿ,ಅಶೋಕ ಮಾಲಿಪಾಟೀಲ್,ಮುದಿಯಪ್ಪ ಮೇಟಿ ಸೇರಿದಂತೆ ಶರಣ ಶರಣಿಯರು ಭಾಗವಹಿಸಿದ್ದರು.ನಂತರ ಅನ್ನ ಪ್ರಸಾದ ಜರುಗಿತು.

## ಪ್ರಭು ಹಳ್ಳೂರ ಕಾಂಗ್ರೆಸ್ ಪದವೀಧರ ವಿಭಾಗದ ಜಿಲ್ಲಾಧ್ಯಕ್ಷರಾಗಿ ನೇಮಕ

• ಮಲ್ಲಮ್ಮ ನುಡಿ ವಾರ್ತೆಬಾಗಲಕೋಟೆ



ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಅವರ ಅನುಮೋದನೆ ಮೇರೆಗೆ ಪ್ರಭು ಮಲ್ಲಣ್ಣ ಹಳ್ಳೂರ ಅವರನ್ನು ಬಾಗಲಕೋಟೆ ಜಿಲ್ಲಾ ಕಾಂಗ್ರೆಸ್ ಪದವೀಧರ ವಿಭಾಗದ ಜಿಲ್ಲಾ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದೆ ಎಂದು ಕೆಪಿಸಿಸಿ ಪದವೀಧರ ವಿಭಾಗದ ರಾಜ್ಯಾಧ್ಯಕ್ಷರಾದಎಂ. ಎಸ್. ನಟರಾಜ್ ಗೌಡ ತಿಳಿಸಿದ್ದಾರೆ. ತಮಗೆ ನೀಡಿರುವ ಜವಾಬ್ದಾರಿಯನ್ನು ನಿಷ್ಠೆಯಿಂದ ನಿರ್ವಹಿಸುತ್ತಾ ಕಾಂಗ್ರೆಸ್ ಪಕ್ಷದ ತತ್ವ, ಸಿದ್ಧಾಂತ ಮತ್ತು ಕಾರ್ಯಕ್ರಮಗಳನ್ನು ಜನಸಾಮಾನ್ಯರಿಗೆ ತಲುಪಿಸಿ, ಸಂಘಟನೆಯನ್ನು ಇನ್ನಷ್ಟು ಬಲಪಡಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಬೇಕು ಎಂದು ಅವರು ಸೂಚಿಸಿದ್ದಾರೆ.ಈ ನೇಮಕಾತಿಯಿಂದ ಜಿಲ್ಲಾ ಕಾಂಗ್ರೆಸ್ ಸಂಘಟನೆಗೆ ಮತ್ತಷ್ಟು ಶಕ್ತಿ ದೊರೆಯಲಿದ್ದು, ಪದವೀಧರ ಧ್ವನಿಯಾಗಿ ಪಕ್ಷದ ಬಲವರ್ಧನೆಗೆ ಸಹಕಾರಿಯಾಗಲಿದೆ ಎಂದು ನಟರಾಜಗೌಡ ಅಭಿಪ್ರಾಯಪಟ್ಟಿದ್ದಾರೆ.

## ಅಂಚೆ ಇಲಾಖೆಯಲ್ಲಿ ಡಿಜಿಟಲ್ ಪಾವತಿ ವ್ಯವಸ್ಥೆಗೆ ಉತ್ತೇಜನ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಮೇ.17: ಸಾರ್ವಜನಿಕರ ಸೌಲಭ್ಯ ಹಾಗೂ ವೇಗವಾದ ಸೇವೆಯನ್ನು ಗಮನದಲ್ಲಿಟ್ಟುಕೊಂಡು ಅಂಚೆ ಇಲಾಖೆ ವತಿಯಿಂದ ಅಂಚೆ ಕಚೇರಿಗಳಲ್ಲಿ ಡಿಜಿಟಲ್ ಪಾವತಿ ವ್ಯವಸ್ಥೆಯನ್ನು ಉತ್ತೇಜಿಸಲಾಗುತ್ತಿದೆ ಎಂದು ಅಂಚೆ ಇಲಾಖೆಯ ರಾಯಚೂರು ವಿಭಾಗದ ಅಧೀಕ್ಷಕರು ತಿಳಿಸಿದ್ದಾರೆ.

ಅಂಚೆ ಸೇವೆಗಳಾದ ಮನಿ ಆರ್ಡರ್, ಸ್ಪೀಡ್ ಪೋಸ್ಟ್ ಮತ್ತು ಪಾರ್ಸೆಲ್ ಬುಕಿಂಗ್, ಅಂಚೆ ಜೀವ ವಿಮೆ ಪ್ರೀಮಿಯಂ ಪಾವತಿ ಹಾಗೂ ಇತರೆ ಸೇವೆಗಳಿಗಾಗಿ ಸಾರ್ವಜನಿಕರು ಯುಪಿಐ, ಕ್ಯೂಆರ್ ಕೋಡ್, ಡೆಬಿಟ್ ಕಾರ್ಡ್, ಕ್ರೆಡಿ–ಟ್ ಕಾರ್ಡ್ ಹಾಗೂ ಮೊಬೈಲ್ ಬ್ಯಾಂಕಿಂಗ್ ಮೂಲಕ ಡಿಜಿಟಲ್ ಪಾವತಿಯನ್ನು ಬಳಸುವಂತೆ ಕೋರಲಾಗಿದೆ.

ಡಿಜಿಟಲ್ ಪಾವತಿಯಿಂದ ನಗದು ವ್ಯವಹಾರಗಳ ಅವಶ್ಯಕತೆ ಕಡಿಮೆಯಾಗುವುದರೊಂದಿಗೆ ವ್ಯವಹಾರಗಳು ಸುರಕ್ಷಿತ, ಸುಲಭ ಹಾಗೂ ಪಾರದರ್ಶಕವಾಗುತ್ತವೆ. ಜೊತೆಗೆ ಸಾರ್ವಜನಿಕರಿಗೆ ಸಮಯ ಉಳಿತಾಯವಾಗುವುದರೊಂದಿಗೆ ತ್ವರಿತ ಸೇವೆ ದೊರೆಯಲಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಡಿಜಿಟಲ್ ಪಾವತಿ ವಿಧಾನಗಳನ್ನು ಬಳಸಿಕೊಂಡು ಅಂಚೆ ಇಲಾಖೆಯ ಡಿಜಿಟಲ್ ಸೇವೆಗಳಿಗೆ ಸಹಕರಿಸುವಂತೆ ಅಂಚೆ ಇಲಾಖೆಯ ರಾಯಚೂರು ವಿಭಾಗದ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗೋರಟಾ ಸಂಗೀತ ರುದ್ರೇಶ್ವರ 4ನೇ ಜಾತ್ರಾ ಮಹೋತ್ಸವ

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ

ಕಲ್ಯಾಣ ಕರ್ನಾಟಕದ ಪುರಾತನ ಸಂಗೀತ ನೆಲೆ ಯಾದ ಗೋರಟಾ ದಲ್ಲಿ ಇದೇ ತಿಂಗಳ 19 ರಂದು ಮಂಗಳವಾರ ಮಧ್ಯಾಹ್ನ 1 : 15 ಗಂಟೆಗೆ ಶ್ರೀ ಸಂಗೀತ ರುದ್ರೇಶ್ವರ 4 ನೇ ಜಾತ್ರಾ ಮಹೋತ್ಸವ ಹಾಗೂ ಸಂಗೀತ ರುದ್ರ ಸಾರ್ವಭೌಮ ಪೂಜ್ಯ ಪಂ. ವಿರೂಪಾಕ್ಷಯ್ಯ ಸ್ವಾಮಿಗಳ 14 ನೇ, ಪೂಜ್ಯ ವೀರಮ್ಮ ಸ್ವಾಮಿ ಅವರ 9ನೇ ಪುಣ್ಯ ಸ್ಮರಣೋತ್ಸವ ತನ್ನಿಮಿತ್ತ ಕಲ್ಯಾಣ ಕರ್ನಾಟಕ ಪ್ರಾಂತೀಯ 7ನೇ ಸಂಗೀತ ಸಮ್ಮೇಳನ ಮತ್ತು ಪಂ. ವಿರೂಪಾಕ್ಷ ಸಮ್ಮಾನ್ ರಾಷ್ಟ್ರೀಯ ಪುರಸ್ಕಾರ ಪ್ರಧಾನ ಸಮಾರಂಭ ನಡೆಯಲಿದೆ.

ಪೂಜ್ಯ ವಿರೂಪಾಕ್ಷಯ್ಯ ಸ್ವಾಮಿಗಳು ಸಂಗೀತ ರುದ್ರದ ಜನಕರು,ಪಿತಾಮಹರು. ವೇದದ ರುದ್ರ ಮಂತ್ರಗಳಿಗೆ ಸಂಗೀತ ಸ್ವರ ಸಂಯೋಜಿಸಿ ಸಂಗೀತ ರುದ್ರಸಂವನ್ನು ಸ್ಥಾಪಿಸಿ ತನ್ಮೂಲಕ ದೇಶಾದ್ಯಂತ ತಮ್ಮ ವಿನೂತನ ರುದ್ರ ಸಂಗೀತ ಕಾರ್ಯಕ್ರಮವನ್ನು ನೀಡಿ ಜನ್ಮ ಭೂಮಿಗೆ ನಾಡಿಗೆ ಕೀರ್ತಿಯನ್ನು ತಂದಿರುವ ಮಹಾ ಪುರುಷರು . ಪೂಜ್ಯರ ಸತ್ಸಂಕಲ್ಪದ ಫಲವಾಗಿ ಗೋರಟಾದಲ್ಲಿ ಭವ್ಯ ಶ್ರೀ ಸಂಗೀತ ರುದ್ರೇಶ್ವರ ದೇವಾಲಯ ತಲೆಯೆತ್ತಿ ನಿಂತಿದೆ.

ಜಾತ್ರಾ ಮತ್ತು ಪೂಜ್ಯರ

ಸಂಸ್ಮರಣೋತ್ಸವದ ಅಂಗವಾಗಿ ಅನೇಕ ಧಾರ್ಮಿಕ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

19 ರಂದು ಬೆಳಗ್ಗೆ 9 ಗಂಟೆಗೆ ಶ್ರೀ ಸಂಗೀತ ರುದ್ರೇಶ್ವರಗೆ ಮತ್ತು ಪೂಜ್ಯರ ಗದ್ದುಗೆಗೆ ಶ್ರೀ ಸಂಗೀತ ರುದ್ರಾಭಿಷೇಕ ಮಹಾಪೂಜಾ ಮಹಾ ಪ್ರಸಾದ ನೆರವೇರುವುದು.

ಮಧ್ಯಾಹ್ನ 1: 15 ಗಂಟೆಗೆ ಶ್ರೀಶೈಲ ಶ್ರೀ ಅಕ್ಕಮಹಾದೇವಿ ಚೈತನ್ಯ ಪೀಠದ ಅಧಿಪತಿಗಳಾದ ಮಹಾಯೋಗಿನಿ ಪೂಜ್ಯಶ್ರೀ ಕರುಣಾದೇವಿ ಮಾತಾ ಅವರ ದಿವ್ಯ ಸಾನಿಧ್ಯ ಮತ್ತು ಸಂಸ್ಥಾನದ ಅಧಿಪತಿಗಳಾದ ಪೂಜ್ಯಷ. ಬ್ರ. ಡಾ : ರಾಜಶೇಖರ ಶಿವಾಚಾರ್ಯ ಸ್ವಾಮಿಗಳು ಹಿರೇಮಠ ಸಂಸ್ಥಾನ ಬೇಮಳಖೇಡ ಅವರ ಘನ ನೇತೃತ್ವದಲ್ಲಿ ಸಂಸ್ಮರಣೋತ್ಸವ ಉದ್ಘಾಟನಾ ಮತ್ತು ಪಂ. ವಿರೂಪಾಕ್ಷ ಸಮ್ಮಾನ್ ರಾಷ್ಟ್ರೀಯ ಮತ್ತು ರಾಜ್ಯ ಪ್ರಶಸ್ತಿ





ಪ್ರದಾನ ನಡೆಯಲಿದೆ.

ಪ್ರಸಿದ್ಧ ಹಾರ್ಮೋನಿಯಂ ವಾದಕರಾದ ಬೀದರಿನ ಪಂ. ರಾಜೇಂದ್ರ ಸಿಂಗ್ ಪವಾರ ಅವರಿಗೆ ರಾಷ್ಟ್ರೀಯ ಮತ್ತು ಮುಚಳಂಬಿಯ ಶ್ರೀ ರೇವಪ್ಪ ಪಾಂಚಾಳ ಇವರಿಗೆ ಪ್ರಶಸ್ತಿಗಳನ್ನು ನೀಡಲಾ ಗುವುದು .

ಬೀದರ್ ಸಂಸದರಾದ ಮಾನ್ಯ ಸಾಗರ್ ಖಂಡ್ರೆ ಭಾಲ್ಕಿ ಅವರು ಸಮಾರಂಭವನ್ನು ಉದ್ಘಾಟಿಸುವರು. ಬಸವಕಲ್ಯಾಣ ಶಾಸಕರಾದ ಮಾನ್ಯ ಶರಣು ಸಲಗರ ಅಧ್ಯಕ್ಷತೆ ವಹಿಸುವರು. ಎಂ ಎಲ್ ಸಿ ಡಾ. ಚಂದ್ರಶೇಖರ್ ಪಾಟೀಲ. ಮಾಜಿ ಎಂ ಎಲ್ ಸಿ ವಿಜಯ ಸಿಂಗ್, ಬೀದರ್ ಬಿಡಿಎ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ಬಿ ಜೆ ಪಿ ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ ಹಿರಿಯ ದುರಿಣ ಬಾಬುರಾವ ತುಂಬಾ, ಕೇಂದ್ರ ದಿಶಾ ಕಮಿಟಿ ಸದಸ್ಯ ಶಿವಯ್ಯ ಸ್ವಾಮಿ ಮುಂತಾದ ಗಣ್ಯರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

ಆನಂತರ ಕಲ್ಯಾಣ ಕರ್ನಾಟಕ ಪ್ರಾಂತೀಯ 7ನೇ ಸಂಗೀತ ಸಮ್ಮೇಳನ ಜರಗುವುದು. ಇದರಲ್ಲಿ ಪ್ರಶಸ್ತಿ ಪುರಸ್ಕೃತರಾದ ಪಂ. ರಾಜೇಂದ್ರ ಸಿಂಗ್ ಪವಾರ್ ಅವರ ಹಾರ್ಮೋನಿಯಂ ವಾದನ,ಪಂ, ಕೇಶವರಾವ ಸೂರ್ಯವಂಶಿ(ತಬಲಾ) ಖ್ಯಾತ ಗಾಯಕರಾದ ಉಸ್ತಾದ್ ಶೇಖ್ ಹನ್ನುಮಿಯಾ, ಕಲ್ಬುರ್ಗಿಯ ಡಾ. ನಾಗರಾಜ್ ಪುರಂಕರ,ಯಲ್ಲಾಲಿಂಗ ದಾಂಗೆ ಮತ್ತು ಪಂ. ಶಿವದೇವ ನಾವದಗಿ, ಪಂ. ಸಂಗಶೆಟ್ಟಿ ಡೋಣಗಾಪುರ, ಪಂ. ಎಸ್ ಕೆ ಪಾಟೀಲ್ ಪಂ. ಶಿವಾಜಿ ರಾವ್ ಸಗರ(ಗಾಯನ ), ಪಂ. ಹನುಮಂತ ಚಿದರಿ (ಕೊಳಲು ), ಪಂ. ಜನಾರ್ಧನ್ ವಾಗಮಾರೆ (ತಬಲಾ ), ಪಂ. ರಾಜಕುಮಾರ ಹೂಗಾರ( ಹಾರ್ಮೋನಿಯಂ )ಪಂ. ರಾಮಚಂದ್ರ ಕಲ್ಲಹಿಪ್ಪರಗಿ (ತಬಲಾ ),ಪಂ, ಗಣೇಶ್ ಪರೀಟ್ ಮುಂತಾದ ಪ್ರಸಿದ್ಧ ಸಂಗೀತಗಾರರು ಕಲಾಪ್ರದರ್ಶನ ನೀಡುವರು.

ಸಂಸ್ಥಾನದ ಗಾಯಕರು ಖ್ಯಾತ ಸಂಗೀತ ಕಲಾವಿದರಾದ ಡಾ : ಸಿದ್ದರಾಮಯ್ಯ ಸ್ವಾಮಿ ರುದ್ರಮಠ ಗೋರಟಾ ಅವರಿಂದ ಮಂಗಲ ಸಂಗೀತ ನಡೆಯುವುದು.

ಪಲ್ಲಕಿ ಉತ್ಸವ :

ಸಾಯಂಕಾಲ 6 : 30 ಗಂಟೆಗೆ ಶ್ರೀ ಸಂಗೀತ ರುದ್ರೇಶ್ವರ ಭವ್ಯ ಪಲ್ಲಕ್ಕಿ ಉತ್ಸವವು ಭಜನಾ ಮತ್ತು ಮಂಗಳವಾದ್ಯಗಳೊಂದಿಗೆ ನಡೆಯುವುದು.

ಪ್ರಯುಕ್ತ ಆಧಿಕ ಸಂಖ್ಯೆಯಲ್ಲಿ ಭಕ್ತಾದಿಗಳು ಪಾಲ್ಗೊಂಡು ಸಮಾರಂಭವನ್ನು ಯಶಸ್ವಿಗೊಳಿಸಬೇಕೆಂದು ಸಂಗೀತ ರುದ್ರೇಶ್ವರ ಸಂಸ್ಥಾನ ಗಾಯಕರು ಮತ್ತು ಕಮಿಟಿಯ ಉಪಾಧ್ಯಕ್ಷರಾದ ಡಾ : ಸಿದ್ದರಾಮಯ್ಯ ರುದ್ರಮಠ ಗೋರಟಾ, ಕಾರ್ಯದರ್ಶಿಗಳಾದ ಪ್ರೊ. ರುದ್ರೇಶ್ವರ ಸ್ವಾಮಿ, ಭೂದಾನಿಗಳಾದ ಕರಬಸಪ್ಪ ಅಕ್ಕಣ್ಣ ಜಂಟಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೂರ್ಯಕಾಂತಿ ಉತ್ಪನ್ನ ಖರೀದಿ ಕೇಂದ್ರ ಸ್ಥಾಪನೆ: ಜಿಲ್ಲಾಧಿಕಾರಿ ಎಸ್.ಪೂವಿತಾ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು



ಮೇ.17: ರಾಯಚೂರು ಜಿಲ್ಲೆಯಲ್ಲಿ 2025–26ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಎಫ್.ಎ.ಕ್ಯೂ. ಗುಣಮಟ್ಟದ ಹಿಂಗಾರು ಹಂಗಾಮಿನ ಸೂರ್ಯಕಾಂತಿ ಉತ್ಪನ್ನವನ್ನು ಖರೀದಿಸಲು ಜಿಲ್ಲೆಯಲ್ಲಿ ಖರೀದಿ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ರೈತರು ಖರೀದಿ ಕೇಂದ್ರಗಳಲ್ಲಿ ನೊಂದಾಯಿಸಿ ಸೂರ್ಯಕಾಂತಿ ಮಾರಾಟ ಮಾಡಿ ಸರ್ಕಾರದ ಯೋಜನೆಯ ಸದುಪಯೋಗ ಪಡಿಸಿಕೊಳ್ಳುವಂತೆ ಜಿಲ್ಲಾ ಟಾಸ್ಕ್ ಪೋರ್ಸ್ ಸಮಿತಿಯ ಅಧ್ಯಕ್ಷರು ಆಗಿರುವ ಜಿಲ್ಲೆಯ ಜಿಲ್ಲಾಧಿಕಾರಿಗಳಾದ ಎಸ್.ಪೂವಿತಾ ಅವರು ಕೋರಿದ್ದಾರೆ.ಸೂರ್ಯಕಾಂತಿ ಉತ್ಪನ್ನವನ್ನು ಪ್ರತಿ ಎಕರಿಗೆ 4 ಕ್ವಿಂಟಾಲ್ ಹಾಗೂ ಪ್ರತಿ ರೈತರಿಂದ ಗರಿಷ್ಠ 20 ಕ್ವಿಂಟಾಲ್ ಎಫ್.ಎ.ಕ್ಯೂ ಗುಣಮಟ್ಟದ ಪ್ರತಿ ಕ್ವಿಂಟಾಲ್‌ಗೆ 7,721ರೂ.ಗಳಂತೆ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಖರೀದಿಸಲಾಗುವುದು. ದಿನಾಂಕಃ07–05–2026 ರಿಂದ ರೈತರ ನೊಂದಣಿ ಕಾಲಾವಧಿಯನ್ನು 50 ದಿನಗಳವರೆಗೆ ಹಾಗೂ ಖರೀದಿ ಅವಧಿಯನ್ನು 60 ದಿನಗಳವರೆಗೆ ನಿಗಧಿಪಡಿಸಿದೆ.

ಖರೀದಿ ಕೇಂದ್ರಗಳು: ರಾಯಚೂರು ತಾಲೂಕಿನ ಹುಣಸಿಹಾಳ ಹುಡಾ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ಷಣ್ಮುಖ ಜಿ. ಮೊಬೈಲ್ ಸಂಖ್ಯೆ: 9743695467, ದೇವದುರ್ಗ ತಾಲೂಕಿನ ಜಾಲಹಳ್ಳಿ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ನರಸಿಂಗ ನಾಯಕ ಮೊಬೈಲ್ ಸಂಖ್ಯೆ: 7899312989, ಲಿಂಗಸಗೂರು ತಾಲೂಕಿನ ಮಟ್ಟೂರು ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ಮಲ್ಲಿಕಾರ್ಜುನ ದೇಸಾಯಿ ಮೊಬೈಲ್ ಸಂಖ್ಯೆ: 7337773317, ಹಟ್ಟಿ ರಾಷ್ಟ್ರೀಯ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ಸಾಗರ್ ಮೊಬೈಲ್ ಸಂಖ್ಯೆ: 9980903420, ಮಸ್ಕಿ ತಾಲೂಕಿನ ಮೆದಕಿನಾಳ ರಾಷ್ಟ್ರೀಯ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ಕೊಟ್ರಪ್ಪ ಮೊಬೈಲ್ ಸಂಖ್ಯೆ: 9663704929, ಸಿಂಧನೂರು ತಾಲೂಕಿನ ಜವಳಗೇರಾ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ದೇವರಾಜ ಮೊಬೈಲ್ ಸಂಖ್ಯೆ: 9964165509, ಹುಡಾ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ಚನ್ನನಗೌಡ ಮೊಬೈಲ್ ಸಂಖ್ಯೆ: 9964315868, ಪಗಡದಿನ್ನಿ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ಮಲ್ಲಿಕಾರ್ಜುನ ಮೊಬೈಲ್ ಸಂಖ್ಯೆ: 9945738297, ಮಾನವಿ ತಾಲೂಕಿನ ತೋರಣದಿನ್ನಿ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ಬಸಯ್ಯ .ಟಿ ಮೊಬೈಲ್ ಸಂಖ್ಯೆ: 9902387316, ಸಿರವಾರ ತಾಲೂಕಿನ ಸಿರವಾರ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ನಿಂಬಯ್ಯ ಸ್ವಾಮಿ ಮೊಬೈಲ್ ಸಂಖ್ಯೆ: 9880891919, ಹರವಿ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ವೀರೇಶ್ ಮೊಬೈಲ್ ಸಂಖ್ಯೆ: 7899964173ಗೆ ರೈತರು ಸಂಪರ್ಕ ಮಾಡಬಹುದಾಗಿದೆ.ರೈತರ ಬಾಂಧವರು ಫ್ರೂಟ್ಸ್ ಐ.ಡಿ ಯೊಂದಿಗೆ ತಮ್ಮ ಹತ್ತಿರದ ಖರೀದಿ ಕೇಂದ್ರಗಳಲ್ಲಿ ನೊಂದಾಯಿಸಿ ಸೂರ್ಯಕಾಂತಿ ಮಾರಾಟ ಮಾಡಿ ಸರ್ಕಾರದ ಯೋಜನೆಯ ಸದುಪಯೋಗ ಪರಿಡಿಸಕೊಳ್ಳುವಂತೆ ಜಿಲ್ಲೆಯ ರೈತ ಬಾಂಧವರಲ್ಲಿ ಜಿಲ್ಲಾ ಟಾಸ್ಕ್ ಪೋರ್ಸ್ ಸಮಿತಿಯ ಅಧ್ಯಕ್ಷರು ಆಗಿರುವ ಜಿಲ್ಲೆಯ ಜಿಲ್ಲಾಧಿಕಾರಿ ಎಸ್.ಪೂವಿತಾ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಮೇ.17: ಭಾರತ ಚುನಾವಣಾ ಆಯೋಗ ನವದೆಹಲಿ ವತಿಯಿಂದ ಕರ್ನಾಟಕ ಸೇರಿದಂತೆ 16 ರಾಜ್ಯಗಳು ಹಾಗೂ 03 ಕೇಂದ್ರಾಡಳಿತ ಪ್ರದೇಶಗಳಲ್ಲಿ ಹಂತ ಹಂತವಾಗಿ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ (ಎಸ್.ಐ.ಆರ್) ನಡೆಸಲು ನಿರ್ದೇಶನ ನೀಡಲಾಗಿದೆ ಎಂದು 53 ಹಾಗೂ 54ನೇ ವಿಧಾನ ಸಭಾ ಕ್ಷೇತದ ಸಹಾಯಕ ಮತದಾರರ ನೋಂದಣಾಧಿಕಾರಿಗಳು ಆಗಿರುವ ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ ಅವರು ತಿಳಿಸಿದ್ದಾರೆ.

ಜನಗಣತಿಯ ಗೃಹಪಟ್ಟಿ ಕಾರ್ಯನಡೆಯುತ್ತಿರುವ ಹಿನ್ನೆಲೆಯಲ್ಲಿ ಸಾಮಾನ್ಯಕ್ಷೇತ್ರಯಂತ್ರಾಂಗದ ಲಭ್ಯತೆಯನ್ನು ಪರಿಗಣಿಸಿ ಎಸ್‌ಐಆರ್ ಹಂತ–3ರ ವೇಳಾಪಟ್ಟಿಯನ್ನು ನಿಗದಿಪಡಿಸಲಾಗಿದೆ.

ಎಸ್‌ಐಆರ್ ಹಂತ–3ರ ಸಂದರ್ಭದಲ್ಲಿ ಕರ್ನಾಟಕ ರಾಜ್ಯದಲ್ಲಿ ಸುಮಾರು 59,050 ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒಎಸ್) ಮನೆ ಮನೆಗೆ ಭೇಟಿ ನೀಡಿ ಮತದಾರರ ಮಾಹಿತಿಯನ್ನು ಸಂಗ್ರಹಿಸಲಿದ್ದು, ರಾಜಕೀಯ ಪಕ್ಷಗಳಿಂದ ನೇಮಕಗೊಂಡಿರುವ 25,284 ಬೂತ್ ಮಟ್ಟದ ಏಜೆಂಟರಗಳು (ಬಿಎಲ್‌ಒಎಸ್) ಅವರಿಗೆ ಸಹಕಾರ ನೀಡಲಿದ್ದು, ರಾಯಚೂರು ತಾಲ್ಲೂಕಿನ ಎಲ್ಲಾ ಮತದಾರರು ಈ ಪಕ್ರಿಯೆಯಲ್ಲಿ ಸಹಕರಿಸುವಂತೆ ಕೋರಲಾಗಿದೆ.

ಅರ್ಹತಾ ದಿನಾಂಕ: 01–10–2026, ತರಬೇತಿ ಮತ್ತು ಮುದ್ರಣ ಸಿದ್ದತೆ ದಿನಾಂಕ: 20–06–2026ರಿಂದ ದಿನಾಂಕ: 29–06–2026ರವರೆಗೆ ನಡೆಸಲಾಗುವುದು. ದಿನಾಂಕ:30–06–2026ರಿಂದ ದಿನಾಂಕ: 29–07–2026ರವರೆಗೆ ಬಿಎಲ್‌ಒಎಸ್ ರಿಂದ ಮನೆ ಮನೆ ಭೇಟಿ ನೀಡಲಿದ್ದಾರೆ. ದಿನಾಂಕ: 29–07–2026ರೊಳಗೆ ಮತಗಟ್ಟೆಗಳ ತರ್ಕಬದ್ಧಗೊಳಿಸುವಿಕೆ, ದಿನಾಂಕ: 05–08–2026ರಂದು ಕರಡು ಮತದಾರರ ಪಟ್ಟಿ ಪ್ರಕಟಣೆ ಮಾಡಲಾಗುವುದು. ದಿನಾಂಕ:05–08–2026 ರಿಂದ ದಿನಾಂಕ: 04–09–2026ರವರೆಗೆ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸುವ ಅವಕಾಶ ನೀಡಲಾಗಿದೆ. ದಿನಾಂಕ: 07–10–2026ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಣೆ ಮಾಡಲಾಗುವುದು.

ರಾಜ್ಯದಲ್ಲಿ ಬಿಎಲ್‌ಒ 59,050, ಬಿಎಲ್‌ಎ 25,284 ಹಾಗೂ ಒಟ್ಟು 5,55,74,064 ಮತದಾರರು ಹೊಂದಲಾಗಿದ್ದು, ರಾಯಚೂರು ತಾಲ್ಲೂಕಿನ ಎಲ್ಲಾ ಮತದಾರರು ಬೂತ್ ಮಟ್ಟದ ಅಧಿಕಾರಿಗಳು ಮನೆಗೆ ಭೇಟಿ ನೀಡುವ ಸಂದರ್ಭದಲ್ಲಿ ಸಹಕರಿಸಿ, ತಮ್ಮ ಹೆಸರು, ವಿಳಾಸ ಹಾಗೂ ಇತರ ವಿವರಗಳು ಮತದಾರರ ಪಟ್ಟಿಯಲ್ಲಿ ಸರಿಯಾಗಿ ನಮೂದಾಗಿರುವುದನ್ನು ಖಚಿತಪಡಿಸಿಕೊಳ್ಳುವಂತೆ 53 ಹಾಗೂ 54 ವಿಧಾನ ಸಭಾ ಕ್ಷೇತದ ಸಹಾಯಕ ಮತದಾರರ ನೋಂದಣಾಧಿಕಾರಿಗಳು ಆಗಿರುವ ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೀಜದ ಕೊರತೆ ಆಗದಂತೆ ಬೀದರ ಕೃಷಿ ನಿರ್ದೇಶಕರಿಗೆ ರೈತ ಸಂಘದ ಮನವಿ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ



ತಾಲೂಕನಲ್ಲಿ ಸೋಯಾಬೀನ್ ಬಿತ್ತನೆ ಬೀಜದ ತೀವ್ರ ಕೊರತೆ ಎದುರಾಗುತ್ತಿದು, ರೈತರಿಗೆ ತೊಂದರೆ ಆಗುತ್ತಿದೆ. ಈ ಸಮಸ್ಯೆಯನ್ನು ಬಗೆಹರಿಸುವಂತೆ ಕೋರಿ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆಯ ಪದಾಧಿಕಾರಿಗಳು ಬೀದರ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರಿಗೆ ಮನವಿ ಪತ್ರ ಸಲ್ಲಿಸಿದರು.

ಕಳೆದ ಎರಡು–ಮೂರು ವರ್ಷಗಳಿಂದ ಕಮಲನಗರ ತಾಲೂಕಿನಲ್ಲಿ ಸೋಯಾಬೀನ್ ಬಿತ್ತನೆ ಬೀಜಗಳ ಕೊರತೆ ನಿರಂತರವಾಗಿ ಕಾಡುತ್ತಿದೆ. ಪ್ರತಿ ವರ್ಷ ಸುಮಾರು 8000 ಕ್ವಿಂಟಾಲ್ ಬೀಜಗಳ ಬೇಡಿಕೆ ಇದ್ದರೂ, ಪೂರೈಕೆಯಾಗುತ್ತಿರುವುದು ಕೇವಲ 5000 ಕ್ವಿಂಟಾಲ್ ಮಾತ್ರ. ಇದರಿಂದಾಗಿ ರೈತರು ಸಕಾಲದಲ್ಲಿ ಬಿತ್ತನೆ ಮಾಡಲು ಸಾಧ್ಯವಾಗದೆ ನಷ್ಟ ಅನುಭವಿಸುವಂತಾಗಿದೆ ಎಂದು ರೈತ ಸಂಘದ ಮುಖಂಡರು ಮನವಿಯಲ್ಲಿ ವಿವರಿಸಿದ್ದಾರೆ.

ಅಲ್ಪ ಪ್ರಮಾಣದಲ್ಲಿ ಸರಬರಾಜಾಗುತ್ತಿರುವ ಬೀಜಗಳು ತಾಲ್ಲೂಕಿನಾದ್ಯಂತ ವಿತರಣೆಯಾಗದೆ, ಕೇವಲ ಒಂದೆರಡು ಹೋಬಳಿಗಳಿಗೆ ಸೀಮಿತವಾಗುತ್ತಿವೆ. ಇದರಿಂದ ಕಮಲನಗರ ಹೋಬಳಿಯ ರೈತರಿಗೆ ತೀವ್ರ ಅನ್ಯಾಯವಾಗುತ್ತಿದೆ ಎಂದು ಮುಖಂಡರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ವರ್ಷದ ಮುಂಗಾರು ಹಂಗಾಮು ಆರಂಭವಾಗಲಿದ್ದು, ತಕ್ಷಣವೇ ಕಮಲನಗರ ತಾಲ್ಲೂಕಿಗೆ ಕನಿಷ್ಠ 8000 ಕ್ವಿಂಟಾಲ್ ಸೋಯಾಬೀನ್ ಬಿತ್ತನೆ ಬೀಜಗಳನ್ನು ಪೂರೈಸಲು ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಲಿದ್ದಾರೆ ಎಂದು ರೈತ ಸಂಘದ ಪದಾಧಿಕಾರಿಗಳು ಎಚ್ಚರಿಸಿದ್ದಾರೆ. ಮನವಿ ಸ್ವೀಕರಿಸಿದ ಜಂಟಿ ಕೃಷಿ ನಿರ್ದೇಶಕರು, ಸಮಸ್ಯೆಯನ್ನು ಪರಿಶೀಲಿಸಿ ಶೀಘ್ರವಾಗಿ ಬೀಜ ಪೂರೈಕೆಗೆ ಕ್ರಮ ಕೈಗೊಳ್ಳುವ ಭರವಸೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ರೈತ ಸಂಘದ ತಾಲ್ಲೂಕು ಅಧ್ಯಕ್ಷ ಪ್ರವೀಣ ಕುಲಕರ್ಣಿ,ಕಾರ್ಯದರ್ಶಿ ವಿಜಯಕುಮಾರ್ ಪಾಟೀಲ್,ಪ್ರಮುಖರಾದ ಶಿವಲಿಂಗಪ್ಪ, ಶಾಂತಪ್ಪ, ಬಸವರಾಜ, ಸಿದ್ದರಾಮಪ್ಪ, ಶೇಷಾರಾವ, ಸೇರಿದಂತೆ ಹಲವು ರೈತ ಮುಖಂಡರು ಉಪಸ್ಥಿತರಿದ್ದರು.

# ಜೀನ್ಸ್ ಪಾರ್ಕ್ ಭೂಸ್ವಾಧೀನದಲ್ಲಿ ರೈತರಿಗೆ ಅನ್ಯಾಯ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಜಿಲ್ಲೆಯ ಪ್ರಸ್ತಾವಿತ ಜೀನ್ಸ್ ಪಾರ್ಕ್ ನಿರ್ಮಾಣಕ್ಕಾಗಿ ನಡೆಯುತ್ತಿರುವ ಭೂಸ್ವಾಧೀನ ಪ್ರಕ್ರಿಯೆಯಲ್ಲಿ ರೈತರಿಗೆ ಅನ್ಯಾಯವಾಗುತ್ತಿದ್ದು, ಒತ್ತಡ ಹಾಗೂ ಬೆದರಿಕೆ ಮೂಲಕ ಭೂಮಿ ಪಡೆದುಕೊಳ್ಳಲು ಯತ್ನಿಸಲಾಗುತ್ತಿದೆ ಎಂದು ಸಂಜೀವರಾಯನಕೋಟೆ ಗ್ರಾಮದ ರೈತ ಹಾಗೂ ಸಾಮಾಜಿಕ ಹೋರಾಟಗಾರ ಹೊನ್ನುರಸ್ವಾಮಿ ಕೆ.ಟಿ. ಆರೋಪಿಸಿದ್ದಾರೆ.ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಮಿಂಚೇರಿ, ಸಂಜೀವರಾಯನಕೋಟೆ, ಮುಂಡ್ರಗಿ, ಹಲಕುಂದಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ರೈತರ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳುವ ಪ್ರಕ್ರಿಯೆ ನಡೆ–ಯುತ್ತಿದೆ. ಕೈಗಾರಿಕೆ ನಿರ್ಮಾಣಕ್ಕೆ ರೈತರು ವಿರೋಧಿಗಳಲ್ಲ. ಆದ–ರೆ ನ್ಯಾಯಯುತ ಪರಿಹಾರ ನೀಡದೆ ಅಧಿಕಾರಿಗಳು ಹಾಗೂ ಮಧ್ಯವರ್ತಿಗಳು ಒತ್ತಡ ಹೇರುತ್ತಿದ್ದಾರೆ ಎಂದು ದೂರಿದ್ದಾರೆ. ಕುಡತಿನಿ ಭಾಗದಲ್ಲಿ ಭೂಸ್ವಾಧೀನ ಪ್ರಕರಣಕ್ಕೆ ಸಂಬಂಧಿಸಿದಂತೆ ನ್ಯಾಯಾಲಯವು ಪ್ರತಿ ಎಕರೆಗೆ ಸುಮಾರು ?1 ಕೋಟಿ 1 ಲಕ್ಷ ಪರಿಹಾರ ನೀಡುವಂತೆ ಆದೇಶಿಸಿರುವುದಾಗಿ ತಿಳಿಸಿರುವ ಅವರು, ಅದೇ ರೀತಿಯಲ್ಲಿ ಈ ಭಾಗದ ರೈತರಿಗೆ ಸಹ ಸಮಾನ ಪರಿಹಾರ ನೀಡಬೇಕು ಎಂದು ಆಗ್ರಹಿಸಿದ್ದಾರೆ.ಕೆಲ ಅಧಿಕಾರಿಗಳು ಹಾಗೂ ಮಧ್ಯವರ್ತಿಗಳು ಸೇರಿ ಪ್ರತಿ ಎಕರೆಗೆ ಕೇವಲ ?62ರಿಂದ ?65 ಲಕ್ಷವರೆಗೆ ಮಾತ್ರ ನೀಡಲಾಗುತ್ತದೆ ಎಂದು ಹೇಳುತ್ತಿದ್ದು, ಅದರಲ್ಲಿ ಕೂಡ ?2ರಿಂದ ?5 ಲಕ್ಷವರೆಗೆ ಕಮಿಷನ್ ನೀಡುವಂತೆ ಒತ್ತಾಯಿಸುತ್ತಿದ್ದಾರೆ ಎಂಬ ಆರೋಪಗಳೂ ಕೇಳಿಬರುತ್ತಿವೆ ಎಂದು ತಿಳಿಸಿದ್ದಾರೆ."ಈಗ ಒಪ್ಪದಿದ್ದರೆ ಸರ್ಕಾರ ಕಡಿಮೆ ದರಕ್ಕೆ ಭೂಮಿ ಪಡೆದುಕೊಳ್ಳುತ್ತದೆ. ನಂತರ ಏನೂ ಮಾಡಲು ಸಾಧ್ಯವಿಲ್ಲ" ಎಂದು ರೈತರಿಗೆ ಬೆದರಿಕೆ ಹಾಕಲಾಗುತ್ತಿದೆ. ಇದರಿಂದ ರೈತರು ಆತಂಕಕ್ಕೊಳಗಾಗಿದ್ದು, ಕಣ್ಣೀರು ಹಾಕುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಅವರು ಹೇಳಿದ್ದಾರೆ.

ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಜಿಲ್ಲಾ ಉಸ್ತುವಾರಿ ಮಂತ್ರಿ ಜಮೀರ್ ಅಹ್ಮದ್ ಅವರು, ನಗರ ಶಾಸಕ ಭರತ್ ರೆಡ್ಡಿಯವರು ಹಾಗೂ ತನ್ನ ಕ್ಷೇತ್ರದ ಜನತೆಗೆ ನ್ಯಾಯ ಕೊಡಿಸಲು ಗ್ರಾಮಿಣ ಶಾಸಕ ನಾಗೇಂದ್ರ ಅವರು ಮಧ್ಯಪ್ರವೇಶಿಸಿ ಉನ್ನತ ಮಟ್ಟದ ತನಿಖೆ ನಡೆಸಬೇಕು. ರೈತರಿಗೆ ಯಾವುದೇ ರೀತಿಯ ಒತ್ತಡ ತರದಂತೆ ಅಧಿಕಾರಿಗಳಿಗೆ ಸೂಚನೆ ನೀಡಬೇಕು. ಮಧ್ಯವರ್ತಿಗಳ ಹಸ್ತಕ್ಷೇಪ ತಡೆಯಬೇಕು. ಭ್ರಷ್ಟಾಚಾರ ಹಾಗೂ ಕಮಿಷನ್ ಆರೋಪಗಳ ಕುರಿತು ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ರೈತರು ಸರ್ಕಾರದ ವಿರುದ್ಧ ಇಲ್ಲ. ಆದರೆ ಬದುಕಿನ ಆಧಾರವಾದ ಭೂಮಿಗೆ ನ್ಯಾಯಯುತ ಬೆಲೆ ಮತ್ತು ಗೌರವ ಬೇಕು ಎಂಬುದು ನಮ್ಮ ಬೇಡಿಕೆಯಾಗಿದೆ ಎಂದು ಹೊನ್ನುರಸ್ವಾಮಿ ಕೆ.ಟಿ. ತಿಳಿಸಿದ್ದಾರೆ.

# ಸರ್ಕಾರದ ನಿಲುವಿಗೆ ಸಿಡಿದೆದ್ದ ಕೆಎಸ್‌ಆರ್‌ಟಿಸಿ ಸಿಬ್ಬಂದಿ ಏಸ್ಮಾ ಬೆದರಿಕೆಗೆ ಜಗ್ಗುವುದಿಲ್ಲ; 19ರ ರಾತ್ರಿಯಿಂದ ಬಸ್ ಬಂದ್

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಸಾರಿಗೆ ನೌಕರರ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ರಾಜ್ಯ ಸರ್ಕಾರದ ವಿರುದ್ಧ ಕೆಎಸ್‌ಆರ್‌ಟಿಸಿ ಹಾಗೂ ಇತರೆ ಸಾರಿಗೆ ನಿಗಮಗಳ ಸಿಬ್ಬಂದಿ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. "ಏಸ್ಮಾ ಕಾಯ್ದೆ ಜಾರಿಗೊಳಿಸಿದರೂ ನಾವು ಹೆದರುವ ಪ್ರಶ್ನೆಯೇ ಇಲ್ಲ. ನೌಕರರ ಹಕ್ಕುಗಳಿಗಾಗಿ ಹೋರಾಟ ಮುಂದುವರಿಯುತ್ತದೆ" ಎಂದು ಸಾರಿಗೆ ನೌಕರರ ಸಂಘದ ಅಧ್ಯಕ್ಷ ಅದಿಮೂರ್ತಿ ಹೇಳಿದರು.

ನಗರದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕಳೆದ ಹಲವು ತಿಂಗಳುಗಳಿಂದ ಸಾರಿಗೆ ನೌಕರರು ವೇತನ ಪರಿಷ್ಕರಣೆ ಸೇರಿದಂತೆ ವಿವಿಧ ಬೇಡಿಕೆಗಳನ್ನು ಮುಂದಿಟ್ಟುಕೊಂಡು ಹೋರಾಟ ನಡೆಸುತ್ತಿದ್ದರೂ ಸರ್ಕಾರ ಸಮಸ್ಯೆ ಪರಿಹಾರಕ್ಕೆ ಗಂಭೀರವಾಗಿ ಸ್ಪಂದಿಸುತ್ತಿಲ್ಲ ಎಂದು ಆರೋಪಿಸಿದರು."ಸಾರಿಗೆ ನೌಕರರಿಗೆ 38 ತಿಂಗಳ ಬಾಕಿ ವೇತನವನ್ನು ಸರ್ಕಾರ ತಕ್ಷಣ ಬಿಡುಗಡೆ ಮಾಡಬೇಕು. ಜೊತೆಗೆ ಕನಿಷ್ಠ 25 ಶೇಕಡಾ ವೇತನ ಹೆಚ್ಚಳ ಮಾಡಬೇಕು. ಆದರೆ ಸರ್ಕಾರ ಕೇವಲ 12.5 ಶೇಕಡಾ ವೇತನ ಹೆಚ್ಚಳ ಘೋಷಣೆ ಮಾಡುವ ಮೂಲಕ ಸಿಬ್ಬಂದಿಯ ಕಣ್ಣೊರೆಸುವ ಕೆಲಸ ಮಾಡುತ್ತಿದೆ. ಈ ಪ್ರಸ್ತಾವನೆಯನ್ನು ನಾವು ಯಾವ ಕಾರಣಕ್ಕೂ ಒಪ್ಪುವುದಿಲ್ಲ" ಎಂದು ಸ್ಪಷ್ಟಪಡಿಸಿದರು.ಸಾರಿಗೆ ನೌಕರರು ರಾಜ್ಯದ ಜನತೆಗೆ ನಿರಂತರ ಸೇವೆ ಸಲ್ಲಿಸುತ್ತಿದ್ದು, ಸಂಕಷ್ಟದ ಸಂದರ್ಭಗಳಲ್ಲೂ ಕರ್ತವ್ಯ ನಿರ್ವಹಿಸಿದ್ದಾರೆ. ಆದರೂ ಅವರ ಪರಿಶ್ರಮಕ್ಕೆ ತಕ್ಕ ಗೌರವ ಹಾಗೂ ಸೌಲಭ್ಯ ದೊರೆಯುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

"ನಮ್ಮ ಹೋರಾಟವು ಕೇವಲ ವೇತನಕ್ಕಾಗಿ ಮಾತ್ರವಲ್ಲ; ನೌಕರರ ಬದುಕಿನ ಭದ್ರತೆ ಮತ್ತು ಗೌರವಕ್ಕಾಗಿ ನಡೆಯುತ್ತಿದೆ. ಸರ್ಕಾರ ಮಾತುಕತೆಗೆ ಮುಂದಾಗಿ ಸಮಸ್ಯೆ ಬಗೆಹರಿಸಬೇಕಿತ್ತು. ಆದರೆ ಉದ್ದೇಶಪೂರ್ವಕವಾಗಿ ವಿಳಂಬ ಮಾಡುತ್ತಿದೆ" ಎಂದು ದೂರಿದರು.

ಅಗತ್ಯ ಸೇವೆಗಳ ನಿರ್ವಹಣಾ ಕಾಯ್ದೆ (ಏಸ್ಮಾ) ಜಾರಿಗೊಳಿಸುವ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, "ನೌಕರರನ್ನು ಬೆದರಿಸಿ ಹೋರಾಟ ಹತ್ತಿಕ್ಕಲು ಸಾಧ್ಯವಿಲ್ಲ. ಸರ್ಕಾರ ನಮ್ಮ ಬೇಡಿಕೆಗಳಿಗೆ ಸ್ಪಂದಿಸದಿದ್ದರೆ ಹೋರಾಟ ಇನ್ನಷ್ಟು ತೀವ್ರಗೊಳ್ಳಲಿದೆ" ಎಂದು ಎಚ್ಚರಿಸಿದರು.

ಮೇ 19ರ ರಾತ್ರಿ ರಾಜ್ಯಾದ್ಯಂತ ಬಸ್ ಸಂಚಾರ ಬಂದ್ ಮಾಡಲು ನಿರ್ಧರಿಸಿರುವುದಾಗಿ ತಿಳಿಸಿದ ಅವರು, "ಬಸ್ ಬಂದ್‌ನಿಂದ ಸಾರ್ವಜನಿಕರಿಗೆ ತೊಂದರೆ ಆಗಬಹುದು. ಆದರೆ ಈ ಪರಿಸ್ಥಿತಿಗೆ ಸಂಪೂರ್ಣ ಹೊಣೆ ರಾಜ್ಯ ಸರ್ಕಾರವೇ ಹೊರಬೇಕು" ಎಂದರು.

ಈ ವೇಳೆ ರಾಜ್ಯದ ಜನತೆಗೆ ಪ್ರತಿಭಟನೆ ಹಾಗೂ ಬಸ್ ಬಂದ್ ಕುರಿತು ಮಾಹಿತಿ ನೀಡುವ ಉದ್ದೇಶದಿಂದ ಸಾರಿಗೆ ನೌಕರರು ಕರಪತ್ರಗಳನ್ನು ಬಿಡುಗಡೆ ಮಾಡಿದರು. ಸಂಘದ ಪದಾಧಿಕಾರಿಗಳು ಹಾಗೂ ನೌಕರರು ಉಪಸ್ಥಿತರಿದ್ದರು.

# ಮಾರುತಿ ಬೌದ್ದೆ ಅವರನ್ನು ಶಾಸನ ಸಭೆಗೆ ಕಳುಹಿಸಬೇಕು : ಸುರೇಶ್ ಚೆನ್ನಶೆಟ್ಟಿ

• ಮಲ್ಲಮ್ಮ ನುಡಿ ವಾರ್ತೆ ಬೀದರ



ಮೇ 17: ಸಾಮಾಜಿಕ ಹೋರಾಟಗಾರರಾದ ಮಾರುತಿ ಬೌದ್ದೆ ಅವರನ್ನು ಶಾಸನ ಸಭೆಗೆ ಕಳುಹಿಸಿದರೆ ಬುದ್ಧ, ಬಸವ ಮತ್ತು ಅಂಬೇಡ್ಕರ್ ಅವರ ಚಿಂತನೆಗಳು ಇನ್ನಷ್ಟು ಪರಿಣಾಮಕಾರಿಯಾಗಿ ಸಮಾಜದಲ್ಲಿ ಪ್ರಚಾರವಾಗಲಿವೆ ಎಂದು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಸುರೇಶ್ ಚೆನ್ನಶೆಟ್ಟಿ ಅಭಿಪ್ರಾಯಪಟ್ಟರು.ಮಾರುತಿ ಬೌದ್ದೆ ಅವರ ಜನ್ಮದಿನ ಹಾಗೂ ಡಿ.ಎಸ್.ಎಸ್ ಮೂಲಕ 40 ವರ್ಷಗಳ ಕಾಲ ಸಾಮಾಜಿಕ ಕ್ಷೇತ್ರದಲ್ಲಿ ಸಲ್ಲಿಸಿದ ಸೇವೆಯನ್ನು ಗುರುತಿಸಿ ಅಭಿನಂದನಾ ಕಾರ್ಯಕ್ರಮವು ಜೂನ್ 15, 2026 ರಂದು ರಾತ್ರಿ 8 ಗಂಟೆಗೆ ನಗರದ ಚಿದ್ರಿ ರಸ್ತೆಯ ಪರ್ವಾಜ್ ಫಂಕ್ಷನ್ ಹಾಲ್‌ನಲ್ಲಿ ಜರುಗಿತು.ಕಾರ್ಯಕ್ರಮವನ್ನು ಬುದ್ಧ, ಬಸವ ಹಾಗೂ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಭಾವಚಿತ್ರಗಳಿಗೆ ಮಾಲಾರ್ಪಣೆ ಮಾಡುವ ಮೂಲಕ ಆರಂಭಿಸಲಾಯಿತು. ಡಿ.ಎಸ್.ಎಸ್ ರಾಜ್ಯ ಸಂಚಾಲಕರಾದ ಡಾ. ಡಿ.ಜಿ. ಸಾಗರ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಮಾರುತಿ ಬೌದ್ದೆ ಅವರು ಬಡವರು, ನಿರ್ಗತಿಕರು, ಶೋಷಿತರು, ರೈತರು, ಕಾರ್ಮಿಕರು ಹಾಗೂ ಮಹಿಳೆಯರ ಪರ ನಿರಂತರ ಹೋರಾಟ ನಡೆಸುತ್ತಿರುವ ವ್ಯಕ್ತಿ. ಅವರಿಗೆ ರಾಜಕೀಯ ಆಶ್ರಯ ದೊರೆತರೆ ಸಮಾಜಮುಖಿ ಕೆಲಸಗಳನ್ನು ಇನ್ನಷ್ಟು ವ್ಯಾಪಕವಾಗಿ ಮಾಡುವ ಶಕ್ತಿ ಬರಲಿದೆ ಎಂದು ಹೇಳಿದರು.ಪೂಜ್ಯ ಭಂತೆ ಧಮ್ಮನಾಗ ಹತ್ಯಾಳ ತ್ರೀಶರಣ ಪಂಚಶೀಲ ನಡೆಸಿಕೊಟ್ಟು ಆಶೀರ್ವಚನ ನೀಡಿದರು. ಮಾರುತಿ ಬೌದ್ದೆ ಅವರು ಅಪಾರ ಸ್ನೇಹಿತರು, ಅಭಿಮಾನಿಗಳು ಹಾಗೂ ಹಿತೈಷಿಗಳನ್ನು ಹೊಂದಿರುವ ವ್ಯಕ್ತಿ. ಅನ್ಯಾಯದ ವಿರುದ್ಧ ಸದಾ ಧ್ವನಿ ಎತ್ತುವ ಹೋರಾಟಗಾರರಾಗಿದ್ದು, ಪ್ರಬುದ್ಧ ಭಾರತದ ನಿರ್ಮಾಣಕ್ಕಾಗಿ ಅವರ ಸೇವೆ ಮುಂದುವರಿಯಲಿ ಎಂದು ಹಾರೈಸಿದರು. ತಥಾಗತ ಬುದ್ಧರು ಹಾಗೂ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಆಶೀರ್ವಾದ ಸದಾ ಅವರ ಮೇಲೆ ಇರಲಿದೆ ಎಂದು ತಿಳಿಸಿದರು.

ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಸುರೇಶ್ ಚೆನ್ನಶೆಟ್ಟಿ ಮಾತನಾಡಿ, ದಲಿತ ಮತ್ತು ಬಹುಜನ ಸಮಾಜ ಇತರರನ್ನು ಅಧಿಕಾರಕ್ಕೆ ತರಲು ಯೋಚಿಸುವ ಬದಲು ತಾವೇ ಅಧಿಕಾರಕ್ಕೆ ಬರುವ ಕುರಿತು ಚಿಂತನೆ ಮಾಡಬೇಕು. ಆಗ ಮಾತ್ರ ನಿಜವಾದ ಬದಲಾವಣೆ ಸಾಧ್ಯ. ಬುದ್ಧ, ಬಸವ ಮತ್ತು ಅಂಬೇಡ್ಕರ್ ಅವರ ತತ್ವಗಳನ್ನು ಸಮಾಜದ ತಳಮಟ್ಟಕ್ಕೆ ತಲುಪಿಸಲು ಮಾರುತಿ ಬೌದ್ದೆ ಅವರಂತಹ ಹೋರಾಟಗಾರರನ್ನು ಶಾಸನ ಸಭೆಗೆ ಕಳುಹಿಸುವ ಅಗತ್ಯವಿದೆ ಎಂದು ಹೇಳಿದರು.

ವಿಶೇಷ ಸನ್ಮಾನ ಸ್ವೀಕರಿಸಿದ ರಾಷ್ಟ್ರೀಯ ಬಸವ ಪುರಸ್ಕಾರ ಪುರಸ್ಕೃತರಾದ ಪೂಜ್ಯ ಸಿದ್ದರಾಮ ಶರಣರು ಬೆಲ್ದಾಳ ಮಾತನಾಡಿ, ಮನುವಾದಕ್ಕೆ ತಕ್ಕ ಉತ್ತರ ನೀಡಲು ಬುದ್ಧ, ಬಸವ ಹಾಗೂ ಅಂಬೇಡ್ಕರ್ ಸಿದ್ಧಾಂತಗಳನ್ನು ಗಟ್ಟಿಗೊಳಿಸುವ ಕೆಲಸದಲ್ಲಿ ಮಾರುತಿ ಬೌದ್ದೆ ಅವರು ತಮ್ಮ ಸಂಘಟನೆಯ ಕಾರ್ಯಕರ್ತರೊಂದಿಗೆ ಇನ್ನಷ್ಟು ದೃಢವಾಗಿ ನಿಲ್ಲಬೇಕು ಎಂದು ಕರೆ ನೀಡಿದರು.

## ಸಿಡಿಲಿನ ಹೊಡೆತಕ್ಕೆ ಸಾವು



**ಮುದಗಲ್:** ಕೋಮಲಪುರ ಗ್ರಾಮದಲ್ಲಿ ರವಿವಾರ ಮಧ್ಯಾಹ್ನ ಸಿಡಿಲಿನ ಹೊಡೆತಕ್ಕೆ ಒಬ್ಬ ಮೃತಪಟ್ಟ ಘಟನೆ ಜರುಗಿದೆ. ಕರಿಯಪ್ಪ ತಂ. ಅಯ್ಯಪ್ಪ ಗಣಿಕಿಹಾಳ (47) ಮೃತಪಟ್ಟವರು. ಹೊಲಕ್ಕೆ ಗೊಬ್ಬರ ತುಂಬಲು ಹೋದಾಗ ಸಿಡಿಲು ಬಡಿದಿದೆ ಎಂದು ಉಪ ತಹಸಿಲ್ದಾರ್ ತುಜಜಾರಾಮ್ ಸಿಂಗ್ ತಿಳಿಸಿದ್ದಾರೆ. ಗ್ರಾಮಕ್ಕೆ ಕಂದಾಯ ಹಾಗೂ ಪೊಲೀಸ್ ಅಧಿಕಾರಿಗಳು ಭೇಟಿ ನೀಡಿ ಪರಿಶೀಲಿಸಿದರು.

## ಬೆಲೆ ಏರಿಕೆ ಹಿಂಪಡೆಯಲು ಒತ್ತಾಯ



**ಬೀದರ:** ಕೇಂದ್ರ ಸರ್ಕಾರವು ಪಂಚರಾಜ್ಯಗಳ ಚುನಾವಣೆ ಮುಗಿದ ತಕ್ಷಣ ಪೆಟ್ರೋಲ್ ಹಾಗೂ ಡೀಸೆಲ್ ದರವನ್ನು ಪ್ರತಿ ಲೀಟರ್‌ಗೆ ರೂ.3ರಷ್ಟು ಹೆಚ್ಚಿಸಿರುವುದನ್ನು ಖಂಡಿಸಿ ಆಮ್ ಆದ್ಮಿ ಪಾರ್ಟಿ ಕರ್ನಾಟಕದ ಬೀದರ ಜಿಲ್ಲಾ ಘಟಕ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಭಾರತದ ಪ್ರಧಾನ ಮಂತ್ರಿಗಳಿಗೆ ಅವರಿಗೆ ಜಿಲ್ಲಾಧಿಕಾರಿಗಳ ಮುಖಾಂತರ ಮನವಿ ಸಲ್ಲಿಸಿದ ಪಕ್ಷದ ಮುಖಂಡರು, ಈಗಾಗಲೇ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಸಂಕಷ್ಟದಲ್ಲಿರುವ ಬಡ ಮತ್ತು ಮಧ್ಯಮ ವರ್ಗದ ಜನರಿಗೆ ಇಂಧನ ದರ ಏರಿಕೆ ಮತ್ತೊಂದು ದೊಡ್ಡ ಹೊಡೆತವಾಗಿದೆ ಎಂದು ಆರೋಪಿಸಿದರು.

ಅಡುಗೆ ಅನಿಲದ ಬೆಲೆ ಹೆಚ್ಚಳದಿಂದ ಮನೆಮಂದಿಯ ಜೀವನ ಅಸ್ತವ್ಯಸ್ತವಾಗಿದ್ದು, ಕುಟುಂಬಗಳ ನಿರ್ವಹಣೆ ಕಷ್ಟಕರವಾಗಿದೆ. ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಹೋಟೆಲ್ ಉದ್ಯಮ ಕೂಡ ಸಂಕಷ್ಟಕ್ಕೆ ಸಿಲುಕಿದ್ದು, ಅನೇಕ ಸಣ್ಣ ವ್ಯಾಪಾರಿಗಳು ನಷ್ಟ ಅನುಭವಿಸುತ್ತಿದ್ದಾರೆ. ದಿನನಿತ್ಯದ ಖರ್ಚು ಹೆಚ್ಚಾಗಿ ಸಾಮಾನ್ಯ ಜನರು ಬದುಕು ಸಾಗಿಸುವುದೇ ಕಷ್ಟಕರವಾಗಿದೆ ಎಂದು ಪಕ್ಷದ ಮುಖಂಡರು ತಿಳಿಸಿದ್ದಾರೆ.

ಕೇಂದ್ರ ಸರ್ಕಾರವು ಜನಸಾಮಾನ್ಯರ ಸಂಕಷ್ಟವನ್ನು ಮನಗಂಡು ತಕ್ಷಣವೇ ಪೆಟ್ರೋಲ್, ಡೀಸೆಲ್ ಹಾಗೂ ಅಡುಗೆ ಅನಿಲ ದರವನ್ನು ನಿಯಂತ್ರಿಸಿ ಜನರಿಗೆ ಪರಿಹಾರ ನೀಡಬೇಕು. ಜೊತೆಗೆ ಇಂಧನದ ಮೇಲಿನ ತೆರಿಗೆ ಕಡಿತಗೊಳಿಸಿ ಬೆಲೆ ಇಳಿಕೆಗೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಈ ಸಂದರ್ಭದಲ್ಲಿ ಪಕ್ಷದ ಜಿಲ್ಲಾಧ್ಯಕ್ಷರಾದ ಸಿದ್ದು ಫೂಲಾರಿ, ಉಪಧ್ಯಕ್ಷರಾದ ರಾಜಕುಮಾರ ಎನ್. ಪಾಟೀಲ ಬಾವಗಿ, ಎಂ.ಡಿ.ಜಾವೀದ್ (ಪ್ರಧಾನ ಕಾರ್ಯದರ್ಶಿ), ವೆಂಕಟರಾವ್ ಹಿಂಡಾ, ನಂದಿ ಬಸವ ಪಾಟೀಲ, ಡಿ.ಕೆ.ಯೋಹಾನ್, ಕಾಂಟೇಪ್ಪಾ ಗುಪ್ತಾ ಹಾಗೂ ಓಂಕಾರ್ ಉಪಸ್ಥಿತರಿದ್ದರು.

## ಮೋದಿಯವರ ಮೋಸತನ ಸಂಸತ್ತಿನಲ್ಲಿ ಸೋತಿದೆ



**ಬೀದರ್:** ಕೇಂದ್ರ ಸರ್ಕಾರ ಮಹಿಳಾ ಮೀಸಲಾತಿ ವಿಚಾರದಲ್ಲಿ ಪ್ರಾಮಾಣಿಕ ಬದ್ಧತೆ ತೋರಿಸದೆ ರಾಜಕೀಯ ಲಾಭಕ್ಕಾಗಿ ಬಳಸಿಕೊಳ್ಳುತ್ತಿದೆ. ಇದರಿಂದ ಪ್ರಧಾನಿ ನರೇಂದ್ರ ಮೋದಿಯವರ ಮೋಸತನ ಸಂಸತ್ತಿನಲ್ಲಿ ಸೋತಿದೆ ಎಂದು ಕೆಪಿಸಿಸಿ ಪ್ರಚಾರ ಸಮಿತಿಯ ಉಪಾಧ್ಯಕ್ಷರಾದ ಡಾ.ಭೀಮಣ್ಣ ಮೇಟಿ ಆರೋಪಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶನಿವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂವಿಧಾನ ತಿದ್ದುಪಡಿ ಮಸೂದೆ ಸೋಲು ಮಹಿಳಾ ಮೀಸಲಾತಿಯ ಸೋಲಾಗಿರದೆ, "ರಾಜಕೀಯ ವಂಚನೆಯ ಸೋಲು" ಎಂದು ಟೀಕಿಸಿದರು. ಮಹಿಳಾ ಮೀಸಲಾತಿಯ ಹೆಸರಿನಲ್ಲಿ ಕ್ಷೇತ್ರ ಪುನರ್ವಿಂಗಡಣೆ ಹಾಗೂ ಕೇಂದ್ರಾಡಳಿತ ಪ್ರದೇಶಗಳ ಕಾನೂನು ತಿದ್ದುಪಡಿ ಮಸೂದೆಗಳನ್ನು ಸರ್ಕಾರ ಗುಪ್ತವಾಗಿ ಜೋಡಿಸಲು ಪ್ರಯತ್ನಿಸಿದೆ ಎಂದು ಆರೋಪಿಸಿದರು. 2011ರ ಜನಗಣತಿ ಆಧಾರಿತ ಕ್ಷೇತ್ರ ಪುನರ್ವಿಂಗಡಣೆ ದಕ್ಷಿಣ ರಾಜ್ಯಗಳು ಹಾಗೂ ಪಶ್ಚಿಮ ಬಂಗಾಳದಂತಹ ರಾಜ್ಯಗಳ ಪ್ರತಿನಿಧಿತ್ವಕ್ಕೆ ಹಾನಿ ಉಂಟು ಮಾಡುವ ಸಾಧ್ಯತೆ ಇದೆ ಎಂದು ಅವರು ಹೇಳಿದರು.

ಈ ಕುರಿತು ಮುಖ್ಯಮಂತ್ರಿಗಳು, ನಾಗರಿಕ ಸಮಾಜ ಸಂಸ್ಥೆಗಳು ಹಾಗೂ ಮಹಿಳಾ ಸಂಘಟನೆಗಳು ಗಂಭೀರ ಆಕ್ಷೇಪ ವ್ಯಕ್ತಪಡಿಸಿದ್ದರೂ, ಕೇಂದ್ರ ಸರ್ಕಾರ ಯಾವುದೇ ಸಮಾಲೋಚನೆ ನಡೆಸಿಲ್ಲ ಎಂದು ದೂರಿದರು. "ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ 2023ರಿಂದಲೇ ಮಹಿಳಾ ಮೀಸಲಾತಿಯನ್ನು ಕ್ಷೇತ್ರ ಪುನರ್ವಿಂಗಡಣೆಗೆ ಲಿಂಕ್ ಮಾಡದೆ ತಕ್ಷಣ ಜಾರಿಗೆ ತರಬೇಕು ಎಂಬ ನಿಲುವು ಹೊಂದಿದೆ. ಆದರೆ ಬಿಜೆಪಿ ಸರ್ಕಾರ ಮಹಿಳಾ ಮೀಸಲಾತಿಯನ್ನು ಚುನಾವಣಾ ರಾಜಕೀಯದ ಭಾಗವನ್ನಾಗಿ ಮಾಡಿದೆ" ಎಂದು ಹೇಳಿದರು. 2023ರಲ್ಲಿ ಸಂಸತ್ತಿನಲ್ಲಿ ಅಂಗೀಕೃತವಾದ ನಾರಿ ಶಕ್ತಿ ವಂದನ ಅಧಿನಿಯಮವನ್ನು ಸರ್ಕಾರವು 30 ತಿಂಗಳ ಬಳಿಕವೇ ಜಾರಿಗೆ ತಂದಿರುವುದು ಸರ್ಕಾರದ ನೈಜ ಉದ್ದೇಶವನ್ನು ಪ್ರಶ್ನಿಸುವಂತಿದೆ ಎಂದ ಅವರು, "ಇದು ಐತಿಹಾಸಿಕ ಕಾನೂನು ಎಂದಾದರೆ ಅದರ ಅನುಷ್ಠಾನಕ್ಕೆ ಎರಡೂವರೆ ವರ್ಷ ತಡ ಏಕೆ?" ಎಂದು ಪ್ರಶ್ನಿಸಿದರು. ಪ್ರಧಾನಿ ನರೇಂದ್ರ ಮೋದಿ ಹಾಗೂ ಗೃಹ ಸಚಿವ ಅಮಿತ್ ಶಾ 2023ರಲ್ಲಿ ಮಹಿಳಾ ಮೀಸಲಾತಿ ಮಸೂದೆಯನ್ನು ಐತಿಹಾಸಿಕ ಹೆಜ್ಜೆ ಎಂದು ಹೊಗಳಿದ್ದರು. ಆದರೆ ಈಗ ಅದನ್ನು ಕ್ಷೇತ್ರ ಪುನರ್ವಿಂಗಡಣೆಯೊಂದಿಗೆ ಜೋಡಿಸುವ ಮೂಲಕ ಮಹಿಳಾ ಸಬಲೀಕರಣದ ಮೂಲ ಉದ್ದೇಶವನ್ನೇ ದುರ್ಬಲಗೊಳಿಸಲಾಗಿದೆ ಎಂದು ಆರೋಪಿಸಿದರು.

# ಗುರುವಂದನಾ ಮತ್ತು ಸ್ನೇಹ ಸಮ್ಮಿಲನ ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ / ಕಂಪ್ಲಿ

ಪಟ್ಟಣದ ಹಳೆಯ ಶ್ರೀ ರಾಮಕೃಷ್ಣ ಹಿರಿಯ ಪ್ರಾಥಮಿಕಯಲ್ಲಿನ 2002– 2003 ನೇ ಸಾಲಿನ 7ನೇ ತರಗತಿ ವಿದ್ಯಾರ್ಥಿಗಳು ಭಾನುವಾರ ತಾಲೂಕಿನ ರಾಮಸಾಗರ ಸಮೀಪದ ಪಂಪ ವಿದ್ಯಾಪೀಠ ಬಳಿಯ ತುಂಗಭದ್ರಾ ರಿವರ್ ವ್ಯೂ ರೆಸಾರ್ಟ್‌ನಲ್ಲಿ ಗುರುವಂದನಾ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮ ಹಮ್ಮಿಕೊಂಡಿದ್ದರು.

ರಾಮಕೃಷ್ಣ ಹಿರಿಯ ಪ್ರಾಥಮಿಕಯ ನೆಚ್ಚಿನ ಗುರುಗಳಿಗೆ ಅದ್ದೂರಿ ಸ್ವಾಗತ ಕೋರಿದರು.

ವಿದ್ಯಾರ್ಥಿಗಳು ಶಿಕ್ಷಕರು ಈ ಅಭೂತಪೂರ್ವ ಕಾರ್ಯಕ್ರಮಕ್ಕೆ ಸಾಕ್ಷಿಯಾದರು. ಸಮಾರಂಭದ ಉದ್ದಕ್ಕೂ ಹಲವು ನೆನಪುಗಳನ್ನು ಮೆಲುಕು ಹಾಕಲಾಯಿತು.

ಹಳೇಯ ವಿದ್ಯಾರ್ಥಿಗಳು ತಮಗೆ ವಿದ್ಯೆ ಕಲಿಸಿದ ಎಲ್ಲಾ ಗುರುಗಳಿಗೆ ಸನ್ಮಾನ ಮಾಡುವ ಮೂಲಕ ಗುರುಭಕ್ತಿ ಮೆರೆದರು.

ತಮಗೆ ಅಕ್ಷರ ಕಲಿಸಿದ ಶಿಕ್ಷಕರನ್ನ ಹಲವು ವರ್ಷಗಳ ನಂತರ ಕಂಡ ವಿದ್ಯಾರ್ಥಿಗಳು ಸಂತಸ ಪಟ್ಟರು. ತಮ್ಮನ್ನು ಇನ್ನೂ ನೆನಪಿಟ್ಟು ಸನ್ಮಾನಿಸುತ್ತಿರುವ ಮಕ್ಕಳ ಪ್ರೀತಿಯನ್ನು ಕಂಡ ಶಿಕ್ಷಕರ ಕಣ್ಣಂಚಿನಲಿ ಆನಂದಭಾಷ್ಪ ಸುರಿಸಿದರು.

ದೈಹಿಕ ಶಿಕ್ಷಕ ರಮೇಶ ಮಾತನಾಡಿ ಹಳೇ ವಿದ್ಯಾರ್ಥಿಗಳು ತಮಗೆ ವಿದ್ಯೆ ಕಲಿಸಿದ ಶಿಕ್ಷಕರನ್ನು ಸ್ಮರಿಸಿ ಗುರುವಂದನೆ ಕಾರ್ಯಕ್ರಮ ಕೈಗೊಂಡಿದ್ದು ನಿಜಕ್ಕೂ ಸಂತಸ ತಂದಿದೆ. ಬಾಲ್ಯದಲ್ಲಿ ವಿದ್ಯೆ ಕಲಿಯುವಾಗ ಸಾಕಷ್ಟು ಮಕ್ಕಳಿಗೆ ಗುರುಗಳ ಶ್ರಮದ ಬಗ್ಗೆ ಅರಿವಿರುವುದಿಲ್ಲ. ಮಕ್ಕಳ ಭಾವನೆಯಲ್ಲಿ ಗುರುಗಳೆಂದರೆ ಕೇವಲ ಶಿಕ್ಷಿಸುವ ಹಾಗೂ ದೈನಂದಿನ ಪಠ್ಯ ಬೋಧಿಸುವರೆಂದೇ ಭಾವಿಸಿರುತ್ತಾರೆ. ಹತ್ತಾರು ವರ್ಷ ಕಳೆದಾಗ ಶಿಕ್ಷಕರ ಶ್ರಮ ಮತ್ತು ಮಹತ್ವ ಅರಿತು ಗೌರವಿಸುತ್ತಾರೆ ಎಂದರು.



ನಂತರ ಮಾತನಾಡಿದ ಮುಖ್ಯಗುರು ವಿ. ರಾಮಚಂದ್ರರಾವ ಉದ್ಯೋಗ ಇನ್ನಿತರೆ ಕಾರಣಗಳಿಗಾಗಿ ಹುಟ್ಟಿದ ಊರು ಬಿಟ್ಟು ಬೇರೆಲ್ಲೋ ನೆಲೆಸಿದವರು ತಮ್ಮ ದಿನನಿತ್ಯದ ಒತ್ತಡ ಜೀವನದಲ್ಲಿ ಹುಟ್ಟಿದ ಊರು, ಹೆತ್ತವರು, ಅಕ್ಷರ ಕಲಿಸಿದ ಗುರುಗಳನ್ನು ನೆನೆಸಿಕೊಳ್ಳಲಾಗದ ಸ್ಥಿತಿಗೆ ಇಂದಿನ ಜನ ತಲುಪಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ಹಿರಿಯ ವಿದ್ಯಾರ್ಥಿಗಳೆಲ್ಲರನ್ನೂ ಒಟ್ಟುಗೂಡಿಸುವ, ತಮ್ಮ ಹಳೆಯ ದಿನಗಳನ್ನು ಮೆಲಕು ಹಾಕುವಂತಹ ಸುಂದರ ಕ್ಷಣಗಳಿಗೆ ಸಾಕ್ಷಿಯಾದ ಇಂತಹ ಕಾರ್ಯಕ್ರಮ ಇಂದಿನ ದಿನಗಳಲ್ಲಿ ಅಗತ್ಯವಿದೆ. ಆ ಮೂಲಕ ಬಾಲ್ಯದ ನೆನಪುಗಳನ್ನು ಮತ್ತೆ ಪಡೆಯಬಹುದು ಎಂದು ಅಭಿಪ್ರಾಯಪಟ್ಟರು. ಆ ನಂತರ ಎಲ್ಲಾ ಶಿಕ್ಷಕರು ತಮ್ಮ ತಮ್ಮ ಅಭಿಪ್ರಾಯವನ್ನು ಹಂಚಿಕೊಂಡರು.

ಹಳೆ ವಿದ್ಯಾರ್ಥಿಗಳು ತಮ್ಮ ಅನಿಸಿಕೆಗಳನ್ನು ಮೆಲಕು ಹಾಕಿ ಆನಂದಭಾಷ್ಪ ಗೈದು ಮಾತನಾಡಿ ನಾವು ಗಳಿಸಿದ ಆಸ್ತಿ, ಅಂತಸ್ತು, ಸಂಪತ್ತು ಯಾವುದೂ ಕೊನೆಯವರೆಗೂ ಉಳಿಯೊಲ್ಲ. ಆದರೆ ಕಲಿತ ವಿದ್ಯೆ ಮಾತ್ರ ಕೊನೆಯವರೆಗೂ ಜೊತೆಗಿರುತ್ತದೆ ಬೆಳೆಯುವ ಸಿರಿ ಮೊಳಕೆಯಲ್ಲಿ ಎನ್ನುವಂತೆ ಬಾಲ್ಯದಲ್ಲಿ ನೀವು ನೀಡಿದ ನಿಸ್ವಾರ್ಥ ಶಿಕ್ಷಣದ ಪರಿಣಾಮ ನಾವುಗಳು ನಮ್ಮ ಜೀವನದಲ್ಲಿ ಯಶಸ್ಸು ಗಳಿಸಲು ಸಾಧ್ಯವಾಯಿತು. ಎಂದು ಗುರುಗಳ ಸೇವೆಯನ್ನು ಮುಕ್ತಕಂಠದಿಂದ ಹೊಗಳಿದರು.

ಈ ಸಂದರ್ಭದಲ್ಲಿ ಶಿಕ್ಷಕರಾದ ವಿ.ರಾಮಚಂದ್ರರಾವ್, ಕೆ. ರಮೇಶ, ಪದ್ಮ, ಜಯಲಕ್ಷ್ಮಿ, ಶಾಂತಾ ಇವರನ್ನು ಅದ್ದೂರಿಯಾಗಿ ಸನ್ಮಾನಿಸಿ ಗೌರವಿಸಲಾಯಿತು. ಇನ್ನೂ ಊಟವಂತೂ ತಿಂದಷ್ಟು ಮತ್ತೆ ಮತ್ತೆ ರುಚಿಯಾಗಿತ್ತು. ಉಸ್ತುವಾರಿ ವಹಿಸಿದ್ದ ಗೆಳೆಯರನ್ನು ಹೊಗಳಿದ್ದೇ ಹೊಗಳಿದ್ದು. ಒಂದೆಡೆ ಸೇರಿದ ಸ್ನೇಹಿತರೆಲ್ಲರೂ ಸಕ್ಕತ್ ಹಾಡುಗಳಿಗೆ ಸ್ಟೆಪ್ ಹಾಕಿದ್ರೆ ಇನ್ನು ಕೆಲವು ಕುಚುಕುಗಳು ಇಡೀ ದಿನ ಸಮಯ ಕಳೆದಿದ್ದೆ ಗೊತ್ತಾಗಲಿಲ್ಲ ಎಂದು ಗೊಣಗುತ್ತ ಸಮಾರಂಭದ ನಂತರ ಹಳೇಯ ನೆನುಪುಗಳೊಂದಿಗೆ ಹಿಂತಿರುಗಿದರು. ಈ ಸಂದರ್ಭದಲ್ಲಿ. 2002– 03 ನೇ ಸಾಲಿನ 7ನೇ ತರಗತಿ ವಿದ್ಯಾರ್ಥಿಗಳಾದ ಕೆ. ಶ್ವೇತಾ, ಜೆ. ಬಿ. ವಿನಾಯಕ, ನವೀನ್, ಧನಪಾಲ್ ಕಿರಣ್, ಸಾಗರ್, ಎನ್. ಮಂಜುನಾಥ, ದೀಪಾಶ್ರೀ, ದೀಪಾ ಕೆ. ಎಂ. ಜಿ. ರೇಖಾ, ಯು. ವನಜಾಕ್ಷಿ, ಕೆ. ತುಳುಸಿ, ವೀರನಗೌಡ, ಎನ್. ಪ್ರೀತಿ, ಸಂತೋಷ, ಈ. ನಾಗರಾಜ, ಶ್ರುತಿ, ಈಶ್ವರಿ, ಸಿ. ಕೆ. ಮಂಜುನಾಥ, ಸಂದೀಪ್ ಬಿ., ಲಿಂಗರಾಜ್, ವಿನಾಯಕ, ಬಿ. ವೆಂಕಟೇಶ, ಎಸ್. ಉಮೇಶ, ರೇಖಾ ಎಂ. ರಘು, ಮಂಜು ಎಂ ಸೇರಿದಂತೆ ಇತರರು ಪಾಲ್ಗೊಂಡಿದ್ದರು.

# ಕೆಂಭಾವಿಯಲ್ಲಿ ಆಲಿಕಲ್ಲು ಮಳೆ: ವಾತಾವರಣ ತಂಪು, ಬಿರುಗಾಳಿಗೆ ನಷ್ಟ



### ಕಡಿತಗೊಂಡ ವಿದ್ಯುತ್ ಸಂಪರ್ಕ; ಜನ ಜೀವನ ಅಸ್ತವ್ಯಸ್ತ

**ರವಿವಾರ ಸಂಜೆ ಬೀಸಿದ ಭೀಕರ ಬಿರುಗಾಳಿಗೆ ವಲಯದ ಹಲವೆಡೆ ಮರಗಳು ಹಾಗೂ ಹಲವು ವಿದ್ಯುತ್ ಕಂಬಗಳು ನೆಲಕ್ಕುರುಳಿವೆ. ಇದರಿಂದಾಗಿ ಪಟ್ಟಣದಾದ್ಯಂತ ಸಂಚಾರ, ವಿದ್ಯುತ್ ಸಂಪರ್ಕ ಸಂಪೂರ್ಣ ಅಸ್ತವ್ಯಸ್ತಗೊಂಡಿದೆ. ಗಾಳಿಯ ತೀವ್ರತೆಗೆ ಮರಗಳು ಮುರಿದು ಬಿದ್ದ ತಕ್ಷಣವೇ ಮುನ್ನೆಚ್ಚರಿಕಾ ಕ್ರಮವಾಗಿ ವಿದ್ಯುತ್ ಸರಬರಾಜು ಸ್ಥಗಿತಗೊಳಿಸಿದ್ದು ಇದೀಗ ಜೆಸ್ಕಾಮ್ ಸಿಬ್ಬಂದಿ ಹಾಗೂ ಸ್ಥಳೀಯ ಆಡಳಿತ ತಕ್ಷಣ ಕಾರ್ಯಪ್ರವೃತ್ತರಾಗಿ, ಮರಗಳನ್ನು ತೆರವುಗೊಳಿಸಲು ಮತ್ತು ವಿದ್ಯುತ್ ಸಂಪರ್ಕವನ್ನು ಮರುಸ್ಥಾಪಿಸಲು ಶ್ರಮಿಸುತ್ತಿದ್ದಾರೆ.**

• ಮಲ್ಲಮ್ಮ ನುಡಿ ವಾರ್ತೆ ಕೆಂಭಾವಿ

ಕಳೆದ ಕೆಲವು ದಿನಗಳಿಂದ ವಿಪರೀತ ಬಿಸಿಲಿನ ಬೇಗೆಯಿಂದ ಬೆಂದು ಹೋಗಿದ್ದ ಪಟ್ಟಣದ ಜನತೆಗೆ ವರುಣದೇವ ಕೊನೆಗೂ ತಂಪೆರೆದಿದ್ದಾನೆ. ರವಿವಾರ ಸಂಜೆ ದಿಢೀರನೆ ಆಕಾಶದಲ್ಲಿ ಮೋಡ ಕವಿದು, ಗುಡುಗು, ಸಿಡಿಲು ಹಾಗೂ ಆಲಿಕಲ್ಲು ಸಮೇತ ಭಾರಿ ಮಳೆ ಸುರಿಯಿತು. ಬಿಸಿಲಿನ ಧಗೆಯಿಂದ ಕಂಗಾಲಾಗಿದ್ದ ಜನರಿಗೆ ಈ ಮಳೆ ತಂಪು ನೀಡಿದೆ–ಯಾದರೂ, ಮಳೆಯ ಜೊತೆಗೂಡಿದ ಬಿರುಗಾಳಿಯ ಆರ್ಭಟ ಸಾರ್ವಜನಿಕರಲ್ಲಿ ತೀವ್ರ ಆತಂಕ ಸೃಷ್ಟಿಸಿತ್ತು.

ಗಾಳಿಯ ವೇಗಕ್ಕೆ ಪಟ್ಟಣದ ಕೆಲವೆಡೆ ರಸ್ತೆ ಬದಿಯ ನಾಮಫಲಕಗಳು ಹಾಗೂ ಅಂಗಡಿಗಳ ಮುಂಭಾಗದ ಶೆಡ್‌ಗಳು ಹಾರಿಹೋಗಿವೆ. ಅಲ್ಲದೆ, ಮರಗಳು ಹಾಗೂ ವಿದ್ಯುತ್ ಕಂಬಗಳು ಧರೆಗುರುಳಿದ್ದರಿಂದ ಪಟ್ಟಣದಲ್ಲಿ ವಿದ್ಯುತ್ ಸಂಪರ್ಕ ಸಂಪೂರ್ಣ ಕಡಿತಗೊಂಡಿದೆ.

ಧಿಡೀರ್ ಗಾಳಿ–ಮಳೆಯ ಆರ್ಭಟಕ್ಕೆ ಸಿಲುಕಿದ ವಾಹನಸವಾರರು ಹಾಗೂ ಪಾದಚಾರಿಗಳು ಆಶ್ರಯಕ್ಕಾಗಿ ಪರದಾಡುವಂತಾಯಿತು. ಸದ್ಯ ವಾತಾವರಣ ಸಂಪೂರ್ಣ ತಂಪಾಗಿದ್ದು, ರೈತರು ಮತ್ತು ಸಾರ್ವಜನಿಕರು ಬಿಸಿಲಿನ ಬೇಗೆಯಿಂದ ಮುಕ್ತಿ ಸಿಕ್ಕಿದ್ದಕ್ಕೆ ನಿಟ್ಟುಸಿರು ಬಿಡುವಂತಾಗಿದೆ.

ಮುಂದಿನ ದಿನಗಳಲ್ಲೂ ಇದೇ ರೀತಿಯ ವಾತಾವರಣ ಮುಂದುವರಿಯುವ ಸಾಧ್ಯತೆ ಇರುವುದರಿಂದ, ಬಿರುಗಾಳಿ ಬೀಸುವಾಗ ಸಾರ್ವಜನಿಕರು ಮರಗಳ ಕೆಳಗೆ ಅಥವಾ ಹಳೆಯ ಕಟ್ಟಡಗಳ ಬಳಿ ನಿಲ್ಲದೆ ಸುರಕ್ಷಿತ ಸ್ಥಳಗಳಲ್ಲಿ ಆಶ್ರಯ ಪಡೆಯಬೇಕೆಂದು ಸ್ಥಳೀಯ ಆಡಳಿತ ಮನವಿ ಮಾಡಿದೆ.

# ಮುಂಗಡ ಬುಕ್ಕಿಂಗ್ ಪಡೆದು ಪರಾರಿ: ವಂಚನೆ ಆರೋಪ

• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ಪಟ್ಟಣದ ರಾಮನಗರ ಬಡಾವಣೆಯ ಗೃಹೋಪಯೋಗಿ ವಸ್ತುಗಳ ಅಂಗಡಿ ನಡೆಸುತ್ತಿದ್ದ ತಮಿಳುನಾಡು ಮೂಲದ ವ್ಯಕ್ತಿಯೊಬ್ಬರು ಮುಂಗಡ ಹಣ ಪಡೆದು ಗ್ರಾಹಕರಿಗೆ ವಸ್ತುಗಳನ್ನು ನೀಡದೇ ಪರಾರಿಯಾಗಿರುವ ಪ್ರಕರಣ ತಡವಾಗಿ ಬೆಳಕಿಗೆ ಬಂದಿದೆ. ಈ ಘಟನೆಗೆ ಸಂಬಂಧಿಸಿದಂತೆ ಹಲವರು ಮೋಸ ಹೋಗಿದ್ದು, ಒಟ್ಟಾಗಿ ಪೊಲೀಸರಿಗೆ ದೂರು ಸಲ್ಲಿಸಲು ಸಿದ್ಧತೆ ನಡೆಸಿದ್ದಾರೆ.




ಅಂಗಡಿಯಲ್ಲಿ ಫ್ರಿಡ್ಜ್, ಟಿವಿ, ಸೋಫಾ, ಟೇಬಲ್, ಕುಕ್ಕರ್, ಫ್ಯಾನ್ ಸೇರಿದಂತೆ ವಿವಿಧ ಗೃಹೋಪಯೋಗಿ ವಸ್ತುಗಳನ್ನು ಕಡಿಮೆ ದರದಲ್ಲಿ ನೀಡುವುದಾಗಿ ಹೇಳಿ ಗ್ರಾಹಕರಿಂದ ಮುಂಗಡ ಬುಕ್ಕಿಂಗ್ ಹಣ ಸಂಗ್ರಹಿಸಲಾಗಿತ್ತು. ನಿಗದಿತ ದಿನಾಂಕದಲ್ಲಿ ವಸ್ತುಗಳನ್ನು ವಿತರಿಸಲಾಗುವುದು ಎಂದು ಭರವಸೆ ನೀಡಲಾಗಿದ್ದರೂ, ಕಳೆದ ಕೆಲವು ದಿನಗಳಿಂದ ಅಂಗಡಿ ಬಾಗಿಲು ಮುಚ್ಚಿರುವುದು ಗ್ರಾಹಕರ ಅನುಮಾನಕ್ಕೆ ಕಾರಣವಾಗಿದೆ.

ಮಾಹಿತಿಯ ಪ್ರಕಾರ, ಅಂಗಡಿ ಮಾಲೀಕರು ಮೇ 11ರ ರಾತ್ರಿ ಅಂಗಡಿ ಖಾಲಿ ಮಾಡಿಕೊಂಡು ತೆರಳಿರುವ ಶಂಕೆ ವ್ಯಕ್ತವಾಗಿದೆ. ಆರಂಭದಲ್ಲಿ "ಒಂದು–ಎರಡು ದಿನಗಳಲ್ಲಿ ಮರಳಿ ಬರುತ್ತಾರೆ" ಎಂಬ ನಿರೀಕ್ಷೆಯಲ್ಲಿ ಗ್ರಾಹಕರು ಕಾಯುತ್ತಿದ್ದರು. ಆದರೆ ಯಾವುದೇ ಮಾಹಿತಿ ಲಭ್ಯವಾಗದ ಹಿನ್ನೆಲೆಯಲ್ಲಿ ಇಂದು ಹಲವರು ಅಂಗಡಿ ಎದುರು ಸೇರಿ ತಾವು ಮೋಸ ಹೋಗಿರುವ ಬಗ್ಗೆ ಆಕ್ರೋಶ ವ್ಯಕ್ತಪಡಿಸಿದರು.

ಒಬ್ಬೊಬ್ಬರಿಂದ 3ಸಾವಿರದಿಂದ 70ಸಾವಿರದವರೆಗೆ ಹಣ ಪಡೆಯಲಾಗಿದ್ದು, ಒಟ್ಟು 20 ರಿಂದ 25 ಲಕ್ಷಕ್ಕೂ ಅಧಿಕ ಮೊತ್ತ ಸಂಗ್ರಹಿಸಿರುವ ಸಾಧ್ಯತೆ ಇದೆ ಎಂದು ಹೇಳಲಾಗಿದೆ.

ತಮಿಳುನಾಡು ಮೂಲದ 56 ವರ್ಷದ ಬಾಲಕೃಷ್ಣನ್ ರಾಮನಾಥನ್ ಎಂಬುವವರು ಮಂಜು ಹೋಮ್ ಆಪ್ಲ್ಯಯನ್ಸ್ ಮಾಲೀಕರಾಗಿದ್ದಾರೆ ಎಂದು ತಿಳಿದುಬಂದಿದೆ. ಈ ಸಂಬಂಧ ಇನ್ನೂ ಗುರುಮಠಕಲ್ ಪೊಲೀಸ್ ಠಾಣೆಯಲ್ಲಿ ಅಂಗಡಿ ಮಾಲೀಕರಾದ ಆನಂದ್ ಬೋಯಿನ್ ಅಧಿಕೃತವಾಗಿ ಪ್ರಕರಣ ದಾಖಸಿದ್ದಾರೆ. ಆದರೆ ಮೋಸಕ್ಕೊಳಗಾದ ಗ್ರಾಹಕರು ಸಮೂಹವಾಗಿ ದೂರು ನೀಡಲು ಮುಂದಾಗಿದ್ದಾರೆ.

# ರೈತರನ್ನು ಉತ್ತೇಜಿಸಲು ಮಾವು ನಿಗಮ ಸ್ಥಾಪನೆ ಅವಶ್ಯ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ನವನಗರದ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಉದ್ಯಾನಗಿರಿಯಲ್ಲಿ ಮೂರು ದಿನಗಳ ಕಾಲ ಹಮ್ಮಿಕೊಂಡಿರುವ ಮಾವು ಮೇಳಕ್ಕೆ ವಿಧಾನ ಪರಿಷತ್ ಶಾಸಕ ಹನಮಂತ ನಿರಾಣಿ ಶನಿವಾರ ಚಾಲನೆ ನೀಡಿದರು.

ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ತೋಟಗಾರಿಕೆ ಇಲಾಖೆ, ಸಿಬಿಬಿಓ ಜೇನು ರೈತ ಉತ್ಪಾದಕರ ಸಂಘ, ಭಾರತೀಯ ತೋಟಗಾರಿಕೆ ಸಂಶೋಧನಾ ಸಂಸ್ಥೆ ಹಾಗೂ ಡಾ.ದಂಡಿನ ಶಿಕ್ಷಣ ಮತ್ತು ಸಂಶೋಧನೆ ಪ್ರತಿಷ್ಠಾನದ ಸಹಯೋಗದಲ್ಲಿ ಹಮ್ಮಿಕೊಂಡ ಮಾವು ಮೇಳಕ್ಕೆ ಚಾಲನೆ ನೀಡಿ, ವಿವಿಧ ಮಾವು ತಳಿಗಳನ್ನು ವೀಕ್ಷಣೆ ಮಾಡಿ ನಂತರ ಅವರು ಮಾತನಾಡಿದರು.

ಮಾವು ಬೆಳೆಗಾರರಿಗೆ ಉತ್ತೇಜನ ನೀಡುವುದು ಹಾಗೂ ಗುಣಮಟ್ಟದ ಹಣ್ಣುಗಳನ್ನು ನೇರವಾಗಿ ಗ್ರಾಹಕರಿಗೆ ತಲುಪಿಸುವ ಉದ್ದೇಶದಿಂದ ಮಾವು ಮೇಳವನ್ನು ಆಯೋಜನೆ ಮಾಡಲಾಗಿದೆ. ಉತ್ತರ ಕರ್ನಾಟಕ ಭಾಗದಲ್ಲಿ ಮಾವು ಬೆಳೆಗೆ ಉತ್ತಮ ಅವಕಾಶಗಳಿದ್ದು, ರೈತರು ಆಧುನಿಕ ತಂತ್ರಜ್ಞಾನ ಅಳವಡಿಸಿಕೊಂಡು ಗುಣಮಟ್ಟದ ಉತ್ಪಾದನೆಗೆ ಹೆಚ್ಚು ಒತ್ತು ನೀಡಬೇಕಿದೆ ಎಂದ ನಿರಾಣಿ, ಈ ನಿಟ್ಟಿನಲ್ಲಿ ತೋತಗಾರಿಕೆ ವಿವಿಯು ಮುಂದಿನ ದಿನಮಾನಗಳಲ್ಲಿ ಮಾವು ನಿಗಮವನ್ನು ಸ್ಥಾಪಿಸುವ ಕೆಲಸ ಮಾಡಬೇಕಿದೆ ಎಂದು ಹೇಳಿದರು.

ವಿಶ್ವವಿದ್ಯಾಲಯದಲ್ಲಿ ಮಾವಿನ ತಳಿಗಳ ತಂತ್ರಜ್ಞಾವನ್ನು ತ್ವರಿತವಾಗಿ ಮಾಡಲಾಗುತ್ತಿದೆ. ವಿವಿಧ ತಳಿಗಳನ್ನು ಪರಿಚಯಿಸುವ ನಿಟ್ಟಿನಲ್ಲಿ ಈ ಮೇಳವನ್ನು ಆಯೋಜನೆ ಮಾಡಿದೆ. ಇದರ ಜೊತೆಗೆ ಚಿಕ್ಕಾಲಗುಂಡಿಯಲ್ಲಿ ರೈತರು ಬೆಳೆದ ಮಾವಿನ ತಳಿಯನ್ನು ಪರಿಚಯಿಸುವ ಕೆಲಸವಾಗಬೇಕು ಎಂದು ಹೇಳಿದ ಅವರು, ಭಾರತ ದೇಶ ಸೇರಿದಂತೆ ಇಂದು 84 ದೇಶಗಳಲ್ಲಿ ಮಾವು ಬೆಳೆಯುತ್ತಿದ್ದಾರೆ. ಬೆಳೆದಿರುವ ಮಾವನ್ನು ಕಾರ್ಬನ್ ಮುಕ್ತವಾಗಿ ಮಾಡುವ ವ್ಯವಸ್ಥೆಯಿಂದ 500 ವಿಧದ ತಳಿಗಳು ಬಂದಿವೆ. 22 ಮಾವು ಬೆಳೆಯ ಹೊಸ ತಳಿಗಳನ್ನು ಕಂಡುಹಿಡಿದ್ದಾರೆ. ಅವುಗಳು ಯಶಸ್ವಿಯಾಗಿವೆ. ಹೆಚ್ಚು ಹೆಚ್ಚು ಮಾವು ಬೆಳೆಯಲು ಉತ್ತರ ಕರ್ನಾಟಕದ ರೈತರು ಮುಂದೆ ಬರಬೇಕು. ತೋತಗಾರಿಕೆ ವಿವಿಯ ಮೂಲಕ ಮಾವು ಸಂಶೋಧನಾ ಕೇಂದ್ರ ಸ್ಥಾಪನೆಗೆ ಸರಕಾರದ ಮಟ್ಟದಲ್ಲಿ ಚರ್ಚಿಸಲಾಗುವುದು. ಈ ಮೂರು ದಿನಗಳ ಕಾಲ ನಡೆಯುವ ಮಾವು ಮೇಳಕ್ಕೆ ಆಗಮಿಸಿ ರೈತರು ಬೆಳೆದ ಮಾವನ್ನು ಖರಿದೀಸಲು ಜನ ಮುಂದಾಗಬೇಕು ಎಂದರು.



**ಮಾವು ನಮ್ಮ ದೇಶದ ಹಣ್ಣುಗಳ ರಾಜ ಹಾಗೂ ವಾಣಿಜ್ಯ ಬೆಳೆಯಾಗಿದ್ದು, 1500ಕ್ಕೂ ಹೆಚ್ಚಿನ ತಳಿಗಳು ನಮ್ಮ ಭಾರತ ದೇಶದಲ್ಲಿವೆ. ವೈವಿದ್ಯಮಯ ಮಾವು ತಳಿಗಳನ್ನು ಪರಿಚಯಿಸುವ ಉದ್ದೇಶದಿಂದ ಮಾವು ಮೇಳ ಸಂಘಟಿಸಲಾಗಿದೆ. ನಮ್ಮ ಪೂರ್ವಿಕರು ಅನೇಕ ತಳಿಗಳನ್ನು ಬೆಳೆದಿದ್ದು, ಅವು ಇಂದು ಕಣ್ಮರೆಯಾಗುವ ಹಂತದಲ್ಲಿವೆ. ಅವುಗಳನ್ನು ಸಹ ಈ ಮೇಳದಲ್ಲಿ ಪರಿಚಯಿಸುವ ಕೆಲಸ ಮಾಡಲಾಗುತ್ತಿದೆ.**

**–ಡಾ.ವಸಂತ ಗಾಣಿಗೇರ, ತೋಟಗಾರಿಕೆ ವಿವಿ ವಿಸ್ತರಣಾ ನಿರ್ದೇಶಕ**

ಕಾರ್ಯಕ್ರಮದಲ್ಲಿ ತೋಟಗಾರಿಕೆ ವಿವಿಯ ಕುಲಪತಿ ಡಾ.ತಮ್ಮಯ್ಯ, ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕ ರವೀಂದ್ರ ಹಕಾಟೆ, ಕಲಾದಗಿ ಹಣ್ಣು ಬೆಳೆಗಾರರ ಸಂಘದ ಅಧ್ಯಕ್ಷ ಕೆ.ಟಿ.ಪಾಟೀಲ, ತೋತಗಾರಿಕೆ ವಿವಿಯ ವಿಸ್ತರಣಾ ನಿರ್ದೇಶಕ ಡಾ.ವೆಂಕಟೇಶಲು, ಪ್ರಗತಿಪರ ರೈತ ಮೋಹನ ದೇಸಾಯಿ, ಹಣ್ಣು ಬೆಳೆಗಾರರ ಸಂಘದ ಮಾಜಿ ಅಧ್ಯಕ್ಷ ಪಿ.ಎಂ.ದೇಸಾಯಿ, ತೋತಗಾರಿಕೆ ವಿವಿಯ ಸಹ ಸಂಶೋಧನಾ ಮತ್ತು ವಿಸ್ತರಣಾ ನಿರ್ದೇಶಕ ಡಾ.ವಸಂತ ಗಾಣಿಗೇರ ಸೇರಿದಂತೆ ಇತರರು ಉಪಸ್ಥಿತರಿದ್ದರು. ಮಾವು ಮೇಳದಲ್ಲಿ 100ಕ್ಕೂ ಹೆಚ್ಚು ವಿವಿಧ ತಳಿಯ ಮಾವುಗಳನ್ನು ಪ್ರದರ್ಶನಕ್ಕೆ ಇಡಲಾಗಿದೆ. ರತ್ನಗಿರಿ, ದೇವಗಡ, ಧಾರವಾಡ ಅಪೂಸ್, ಮಲ್ಲಿಕಾ, ಆರ್ಕಾ ನೀಲಕಿರಣ, ಆರ್ಕಾ ಉದಯ, ಅಮ್ರಪಲ್ಲಿ, ಸಿಂಧು, ನೀಲಮ್, ರತ್ನಾ, ದಾಶೇಕರಿ, ಟಾಮ್ಮಿ ಆಟಕಿನ್ಸ್, ಖದರ್, ಪೈರಿ, ತೋತಾಪುರಿ, ಸುಂದರಶಾ ಸೇರಿದಂತೆ ಇತರೆ ತಳಿಗಳನ್ನು ಪ್ರದರ್ಶನಕ್ಕೆ ಇಡಲಾಗಿದೆ. ಅಲ್ಲದೇ ಮಾವಿನಿಂದ ತಯಾರಿಸಲಾದ ಮೌಲ್ಯವರ್ಧಿತ ಉತ್ಪನ್ನಗಳಾದ ಮಾವಿನ ಜ್ಯಾಂ, ಜ್ಯೂಸ್, ಉಪ್ಪಿನಕಾಯಿ, ಫಲ್ಫ್, ಒಣಮಾವು ಸೇರಿದಂತೆ ವಿವಿಧ ಉತ್ಪನ್ನಗಳ ಪ್ರದರ್ಶನ ಏರ್ಪಡಿಸಲಾಗಿದೆ.

# ಕುದುರೆಮುಖ ಅರಣ್ಯದಿಂದ 5 ಕುಟುಂಬಗಳ ಸ್ಥಳಾಂತರ: ಖಂಡ್ರೆ

• **ಮಲ್ಲಮ್ಮ ನುಡಿ ವಾರ್ತೆ ಮಂಗಳೂರು**

ಕುದುರೆಮುಖ ಸೇರಿದಂತೆ ರಾಜ್ಯದ ಅರಣ್ಯದೊಳಗಿರುವ ವಸತಿ ಪ್ರದೇಶಗಳ ಸ್ಥಳಾಂತರಕ್ಕೆ ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ.

ಮಂಗಳೂರಿನಲ್ಲಿಂದು ನಡೆದ ಗೇರುಮೇಳದಲ್ಲಿ, ಕೆಲವು ತಿಂಗಳ ಹಿಂದೆ ಆನೆ ದಾಳಿಗೆ ಇಬ್ಬರು ಮೃತಪಟ್ಟಿದ್ದ, ಕೆರೆಕಟ್ಟೆ ಪ್ರದೇಶ ಸೇರಿದಂತೆ ಕುದುರೆಮುಖ ಅರಣ್ಯದಿಂದ ಸ್ವಯಂ ಪ್ರೇರಿತರಾಗಿ ಹೊರಬರಲು ಅರ್ಜಿ ಸಲ್ಲಿಸಿದ್ದ 5 ಕುಟುಂಬಗಳಿಗೆ 2.38 ಕೋಟಿ ರೂ.ಚೆಕ್ ವಿತರಿಸಿ ಅವರು ಮಾತನಾಡಿದರು.

ಇಬ್ಬರ ಮೇಲೆ ಕಾಡಾನೆ ದಾಳಿ ಮಾಡಿದಾಗ, ಪುಂಡಾನೆಯನ್ನು ಸೆರೆ ಹಿಡಿಯಲು ಸೂಚನೆ ನೀಡಲಾಗಿತ್ತು. ಆನೆ ಸೆರೆ ಮಾತ್ರವೇ ಪರಿಹಾರ ಆಗುವುದಿಲ್ಲ. ಹೀಗಾಗಿ ಅರಣ್ಯದೊಳಗಿನ ಜನರ ಸ್ಥಳಾಂತರದ ಮೂಲಕ ಅರಣ್ಯ ಪ್ರದೇಶ ವಿಸ್ತರಣೆ, ಸಂರಕ್ಷಣೆ ಮಾಡಲು ಸರ್ಕಾರ ಕ್ರಮ ವಹಿಸಿದೆ ಎಂದರು

ಕುದುರೆಮುಖ ಅರಣ್ಯದೊಳಗೆ 1300 ಪರಿವಾರಗಳಿದ್ದವು, 350 ಕುಟುಂಬಗಳಿಗೆ ಪರಿಹಾರ ನೀಡಿದೆ ಸ್ಥಳಾಂತರಿಸಲಾಗಿದೆ. ಇನ್ನೂ 300 ಕುಟುಂಬಗಳು ಸ್ವಯಂ ಇಚ್ಛೆಯಿಂದ ಸ್ಥಳಾಂತರಗೊಳ್ಳಲು ಅರ್ಜಿ ಸಲ್ಲಿಸಿದ್ದು, ಹಂತ ಹಂತವಾಗಿ ಪುನರ್ವಸತಿ ಯೋಜನೆ ಜಾರಿಗೆ ತರಲಾಗುವುದು ಎಂದರು.



**ಆನೆ ದಾಳಿಯಿಂದ ಮೃತಪಟ್ಟ ಕುಟುಂಬಕ್ಕೆ ಹೊರಗುತ್ತಿಗೆ ಕೆಲಸ:** ಪ್ರತಿಯೊಂದು ಜೀವವೂ ಅಮೂಲ್ಯ. ಹೋದ ಜೀವ ಮರಳಿ ತರಲು ಸಾಧ್ಯವಿಲ್ಲ. ಆದರೆ ಅವರನ್ನು ಆಶ್ರಯಿಸಿದ್ದ ಕುಟುಂಬಗಳಿಗೆ ಆಸರೆಯಾಗಲು ಸರ್ಕಾರ ವನ್ಯಜೀವಿ ದಾಳಿಯಿಂದ ಮೃತಪಟ್ಟ ಕುಟುಂಬಗಳಿಗೆ 20 ಲಕ್ಷ ರೂಪಾಯಿ ಪರಿಹಾರ ನೀಡಲಾಗಿದೆ ಎಂದು ತಿಳಿಸಿದರು.

ಈ ಘಟನೆ ನಡೆದ ಬಳಿಕ ಬಹಳ ವರ್ಷದಿಂದ ಅರ್ಜಿ ಹಾಕಿ ಕಾಯುತ್ತಿದ್ದ ಅರಣ್ಯದೊಳಗಿನ ವಸತಿ ಪ್ರದೇಶಗಳ ಸ್ಥಳಾಂತರ ಯೋಜನೆಯನ್ನು ಆರ್ಥಿಕ ಲಭ್ಯತೆಯ ಇತಿಮಿತಿಯಲ್ಲಿ ಪುನಾರಂಭಿಸಲು ನಿರ್ಧರಿಸಲಾಗಿದ್ದು. ಈ ಬಗ್ಗೆ ನಾನು ಅಧಿಕಾರಿಗಳಿಗೆ ಸೂಚನೆ ನೀಡಿ ಕೂಡಲೇ ಸ್ವಯಂ ಇಚ್ಛೆಯಿಂದ ಕಾಡಿನಿಂದ ಹೊರಗೆ ಬರಲು ಅರ್ಜಿ ಸಲ್ಲಿಸಿರುವ ಕುಟುಂಬಗಳನ್ನು ಗುರುತಿಸಿ ಸ್ಥಳಾಂತರಿಸಲು ಸೂಚಿಸಿದ್ದೆ, ಇಂದು 5 ಕುಟುಂಬಕ್ಕೆ ಚೆಕ್ ನೀಡಲಾಗಿದೆ. ಜೊತೆಗೆ 20 ಕೋಟಿ ರೂಪಾಯಿಗಳನ್ನು ಪುನರ್ವಸತಿ ಯೋಜನೆಗೆ ಹೆಚ್ಚುವರಿಯಾಗಿ ಹಂಚಿಕೆ ಮಾಡಲಾಗಿದೆ ಎಂದು ತಿಳಿಸಿದರು.

ಕೆರೆಕಟ್ಟೆಯ ಮುಡಬಿಯಲ್ಲಿ ನಡೆದ ದುರ್ಘಟನೆಯಲ್ಲಿ ಮೃತಪಟ್ಟವರ ಕುಟುಂಬದ ಸ್ಥಿತಿಯನ್ನು ಪರಿಗಣಿಸಿ. ಮಾನವೀಯ ನೆಲೆಗಟ್ಟಿನಲ್ಲಿ ಆ ಕುಟುಂಬದ ಇಬ್ಬರಿಗೆ ಹೊರಗುತ್ತಿಗೆ ಆಧಾರದಲ್ಲಿ ಅರಣ್ಯ ಇಲಾಖೆಯಲ್ಲಿ ಉದ್ಯೋಗವನ್ನೂ ನೀಡಲಾಗಿದೆ ಎಂದು ಈಶ್ವರ ಖಂಡ್ರೆ ತಿಳಿಸಿದರು.

ವನ ಪ್ರದೇಶ ಇರುವ ಜಿಲ್ಲೆಗಳಲ್ಲಿ ಮಾನವ–ಆನೆ ಸಂಘರ್ಷ ಹೆಚ್ಚಾಗಿದೆ. ಮಂಗಳೂರು ಭಾಗದಲ್ಲೂ ಈ ಸಮಸ್ಯೆ ಇದೆ. ತಾವು ಸಚಿವರಾದ ಬಳಿಕ ದಕ್ಷಿಣ ಕನ್ನಡ ಜಿಲ್ಲೆಗೆ ಸಮರ್ಪಿತ ಆನೆ ಕಾರ್ಯಪಡೆ ಮಂಜೂರು ಮಾಡಲಾಗಿದ್ದು, 25 ಸಿಬ್ಬಂದಿಗೆ ತರಬೇತಿ ನೀಡಲಾಗಿದೆ. ರೈಲ್ವೆ ಬ್ಯಾರಿಕೇಡ್ ಅಳವಡಿಸುತ್ತಿದ್ದೇವೆ. ಕಾಡಿನಲ್ಲಿ ವನ್ಯಜೀವಿಗಳಿಗೆ ನೀರು, ಆಹಾರದ ಕೊರತೆ ಆಗದಂತೆ ನೋಡಿಕೊಳ್ಳುತ್ತಿದ್ದೇವೆ. ಸಿಬ್ಬಂದಿ ನೇಮಕಾತಿ ಮಾಡುತ್ತಿದ್ದೇವೆ. ಕಮಾಂಡ್ ಸೆಂಟರ್ ಆರಂಭಿಸಿದ್ದೇವೆ ಎಂದರು.

**ಚಾರಣ ಎಸ್.ಓ.ಪಿ. ಕಟ್ಟುನಿಟ್ಟಿನ ಜಾರಿಗೆ–ಈಶ್ವರ ಖಂಡ್ರೆ ಸೂಚನೆ:** ತಮ್ಮ ಸೂಚನೆಯಂತೆ ಇತ್ತೀಚೆಗೆ ಇಲಾಖೆ ಸಿದ್ಧಪಡಿಸಿರುವ ಚಾರಣಿಗರ ಸುರಕ್ಷತೆಯ ಪ್ರಮಾಣಿತ ಕಾರ್ಯಾಚರಣೆ ವಿಧಾನ (ಎಸ್.ಓ.ಪಿ.)ಯ ಕಟ್ಟುನಿಟ್ಟಿನ ಪಾಲನೆಗೆ ಸೂಚನೆ ನೀಡಿದ ಸಚಿವರು, ಇದೇ ಸಂದರ್ಭದಲ್ಲಿ ಟ್ರೆಕ್ ಪಾಸ್ ಪೋರ್ಟ್ ಮತ್ತು ಟ್ರೆಕ್ ಗೈಡ್ ಕೈಪಿಡಿ ಹಾಗೂ ಚಾರಣದಲ್ಲಿ ಭಾಗಿಯಾಗುವ ಪ್ರಕೃತಿ ಮಾರ್ಗದರ್ಶಕರಿಗೆ ಪ್ರಥಮ ಚಿಕಿತ್ಸೆಯ ಕಿಟ್ ಅನ್ನು ವಿತರಿಸಿದರು.

ಕುದುರೆಮುಖ ವನ್ಯಜೀವಿ ವಲಯದ ವ್ಯಾಪ್ತಿಯಲ್ಲಿನ ಶೋಲಾ ಸಫಾರಿಗಾಗಿ ಕ್ಯಾಂಪರ್ ವಾಹನಕ್ಕೂ ಚಾಲನೆ ನೀಡಿದರು. ಚಾರಣಿಗರ ಅನುಕೂಲಕ್ಕಾಗಿ ಕೈಪಿಡಿಯನ್ನೂ ಬಿಡುಗಡೆ ಮಾಡಿದರು.

ರಾಜ್ಯದಲ್ಲಿ ಕಳೆದ 3 ವರ್ಷದಲ್ಲಿ 11 ಕೋಟಿ ಸಸಿಗಳನ್ನು ನೆಟ್ಟು ಬೆಳೆಸಲಾಗಿದೆ. ಅರಣ್ಯ ಒತ್ತುವರಿಯನ್ನು ತೆರವು ಮಾಡಲು ಆದ್ಯತೆ ನೀಡಲಾಗಿದ್ದು ಸಾವಿರಾರು ಕೋಟಿ ರೂ. ಬೆಲೆ ಬಾಳುವ ಅರಣ್ಯ ಒತ್ತುವರಿಯನ್ನು ಹಂತ ಹಂತವಾಗಿ ತೆರವು ಮಾಡಿಸಲಾಗುತ್ತಿದೆ ಎಂದರು.

**ಮಾಲಿನ್ಯ ತಡೆಗೆ ಕ್ರಮ:** ಕುಡಿಯುವ ನೀರು ಪೂರೈಸುವ ಮೂಲಗಳಿಗೆ ತ್ಯಾಜ್ಯಜಲ ಸೇರದಂತೆ ಕ್ರಮ ವಹಿಸಲು ಸೂಚಿಸಲಾಗಿದೆ ಎಂದು ತಿಳಿಸಿದ ಸಚಿವರು, ಜಲ ಕಾಯಿದೆಯ ನಿಯಮಗಳ ಅಡಿ ಸಂಸ್ಕರಿಸದೆ ತ್ಯಾಜ್ಯವನ್ನು ಜಲಮೂಲಗಳಿಗೆ ಹರಿಸುವವರಿಗೆ ನೋಟಿಸ್ ನೀಡಲು ಆದೇಶಿಸಲಾಗಿದೆ ಎಂದರು.

ಬಡ ರೈತರ ಶೋಷಣೆ ಆಗದ ರೀತಿಯಲ್ಲಿ ಸೆಕ್ಷನ್ 4 ಮತ್ತು ಡೀಮ್ಡ್ ಅರಣ್ಯದ ಬಗ್ಗೆ ಅಧಿಕಾರಿಗಳು ಕ್ರಮ ವಹಿಸಬೇಕು ಎಂದರು.

ಶಾಸಕ ವೇದವ್ಯಾಸ ಕಾಮತ್ ಅವರು ಅಧ್ಯಕ್ಷತೆ ವಹಿಸಿದ್ದ ಕಾರ್ಯಕ್ರಮದಲ್ಲಿ ಶಾಸಕರುಗಳಾದ ರಾಜೇಗೌಡ, ಅಶೋಕ್ ಕುಮಾರ್ ರೈ, ಕರ್ನಾಟಕ ಗೇರು ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಮಮತಾ ಡಿ.ಎಸ್. ಗಟ್ಟಿ, ಮಾಜಿ ಸಚಿವ ರಮಾನಾಥ ರೈ ಮತ್ತಿತರರು ಪಾಲ್ಗೊಂಡಿದ್ದರು.

## 844 ಕೋಟಿ ರೂಪಾಯಿ ನಿವ್ವಳ ಲಾಭ



**ಲಿಂಗಸುಗೂರು:** ತಾಲೂಕಿನ ಪ್ರತಿಷ್ಠಿತ ಹಟ್ಟಿ ಚಿನ್ನದ ಗಣಿ ಕಂಪನಿ 2025–26ನೇ ಸಾಲಿನಲ್ಲಿ 1,691.50 ಕೆ.ಜಿ ಚಿನ್ನ ಉತ್ಪಾದಿಸಿ, ಇದೇ ಮೊದಲ ಬಾರಿಗೆ ರೂ.1,910 ಕೋಟಿ ವಹಿವಾಟು ನಡೆಸಿ, ರೂ.844 ಕೋಟಿ ನಿವ್ವಳ ಲಾಭ ಗಳಿಸಿದೆ.

ಹಿನ್ನೆಲೆಯಲ್ಲಿ ಹಟ್ಟಿ ಚಿನ್ನದ ಗಣಿ ಕಂಪನಿಯ ಅಧ್ಯಕ್ಷರಾದ ಶಾಸಕ ಜೆ.ಟಿ ಪಾಟೀಲ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಅಭಿನಂದಿಸಿ, ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಗೃಹ ಸಚಿವರಾದ ಡಾ.ಜಿ.ಪರಮೇಶ್ವರ, ಹಟ್ಟಿ ಚಿನ್ನದ ಗಣಿಯ ವ್ಯವಸ್ಥಾಪಕ ನಿರ್ದೇಶಕಿಯಾದ ಆರ್.ಶಿಲ್ಪಾ, ಅವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಲೋಕಾಯುಕ್ತ ಇಲಾಖೆಗೆ ವರ್ಗಾವಣೆಗೊಂಡ ಶಿವಾನಂದ ಪವಾಡಶೆಟ್ಟಿಗೆ ಸನ್ಮಾನ



**ಭಾಲ್ಕಿ:** ಇಲ್ಲಿಯ ಹಿರೇಮಠ ಸಂಸ್ಥಾನದಲ್ಲಿ ಉಪ ಪೊಲೀಸ್ ವರಿಷ್ಠಾಧಿಕಾರಿ (ಡಿವೈಎಸ್ಪಿ) ಆಗಿ ಸೇವೆ ಸಲ್ಲಿಸಿ ಲೋಕಾಯುಕ್ತ ಇಲಾಖೆಗೆ ವರ್ಗಾವಣೆಗೊಂಡ ಶಿವಾನಂದ ಪವಾಡಶೆಟ್ಟಿ ದಂಪತಿಗಳನ್ನು ಶನಿವಾರ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಸನ್ಮಾನಿಸಿ, ಆಶೀರ್ವದಿಸಿದರು.

ಸನ್ಮಾನ ಸ್ವೀಕರಿಸಿದ ಶಿವಾನಂದ ಪವಾಡಶೆಟ್ಟಿ ಮಾತನಾಡಿ, ಗಡಿಭಾಗದಲ್ಲಿ ಶರಣರು ನಡೆದಾಡಿದ ಭೂಮಿಯಲ್ಲಿ ಸೇವೆ ಸಲ್ಲಿಸಲು ಅವಕಾಶ ಸಿಕ್ಕಿರುವುದು ನನ್ನ ಪುಣ್ಯವೆಂದು ಭಾವಿಸಿದ್ದೇನೆ.

ಸೇವೆಯುದ್ದಕ್ಕೂ ಈ ಭಾಗದ ಜನರು ತೋರಿರುವ ಪ್ರೀತಿ, ವಿಶ್ವಾಸ ಎಂದಿಗೂ ಮರೆಯುವುದಿಲ್ಲ. ಎಲ್ಲರ ಸಹಕಾರದಿಂದ ಎರಡುವರೇ ವರ್ಷಗಳ ಕಾಲ ಸೇವೆ ಸಲ್ಲಿಸಿದ್ದು ತೃಪ್ತಿ ತಂದಿದೆ ಎಂದು ತಿಳಿಸಿದರು.

ಸಾನ್ನಿಧ್ಯ ವಹಿಸಿದ್ದ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಮಾತನಾಡಿ, ಈ ಭಾಗದಲ್ಲಿ ಸುಮಾರು ಮೂರು ವರ್ಷಗಳ ಕಾಲ ಡಿವೈಎಸ್ಪಿಯಾಗಿ ಶಿವಾನಂದ ಪವಾಡಶೆಟ್ಟಿ ಉತ್ತಮವಾಗಿ ಸೇವೆ ಸಲ್ಲಿಸಿದ್ದಾರೆ. ಇದೀಗ ಲೋಕಾಯುಕ್ತ ಇಲಾಖೆಗೆ ವರ್ಗಾವಣೆಗೊಂಡಿರುವ ಅವರು ಅಲ್ಲಿಯು ಉತ್ತಮ ಸೇವೆ ಸಲ್ಲಿಸಿ ಆ ಇಲಾಖೆಗೆ ಇನ್ನಷ್ಟು ಗೌರವ ತಂದು ಕೊಡುವ ವಿಶ್ವಾಸ ತಮಗಿದೆ. ಉತ್ತಮ ಆರೋಗ್ಯ ಕಾಪಾಡಿಕೊಂಡು ಜನರಿಗೆ ಒಳ್ಳೆಯ ಸೇವೆ ಒದಗಿಸಲಿ ಎಂದು ಹಾರೈಸಿದರು. ಈ ಸಂದರ್ಭದಲ್ಲಿ ಗುರುಪ್ರಸಾದ ಪ್ರೌಢ ಶಾಲೆಯ



**ಈ ಭಾಗದಲ್ಲಿ ಡಿವೈಎಸ್ಪಿ ಆಗಿ ಶಿವಾನಂದ ಪವಾಡಶೆಟ್ಟಿ ಅವರು ಉತ್ತಮವಾಗಿ ಸೇವೆ ಸಲ್ಲಿಸಿದ್ದಾರೆ. ಸೇವೆಯುದ್ದಕ್ಕೂ ಪ್ರಾಮಾಣಿಕವಾಗಿ ಕರ್ತವ್ಯ ನಿರ್ವಹಿಸಿ ಎಲ್ಲರಿಗೂ ನ್ಯಾಯ ಒದಗಿಸುವ ಪ್ರಯತ್ನ ಮಾಡಿದ್ದಾರೆ. ಮುಂದೆ ಲೋಕಾಯುಕ್ತ ಇಲಾಖೆಯಲ್ಲಿಯು ಕೂಡ ಒಳ್ಳೆಯ ಸೇವೆ ಸಲ್ಲಿಸಲಿ.**

**–ಗುರುಬಸವ ಪಟ್ಟದ್ದೇವರು, ಹಿರೇಮಠ ಸಂಸ್ಥಾನ ಭಾಲ್ಕಿ**

## ವಿವಿ ಹೊರಗುತ್ತಿಗೆ ನೌಕರರ ನ್ಯಾಯಕ್ಕೆ ಆಗ್ರಹ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಗುಲಬರ್ಗಾ ವಿಶ್ವವಿದ್ಯಾಲಯದಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಯನ್ನು ಮತ್ತೆ ಮುಂದುವರಿಸಿ ನ್ಯಾಯ ಒದಗಿಸಬೇಕೆಂದು ಬಿಜೆಪಿ ಯುವ ಮೋರ್ಚಾ ಮುಖಂಡ ಶಿವ ಅಷ್ಟಗಿ ಆಡಳಿತ ಮಂಡಳಿಗೆ ಆಗ್ರಹಿಸಿದ್ದಾರೆ.

ಗುಲಬರ್ಗಾ ವಿಶ್ವವಿದ್ಯಾಲಯದ ಕಾರ್ಯಸೌಧದ ಮುಂಭಾಗದಲ್ಲಿ ಕಳೆದ 18 ದಿನಗಳಿಂದ ನೌಕರರ ಸಂಘ ನಡೆಸುತ್ತಿರುವ ಅನಿರ್ದಿಷ್ಟಾವಧಿ ಹೋರಾಟದ ಸ್ಥಳಕ್ಕೆ ಭೇಟಿ ನೀಡಿ ಮಾತನಾಡಿ ಕಳೆದ ಹಲವು ವರ್ಷಗಳಿಂದ ವಿಶ್ವವಿದ್ಯಾಲಯದಲ್ಲಿ ಸೇವೆ ಸಲ್ಲಿಸುತ್ತಿರುವ 281 ಹೊರಗುತ್ತಿಗೆ ಸಿಬ್ಬಂದಿಯನ್ನು ಏಪ್ರಿಲ್ 30 ರಂದು ಏಕಾಏಕಿ ಸೇವೆಯಿಂದ ಬಿಡುಗಡೆ ಮಾಡಿರುವ ಕ್ರಮವನ್ನು ಅವರು ತೀವ್ರವಾಗಿ ಖಂಡಿಸಿದರು.

ವಿಶ್ವವಿದ್ಯಾಲಯ ಆಡಳಿತ ಮಂಡಳಿಯ



ಈ ತುಘಲಕ್ ನಿರ್ಧಾರ ಅವೈಜ್ಞಾನಿಕ ಮತ್ತು ಅಮಾನವೀಯ ನಡೆಯಾಗಿದೆ. ಆಡಳಿತ ಮಂಡಳಿ ಈ ಕ್ರಮದಿಂದ ಅನೇಕ ಕುಟುಂಬಗಳು ಸಂಕಷ್ಟಕ್ಕೆ ಸಿಲುಕಿವೆ. ಹಲವು ವರ್ಷಗಳಿಂದ ಪ್ರಾಮಾಣಿಕವಾಗಿ ಸೇವೆ ಸಲ್ಲಿಸುತ್ತಿರುವ ನೌಕರರ ಬೇಡಿಕೆಗಳಿಗೆ ಮಾನವೀಯತೆ ಸ್ಪಂದನೆ ಇಲ್ಲದಂತಾಗಿದೆ. ನೌಕರರ ತಾಳ್ಮೆ ಪರೀಕ್ಷಿಸದೆ ಗಂಭೀರವಾಗಿ ಪರಿಗಣಿಸಿ ಸಮಸ್ಯೆ ಸರಿಪಡಿಸಬೇಕು ಎಂದು ಒತ್ತಾಯಿಸಿದರು.

## ರಿದಮ್ ಹೌಸ್ ಡ್ಯಾನ್ಸ್ ಸ್ಟುಡಿಯೋ

• **ಮಲ್ಲಮ್ಮ ನುಡಿ ವಾರ್ತೆ ಹುಣಸೂರು**

ನಗರದ ದಮ್ ಹೌಸ್ ಡ್ಯಾನ್ಸ್ ಸ್ಟುಡಿಯೋ, ಹ (ಹಳೆಯ ITI ಕಾಲೇಜ್ ಎದುರು) ಸಮರ್ ಕ್ಯಾಂಪ್ ಅನ್ನು ಶಿಬಿರ ಜ್ಯೋತಿ ಬೆಳಗಿಸುವ ಮೂಲಕ ಕಾರ್ಯಕ್ರಮವನ್ನು ಸಮರ್ ಕ್ಯಾಂಪ್‌ನ ತರಬೇತುದಾರರಾದ ಭಾರ್ಗವ್ (ಯೋಗ ಉದ್ಘಾಟಿಸಿದರು.

ಈ ಕಾರ್ಯಕ್ರಮಕ್ಕೆ ನಂತರ ಮಾತನಾಡಿ ರಿದಮ್ ಹೌಸ್ ಡ್ಯಾನ್ಸ್ ಸ್ಟುಡಿಯೋದ ವಿದ್ಯಾರ್ಥಿಗಳು ಜಿಲ್ಲೆ, ರಾಜ್ಯ ಹಾಗೂ ರಾಷ್ಟ್ರೀಯ ಮಟ್ಟಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿ, ಇದೀಗ ಅಂತರಾಷ್ಟ್ರೀಯ ಮಟ್ಟಕ್ಕೆ ಆಯ್ಕೆಯಾಗಿರುವುದು ನಮ್ಮೆಲ್ಲರಿಗೂ ಹೆಮ್ಮೆಯ ವಿಚಾರವಾಗಿದೆ.

ಮುಂದಿನ ಅಂತರಾಷ್ಟ್ರೀಯ ಸ್ಪರ್ಧೆಯು 2026ರ ಜೂನ್ 26ರಂದು ಮಲೇಶಿಯಾದಲ್ಲಿ ನಡೆಯಲಿದ್ದು, ನಮ್ಮ ವಿದ್ಯಾರ್ಥಿಗಳಿಗೆ ಹೃತ್ಪೂರ್ವಕ




ಶುಭಾಶಯಗಳು. ಹೇಳಿ ತಿಳಿಸಿದರು.

ಜಿಲ್ಲಾ ರೈತರ ಸಂಘದ ಅಧ್ಯಕ್ಷ ಹೊಸೂರು ಕುಮಾರ್ ಮಾತನಾಡಿದ್ದಾರೆ ಡಾ. ಸಂಗೀತಾ ಅಭಿಷೇಕ್ (ಚಿತ್ರಕಲೆ), ಪ್ರಸನ್ನ (ಕರಾಟೆ), ಮೃದಂಗ್ (ಭರತನಾಟ್ಯ) ಮತ್ತು ಸಿಂಚನಾ (ಗಾನ) ಭಾಗವಹಿಸಿ ದರು.

## ದೇವಾಲಯದ ಸರ್ವಾಂಗೀಣ ಅಭಿವೃದ್ಧಿಗಾಗಿ ಮನವಿ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಜಿಲ್ಲೆಯ ಲಕ್ಷಾಂತರ ಭಕ್ತರ ಭಕ್ತರ ಶ್ರದ್ಧೆಯ ಕ್ಷೇತ್ರವಾದ ಕಮಲಾಪೂರ ತಾಲ್ಲೂಕಿನ ಚಿಂಚೋಳಿ ಮತಕ್ಷೇತ್ರದ ವ್ಯಾಪ್ತಿಯಲ್ಲಿರುವ ಸುಕ್ಷೇತ್ರ ರೇವಗ್ಗಿ(ರಟಗಲ್ಲ) ಶ್ರೀ ಜಗದ್ಗುರು ರೇವಣಸಿದ್ದೇಶ್ವರ ದೇವಾಲಯದ ಸರ್ವಾಂಗೀಣ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರ ಶ್ರೀ ಜಗದ್ಗುರು ರೇವಣಸಿದ್ದೇಶ್ವರ ದೇವಾಲಯ ಅಭಿವೃದ್ಧಿ ಪ್ರಾಧಿಕಾರ ಮಾಡುವಂತೆ ಕೋರಿ ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಐಟಿ ಬಿಟಿ ಖಾತೆಯ ಸಚಿವರುರಾಗಿರುವ ಕಲಬುರಗಿ ಜಿಲ್ಲೆಯ ಉಸ್ತುವಾರಿ ಸಚಿವರುರಾದ ಮಾನ್ಯ ಶ್ರೀ ಪ್ರೀಯಾಂಕ ಖರ್ಗೆಜೀ ಅವರನ್ನು ಅಖಿಲ ಭಾರತ ವೀರಶೈವ – ಲಿಂಗಾಯತ ಮಹಾಸಭಾದ ಕಲಬುರಗಿ ಜಿಲ್ಲಾ ಘಟಕದ ಕಾರ್ಯದರ್ಶಿ ನಾಗಲಿಂಗಯ್ಯ ಮಠಪತಿ ಅವರು ಮನವಿ ಸಲ್ಲಿಸಿದರು.



ಪ್ರಾಚೀನ ಪರಂಪರೆಯ ಹಿನ್ನೆಲೆಯ ಭವ್ಯ ಇತಿಹಾಸ ಹೊಂದಿರುವ ರೇವಗ್ಗಿ ಪ್ರಸಿದ್ಧ ಧಾರ್ಮಿಕ ಕ್ಷೇತ್ರವಾಗಿದ್ದು ಕರ್ನಾಟಕ ರಾಜ್ಯ ಸೇರಿದಂತೆ ಆಂಧ್ರಪ್ರದೇಶ. ತೆಲಂಗಾಣ. ಮಹಾರಾಷ್ಟ್ರ ಸೇರಿದಂತೆ ದಕ್ಷಿಣ ಭಾರತದಾದ್ಯಂತ ಭಕ್ತ ಸಮೂಹ ಹೊಂದಿದ್ದು ಪವಿತ್ರ ಶ್ರಾವಣ ಮಾಸ ಸೇರಿದಂತೆ ಹಬ್ಬ ಹರಿದಿನಗಳಲ್ಲಿ ಪಲ್ಲಕ್ಕಿ ಉತ್ಸವ ರಥೋತ್ಸವ ಸಂದರ್ಭದಲ್ಲಿ ಲಕ್ಷಾಂತರ ಭಕ್ತರು ಶ್ರೀ ಜಗದ್ಗುರು ರೇವಣಸಿದ್ದೇಶ್ವರ ದರ್ಶನ ಆಶೀರ್ವಾದಕ್ಕಾಗಿ ಧಾರ್ಮಿಕ ಯಾತ್ರೆ ಕೈಗೊಳ್ಳುತ್ತಾರೆ.

ಶ್ರೀ ಕ್ಷೇತ್ರದಲ್ಲಿ ಸುಸಜ್ಜಿತ ಕೋಣೆಗಳು ಶುದ್ಧವಾದ ಕುಡಿಯುವ ನೀರಿನ ವ್ಯವಸ್ಥೆ ಸೇರಿದಂತೆ ಭಕ್ತರಿಗೆ ಮೂಲ ಸೌಕರ್ಯಗಳು ಇಲ್ಲದೇ ಇರುವುದರಿಂದ ಜನತೆ ಪರದಾಡುವಂತಾಗಿದೆ.

ಕರ್ನಾಟಕ ರಾಜ್ಯ ಸರ್ಕಾರದ ಮುಜರಾಯಿ ಧಾರ್ಮಿಕ ದತ್ತಿ ಇಲಾಖೆಯ ಅಡಿಯಲ್ಲಿರುವ ಈ ದೇವಾಲಯ ಕಲಬುರುಗಿಯ ಜಿಲ್ಲೆಯಲ್ಲಿ ಎ ಗ್ರೇಡ್ ದೇವಾಲಯವಾಗಿದ್ದು ಪ್ರತಿವರ್ಷ ಲಕ್ಷಾಂತರ ರೂಪಾಯಿ ಆದಾಯ ಹೊಂದಿದೆ.

ಶ್ರೀ ಜಗದ್ಗುರು ರೇವಣಸಿದ್ದೇಶ್ವರ ದೇವಾಲಯದ ಸಮಗ್ರ ಅಭಿವೃದ್ಧಿ ಜೊತೆಗೆ ದೇವಾಲಯ ಬೆಟ್ಟದ ಪರಿಸರ ಹೊಂದಿದ್ದು ಪ್ರವಾಸಿ ತಾಣವನ್ನಾಗಿ ರೂಪಿಸ ಬಹುದು ಎಂದು ಸಚಿವರ ಗಮನಕ್ಕೆ ತರಲಾಯಿತು.

ಮನವಿ ಸ್ವೀಕರಿಸಿದ ಸಚಿವರು ಅತ್ಯಂತ ಸಕಾರಾತ್ಮಕವಾಗಿ ಸ್ಪಂದಿಸಿ ಶ್ರೀಕ್ಷೇತ್ರದ ಅಭಿವೃದ್ಧಿಯ ದೃಷ್ಟಿಯಿಂದ ಕ್ರಮ ಕೈಗೊಳ್ಳುವ ಭರವಸೆ ನೀಡಿದರು

ಈ ಸಂದರ್ಭದಲ್ಲಿ ಕಲಬುರಗಿ ಜಿಲ್ಲೆಯ ವೀರಶೈವ ಲಿಂಗಾಯತ ಸಮಾಜದ ಮುಖಂಡರುರಾಗಿರುವ ಮಾಜಿ ಜಿಲ್ಲಾ ಪಂಚಾಯತ್ ಸದಸ್ಯರಾದ ಶ್ರೀ ಶರಣಗೌಡ ಪಾಟೀಲ.ಮುಖಂಡರಾದ ಶ್ರೀ ಸಂಜುಕುಮಾರ ಶೆಟ್ಟಿ. ಸಾಗರ ಜೈನ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಶರಣರ ಉಪವಾಸ–ಸೂಫಿಗಳ ರೋಜಾ



**ಧರ್ಮ–ಮರ್ಮ**

**ಡಾ.ಎಂ.ಮಹ್ಮದ್ ಬಾಷ ಗೂಳ್ಯಂ**

**ಪ್ರಧಾನ ಸಂಪಾದಕ, ಬೆಂಗಳೂರು**

**ಕಳೆದ ಸಂಚಿಕೆಯಿಂದ...**

**‘ಹೊತ್ತಾರೆ ಎದ್ದು ಕಣ್ಣ ಹೊಸೆಯುತ್ತ, ಎನ್ನ ಒಡಲಿಂಗೆ, ಎನ್ನೊಡವೆಗೆ ಎನ್ನಮಡದಿ, ಮಕ್ಕಳಿಗೆಂದು ಕುದಿದೆನಾದರೆ ಎನ್ನ ಮನಕ್ಕೆ ಮನವೇ ಸಾಕ್ಷಿ,’**

**‘ಸಲೆ ಕೈ ಕೂಲಿಯ ಮಾಡಿಯಾದರೆಯೂ ನಿಮ್ಮ ನಿಲುವಿಂಗೆ ಕುದಿವೆನಲ್ಲದೆ, ಎನ್ನೊಡಲವಸರಕ್ಕೆ ಕುದಿದೆನಾದರೆ, ತಲೆ ದಂಡ ಕೂಡಲ ಸಂಗಮದೇವ,’**

ಕಾಯಕದ ಪ್ರಾಪ್ತಿ ಕೇವಲ ಮಡದಿ ಮಕ್ಕಳನ್ನು ಸಲುವಲಿಕ್ಕೆ ಮಾತ್ರವಲ್ಲ, ದೀನ ದರಿದ್ರರಿಗೆ ಮತ್ತು ಗುರುಲಿಂಗ ಜಂಗಮಕ್ಕೆ ರ್ಪಿಸುವ ಸತ್ಕಾರ್ಯಗಳಲ್ಲಿ ತೊಡಗಿಸುತ್ತಾರೆ. ಶಿವಶರಣರ ಕಾಯಕದಲ್ಲೂ ಸೂಫಿಗಳ ‘ಹಲಾಲ’ತತ್ತ್ವದಲ್ಲೂ ಸಾಮಿಪ್ಯವಿದೆ. ಬೆಳಗ್ಗೆದ್ದು ಹೊಟ್ಟೆ ಪಾಡಿಗಾಗಿ ಎಲ್ಲರೂ ಬಡಿದಾಡುವುದು, ಪಕ್ಷಿಗಳು ಕಾಳು, ಹುಳುಗಳ ಹುಡುಕಾಟದಲ್ಲಿ ತೊಡಗುವುದು, ದನಗಳು, ಮೇಯಲು ಹುಲ್ಲು ಗಾವಲು ಹುಡುಕುವುದು ಸಹಜ ಗುಣ. ಕೇವಲ ಹೆಂಡರು ಮಕ್ಕಳಿಗಾಗಿ ದುಡಿದು ಶರಣರ ಗುಣವಲ್ಲ, ತನು ಬಳಲಿಸಿ, ಕಾಯಕರಗಿಸಿ ಬಂದ ಫಲವು ಗುರುಲಿಂಗ ಜಂಗಮಕ್ಕೆ ಅರ್ಪಿತವಾಗಿರಬೇಕು.



ಅದು ಇಂಥದೇ ದುಡುಮೆಯಂತಲ್ಲ ಹೊಲೆಯರ ಮನೆಯ ಕೈಗೂಲಿಯಾದರೂ ಸೈ ಜಂಗಮ ದಾಸೋಹಕ್ಕರ್ಪಿತವಾಗಬೇಕು. ಜೇಡರದಾಸಿಮಯ್ಯನ ಹಿಂದೆ ದೊಡ್ಡ ಶಿಷ್ಯರ ಬಳಗ ಮತ್ತು ಮಠಗಳನ್ನು ಆಶ್ರಮಗಳನ್ನು ಸ್ಥಾಪಿಸಿಗೊಂಡಿದ್ದ, ಮೇಲಾಗಿ ಜಯಸಿಂಹ, ದುಗ್ಗಳೆಯರಂಥ ಅರಸು ದಂಪತಿಗಳು ಆತನ ಶಿಷ್ಯತ್ವವನ್ನು ವಹಿಸಿಕೊಂಡಿರುವುದು ಇತಿಹಾಸ. ಶಿಷ್ಯ ಕೋಟಿಯಲ್ಲಿ ಮೆರೆಯುತ್ತ ಉಂಡು ತಿಂದು ಹಾಯಾಗಿರಬಹುದಾಗಿತ್ತು. ದಾಸಿ ಮಯ್ಯ ಹಾಗೆ ಮಾಡಲಿಲ್ಲ. ನೇಯ್ಗೆಯ ಕಾಯಕವನ್ನು ಕೈಗೊಂಡ ಈ ಕಾಯಕ ಕೇವಲ ಮಡದಿ ಮಕ್ಕಳನ್ನು ಪೋಷಿಸಲಿಲ್ಲ. ಜನತೆ ಜಂಗಮ ಜನಾರ್ಧನರನ್ನು ಸಂತೈಸಲಿಕ್ಕೆ, ಇಳೆ ನಿಮ್ಮ ದಾನ, ಬೆಳೆ ನಿಮ್ಮ ದಾನ, ನಿನ್ನದು ನಿನಗರ್ಪಿತ ದಾಸಿಮಾರ್ಯನ ಕಾಯಕ ಲಿಂಗಕ್ಕೆ ಜಂಗಮಕ್ಕೆ, ಎನ್ನುವ ಸಾಲು ಕಾಯಕ ಹಾಗೂ ದಾಸೋಹದ ಸ್ಪಷ್ಟ ಕಲ್ಪನೆಗೆ ಅಕರ ಒದಗಿಸುತ್ತವೆ. ಶಿವಜ್ಞಾನ ಸಂಪನ್ನನೇ ಜಂಗಮನು, ಸಾಕ್ಷಾತ್ ಶಿವಸ್ವರೂಪಿ. ಶಿವಯೋಗಿಗೆ ಭಿಕ್ಷೆಯನ್ನು ನೀಡುವುದರಿಂದ ಫಲದೊರಕುವುದು, ಶಿವಯೋಗಿಯು ತೃಪ್ತನಾದರೆ ಶಿವನು ತೃಪ್ತನಾಗುವನು. ಶಿವನು ತೃಪ್ತಿಯಿಂದ ಶಿವಸ್ವರೂಪವಾದ ಚರಚರಾತ್ಮಕ ಜಗತ್ತು ತೃಪ್ತಿಯನ್ನು ಹೊಂದುವುದು ಎಂದಾದರೆ, ಸೂಫಿಗಳ ಕಾಕತತ್ತ್ವವು ಕೂಡ ಕಟ್ಟುನಿಟ್ಟಿನಿಂದ ಪಾಲಿಸುವ ಕುರಾನ್ ಆಧಾರಿತ ವಾದ ‘ಹಲಾಲ್’ ಆಕ್ರಮ ಸಂಪದಾನೆಯನ್ನು ನಿಷೇಧಿಸುತ್ತದೆ. ಸತ್ಯ ಮತ್ತು ಶುದ್ಧ, ಪ್ರಾಮಾಣಿಕವಾದ ಸಂಪತ್ತನ್ನು ಝಖಾತ್(ದಾನ), ಇನ್‌ಫಾಕ್‌ಗಳಂಥ ಸತ್ಕಾರ್ಯಗಳಲ್ಲಿ ವಿನಿಯೋಗಿಸಿಕೊಳ್ಳುವುದನ್ನು ಪ್ರೇರೇಪಿಸುತ್ತದೆ.

**ಶರಣರ ಉಪವಾಸ–ಸೂಫಿಗಳ ರೋಜಾ**

ಶಿವಶರಣರಿಗೆ ಶ್ರಾವಣಮಾಸವು ಪವಿತ್ರ. ಅದೇ ರಿತಿ ಸೂಫಿಸಂತರಿಗೆ ರಂಝಾನ್ ತಿಂಗಳು. ಈ ತಿಂಗಳಲ್ಲಿ ಮಾಡುವ ಉಪವಾಸ ವ್ರತವನ್ನು ರೋಜಾ ಎಂದು ಕರೆಯುತ್ತಾರೆ. ಉಪವೆಂದರೆ ಹತ್ತಿರ, ವಾಸವೆಂದರೆ ಅಸ್ತಿತ್ವ, ಹಬ್ಬ ಹರಿದಿನಗಳಲ್ಲಿ ದೇವರ ಸ್ಮರಣೆ ನಿಮಿತ್ತ ಆಹಾರ ಸೇವಿಸದೇ ಇರುವುದು. ದೇವರ ಸಮೀಪವಿರುವುದೆಂಬ ಗಂಭೀರ ಅರ್ಥವೂ ಉಂಟು. ಉಪವಾಸ, ನಿರಾಹಾರ ವ್ರತಗಳಾಗಿ, ನೋಂಪಿಯಾಗಿ ಆಚರಿಸಲ್ಪಡುತ್ತದೆ. ಶಿವರಾತ್ರಿ ಹಬ್ಬದಂದು ಶಿವಭಕ್ತರು ಉಪವಾಸ ಮಾಡುತ್ತಾರೆ. ವೈಷ್ಣವರು ಆಷಾಢ ಏಕಾದಶಿಯಂದು ಉಪವಾಸ ವೃತವನ್ನಾಚರಿಸುತ್ತಾರೆ. ವೀರಶೈವ ಶಿವಶರಣರು ಶ್ರಾವಣಮಾಸದಲ್ಲಿ ಉಪವಾಸ ವ್ರತ ಕೈಗೊಳ್ಳುತ್ತಾರೆ. ರೋಜಾ ವ್ರತವನ್ನು ಪವಿತ್ರ ಕುರಾನಿನಲ್ಲಿ ಉಲ್ಲೇಖಿಸಿದ್ದು, ಮಾನವರಿಗೆ ಸನ್ಮಾರ್ಗ, ಮಾರ್ಗದರ್ಶಕ ಮತ್ತು ಸತ್ಯಾಸತ್ಯಗಳಲ್ಲಿರುವ ಅಂತರವನ್ನು ಸುವ್ಯಕ್ತವಾಗಿ ತಿಳಿಸುವ ಶಿಕ್ಷಣಗಳನ್ನೊಳಗೊಂಡಿರುವ ‘ಖುರ್ ಆನ್’ ಅವತೀರ್ಣ ಗೊಂಡ ತಿಂಗಳೇ ರಂಝಾನ್. ಬಹುತೇಕ ಮುಸ್ಲಿಮರು, ಪವಿತ್ರ ಖುರಾನಿನ ತಾತ್ವಿಕ ಬೋಧಾನಮಯ ವಿವೇಚನೆ ಮೇರೆಗೆ ಸೂಫಿಗಳು ರೋಜಾ ವ್ರತವನ್ನು ಆಚರಿಸುತ್ತಾರೆ. ಭಾರತಕ್ಕೆ ಬಂದ ಸೂಫಿಗಳು ರಂಝಾನಿನಲ್ಲಿ ಆಚರಿಸುವ ಉಪವಾಸ ವ್ರತವನ್ನು ಲಂಘನವೆಂದು ಕರೆದಿರುವುದಕ್ಕೆ ದಾಖಲೆಗಳಿವೆ. ಉದಾಹರಣೆಗೆ ಪ್ರಸಿದ್ಧ ಸೂಫಿ ಸಂತ ಹಜರತ್ ನಿಜಾಮೂದ್ದೀನ್‌ರ ಫಾರಸಿ ಪದ್ಯದ ಈ ಸಾಲು ಸ್ಮರಣೀಯ; ‘ಲಂಘನ್ತಗರ್ ತುರಾ ಕುಂದ್ ಫರ ಬಾ/ ಸೀರ ಖುರದನ್ ತುರಾ ಜಲಂಘನ್’ ಅಂ–ದರೆ; ಉಣ್ಣುವ ತಿನ್ನುವುದನ್ನು ಬಿಟ್ಟು ನೀನು ದಪ್ಪ ಬೆಳೆಯುತ್ತಿದರೆ ಹೊಟ್ಟೆಯ ತುಂಬ ಉಣ್ಣುವುದೇ ಲೇಸು. ನಿನ್ನ ಚಂಚಲವಾದ ಚಿತ್ತವನ್ನು ಬಲಿಯದಂತೆ ನೋಡಿಕೊ. ಪಶುವೃತ್ತಿಕಾಯ ಪ್ರವೃತ್ತಿಗಳನ್ನು ನಿಯಂತ್ರಿಸುವುದೇ ಲಂಘನ (ರೋಜಾ)ದ ಉದ್ದೇಶ. ಇವುಗಳನ್ನು ನಿಯಂತ್ರಿಸದೇ ರೋಜಾವ್ರತ ಮಾಡಿದರೇನು ಫಲವೆಂಬುದೇ ಮೇಲಿನ ಪದ್ಯದ ಸಾಲುಗಳ ಇಂಗಿತಾರ್ಥ.

**ಮುಂದುವರೆಯುವುದು...**

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)